ಸಂಪುಟ: 05 ಸಂಚಿಕೆ: 270 ಪುಟಗಳು: 08 ಭಾನುವಾರ 14 ಡಿಸೆಂಬರ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

ಮುಂಜಾನೆ ಮಾತು
ನಿನ್ನ ನಂಬಿದವರನ್ನು ಎಂದಿಗೂ ಮೋಸ ಮಾಡಬೇಡ, ಸಹಾಯ ಮಾಡಿದರವರನ್ನು ಮರೆಯಬೇಡ, ಮನೆ ಬಾಗಿಲಿಗೆ ಬಂದವರನ್ನು ಅವಮಾನ ಮಾಡಬೇಡ

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಕನ್ನಡಪರ ಹೋರಾಟಗಾರರ ವಿರುದ್ಧ 81 ಪ್ರಕರಣ ದಾಖಲು

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ರೈತರು ಮತ್ತು ಕನ್ನಡ ಪರ ಹೋರಾಟಗಾರರ ವಿರುದ್ಧ ಕಳೆದ 3 ವರ್ಷಗಳಲ್ಲಿ 81 ಪ್ರಕರಣಗಳು ದಾಖಲಾಗಿವೆ. ಈ ಪೈಕಿ ರೈತರ ವಿರುದ್ಧ 40 ಹಾಗೂ ಕನ್ನಡ ಪರ ಹೋರಾಟಗಾರರ ವಿರುದ್ಧ 41 ಪ್ರಕರಣ ದಾಖಲಾಗಿವೆ. ವಿಧಾನಪರಿಷತ್ ಸದಸ್ಯ ಸಿಟಿ ರವಿ ಅವರು ಈ ಕುರಿತಾಗಿ ಚುಕ್ಕೆ ಗುರುತ್ತಿಲ್ಲದ ಪ್ರಶ್ನೆಯನ್ನು ಕೇಳಿದ್ದರು. ಇದಕ್ಕೆ ಉತ್ತರ ನೀಡಿರುವ ಗೃಹ ಇಲಾಖೆ ರೈತರ ಹಾಗೂ ಕನ್ನಡ ಪರ ಹೋರಾಟಗಾರರ ವಿರುದ್ಧ ದಾಖಲಾಗಿರುವ ಪ್ರಕರಣಗಳು ಹಾಗೂ ಅವುಗಳ ಪ್ರಸ್ತುತ ಸ್ಥಿತಿ ಗತಿ ಮತ್ತು ಪ್ರಕರಣ ವಾಪಸ್ ಪಡೆಯುವ ನಿಟ್ಟಿನಲ್ಲಿ ಸರ್ಕಾರದ ನಿಲುವಿನ ಬಗ್ಗೆ ತಿಳಿಸಿದೆ. ನಮ್ಮದು ರೈತರ ಪರವಾದ ಸರ್ಕಾರ ಎನ್ನುತ್ತಿರುವ ಸಿಎಂ ಸಿದ್ದರಾಮಯ್ಯ ನೇತೃತ್ವದ ಸರ್ಕಾರದಲ್ಲಿ ಪೊಲೀಸ್ ಇಲಾಖೆ ರೈತರ ವಿರುದ್ಧ 40 ಪ್ರಕರಣ ದಾಖಲು ಮಾಡಿದೆ. ಇನ್ನು ಕನ್ನಡ ಭಾಷೆಗಾಗಿ ಹೋರಾಟ ನಡೆಸುತ್ತಿರುವ ಕನ್ನಡ ಪರ ಹೋರಾಟಗಾರರ ವಿರುದ್ಧವೂ ಹಲವು ಪ್ರಕರಣಗಳನ್ನು ದಾಖಲು ಮಾಡಿದೆ.

ಕೋಮು ಗಲಭೆ: 2 ವರ್ಷಗಳಲ್ಲಿ 41 ಪ್ರಕರಣಗಳು ದಾಖಲು

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಗಣೇಶ ಹಬ್ಬದ ಸಂದರ್ಭದಲ್ಲಿ ನಡೆದ ಕೋಮು ಸಂಘರ್ಷಕ್ಕೆ ಸಂಬಂಧಿಸಿದಂತೆ ಎರಡು ವರ್ಷಗಳಲ್ಲಿ 41 ಪ್ರಕರಣ ದಾಖಲಾಗಿದೆ. ಈ ಪೈಕಿ ಮಂಡ್ಯ ಮತ್ತು ದಾವಣಗೆರೆ ಜಿಲ್ಲೆಯಲ್ಲಿ ಹೆಚ್ಚಿನ ಪ್ರಕರಣ ದಾಖಲಾಗಿದೆ. ಇತ್ತೀಚೆಗೆ ಮಂಡ್ಯ ಜಿಲ್ಲೆಯ ಮದ್ದೂರಿನಲ್ಲಿ ಗಣೇಶ ಮೆರವಣಿಗೆಯ ಸಂದರ್ಭದಲ್ಲಿ ಕೋಮು ಸಂಘರ್ಷ ನಡೆದಿತ್ತು. ಈ ಘಟನೆ ರಾಜಕೀಯವಾಗಿ ಭಾರೀ ಸದ್ದು ಮಾಡಿತ್ತು. ಆಡಳಿತ ಪಕ್ಷ ಕಾಂಗ್ರೇಸ್ ಹಾಗೂ ವಿಪಕ್ಷಗಳಾದ ಬಿಜೆಪಿ, ಜೆಡಿಎಸ್ ಆರೋಪ ಪ್ರತ್ಯಾರೋಪ ಮಾಡಿದ್ದವು. ಪ್ರಕರಣಕ್ಕೆ ಸಂಬಂಧಿಸಿದಂತೆ ಹಲವರ ಬಂಧನವೂ ಆಗಿತ್ತು. ಮದ್ದೂರು ಗಲಭೆ ಹಿನ್ನೆಲೆಯಲ್ಲಿ ಬಿಜೆಪಿ ಮತ್ತು ಜೆಡಿಎಸ್ ಜಂಟಿಯಾಗಿ ಮದ್ದೂರು ಚಲೋ ಹಮ್ಮಿಕೊಂಡಿದ್ದವು. ಮಸೀದಿ ಮುಂದೆ ಗಣೇಶನ ಮೆರವಣಿಗೆ ಹೋದ ಸಂದರ್ಭದಲ್ಲಿ ಗಲಭೆ, ಕಲ್ಲು ತೂರಾಟ ನಡೆದಿತ್ತು. ನಂತರದಲ್ಲಿ ಪೊಲೀಸರು ಪರಿಸ್ಥಿತಿ ನಿಯಂತ್ರಣ ಮಾಡಿದ್ದರು.

ಶಾಸಕ ವೀರೇಂದ್ರ ಪ್ರಕರಣ: ಇಡಿ ಅಧಿಕಾರ: ಸುಪ್ರೀಂ ಕೋರ್ಟ್ ಕಳವಳ

• ಉದಯವಾಹಿನಿ, ಬೆಂಗಳೂರು

ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ಅಡಿಯಲ್ಲಿ ನ್ಯಾಯಾಂಗ ಪರಿಶೀಲನೆಯಿಲ್ಲದೆ ಆಸ್ತಿ ವಶಪಡಿಸಿಕೊಳ್ಳುವ ಜಾರಿ ನಿರ್ದೇಶನಾಲಯದ (ಇ.ಡಿ) ಅಧಿಕಾರ ಪ್ರಶ್ನಿಸಿ ಚಿತ್ರದುರ್ಗದ ಕಾಂಗ್ರೇಸ್ ಶಾಸಕ ಕೆ.ಸಿ.ವೀರೇಂದ್ರ ಸಲ್ಲಿಸಿದ್ದ ವಿಶೇಷ ಮೇಲ್ಮನವಿ ಅರ್ಜಿಯ ಕುರಿತು ಪ್ರತಿಕ್ರಿಯೆ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಸುಪ್ರೀಂ ಕೋರ್ಟ್ ಸೂಚಿಸಿದೆ. ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಪಿ.ಎಸ್. ನರಸಿಂಹ ಮತ್ತು ಎ.ಎಸ್. ಚಂದೂರ್‌ಕರ್ ಅವರ ಪೀಠವು ನೋಟಿಸ್ ಜಾರಿಗೊಳಿಸಿದೆ. ಪಿಎಂಎಲ್‌ಎಯ ತೀರ್ಪಿನ ಸಾಂವಿಧಾನಿಕತೆ ಪ್ರಶ್ನಿಸಿ ಸಲ್ಲಿಕೆಯಾಗಿರುವ ಇತರ ಅರ್ಜಿಗಳ ಜತೆಗೆ ಈ ಅರ್ಜಿಯನ್ನು ಒಟ್ಟಿಗೆ ವಿಚಾರಣೆ ನಡೆಸಲಾಗುವುದು ಎಂದೂ ತಿಳಿಸಿದೆ. ನ್ಯಾಯಾಂಗೇತರ ಸದಸ್ಯರು ಆಸ್ತಿ ಹಕ್ಕುಗಳು ಮತ್ತು ಸಾಂವಿಧಾನಿಕ ರಕ್ಷಣೆಗಳನ್ನು ಒಳಗೊಂಡ ಸಂಕೀರ್ಣ ವಿಷಯಗಳ ಬಗ್ಗೆ ಹೇಗೆ ನಿರ್ಣಯ ತೆಗೆದುಕೊಳ್ಳಲು ಸಾಧ್ಯ' ಎಂದು ಪ್ರಶ್ನಿಸಿದರು.

ಶಾಲೆಗಳಿಗೆ ಕಂಪ್ಯೂಟರ್: 109 ಕೋಟಿ ನಷ್ಟ ಕ್ರಮಕ್ಕೆ ಶಿಫಾರಸು

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿನ ಸರ್ಕಾರಿ ಶಾಲೆಗಳಿಗೆ 2009-10ರಲ್ಲಿ (ಬಿಜೆಪಿ ಸರ್ಕಾರದ ಅವಧಿ) ಖರೀದಿಸಿದ್ದ ಕಂಪ್ಯೂಟರ್, ಯುಪಿಎಸ್ ಸೇರಿದಂತೆ ವಿವಿಧ ಎಲೆಕ್ಟ್ರಾನಿಕ್ ಉಪಕರಣಗಳಲ್ಲಿ 109.19 ಕೋಟಿ ಅವ್ಯವಹಾರ ನಡೆದಿದ್ದು, ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಸಿ.ಸಿ.ಪಾಟೀಲ ಅಧ್ಯಕ್ಷತೆಯ ವಿಧಾನಮಂಡಲದ ಸಾರ್ವಜನಿಕ ಲೆಕ್ಕಪತ್ರ ಸಮಿತಿ ಶಿಫಾರಸು ಮಾಡಿದೆ. ಅಂದಿನ ಸಾರ್ವಜನಿಕ ಶಿಕ್ಷಣ ಇಲಾಖೆಯ ವ್ಯವಹಾರಗಳ ಪರಿಶೋಧನೆ ನಡೆಸಿದ್ದ ಭಾರತೀಯ ಮಹಾಲೇಖಪಾಲರು (ಸಿಎಜಿ) 2013ರಲ್ಲಿ ಸಿದ್ಧಪಡಿಸಿದ್ದ ವರದಿಯಲ್ಲಿ, ಖರೀದಿಯಲ್ಲಾದ ಅವ್ಯವಹಾರಗಳ ಬಗ್ಗೆ ಉಲ್ಲೇಖಿಸಿದ್ದರು. ಅದನ್ನು ಪರಿಶೀಲಿಸಿದ್ದ ಸಾರ್ವಜನಿಕ ಲೆಕ್ಕಪತ್ರ ಸಮಿತಿ (ಪಿಎಸಿ), ಬೆಳಗಾವಿಯಲ್ಲಿ ನಡೆಯತ್ತಿರುವ ವಿಧಾನಮಂಡಲದಲ್ಲಿ ತನ್ನ ವರದಿಯನ್ನು ಮಂಡಿಸಿದೆ. ಸರ್ಕಾರಕ್ಕೆ ಆರ್ಥಿಕ ನಷ್ಟ ಮಾಡಿದ ಹಾಗೂ ಪ್ರಕರಣದ ತನಿಖೆ ನಡೆಸಲು ವಿಳಂಬ ಮಾಡಿ, ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆಗೊಳ್ಳದ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು' ಎಂದು ಪಿಎಸಿ ತನ್ನ ವರದಿಯಲ್ಲಿ ಶಿಫಾರಸು ಮಾಡಿದೆ. ಕೇಂದ್ರ ಸರ್ಕಾರದ ಪ್ರಾಯೋಜಿತ ಮಾಹಿತಿ ಸಂಪರ್ಕ ತಂತ್ರಜ್ಞಾನ ಘಟ್ಟ-3 (ಐಸಿಟಿ) ಯೋಜನೆಯನ್ನು ರಾಜ್ಯ ಶೈಕ್ಷಣಿಕ ಸಂಶೋಧನೆ ಮತ್ತು ತರಬೇತಿ ಇಲಾಖೆ ಮೂಲಕ ಅನುಷ್ಠಾನಗೊಳಿಸಲಾಗಿತ್ತು. ಸರ್ಕಾರಿ ಹಾಗೂ ಅನುದಾನಿತ 4,396 ಪ್ರೌಢಶಾಲೆಗಳಲ್ಲಿ ಯೋಜನೆ ಅನುಷ್ಠಾನಕ್ಕೆ ಕೇಂದ್ರ ಸರ್ಕಾರ 426.68 ಕೋಟಿ ನೀಡಿತ್ತು.

ಎಸ್ ಐಟಿ ತನಿಖೆ ಚಾರ್ಜ್ ಶೀಟ್ ಸಲ್ಲಿಕೆ

ಪ್ರಭಾವಿ ನಾಯಕ ಸೇರಿ 7 ಮಂದಿ ವಿರುದ್ಧ ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಸಿದ ಸಿಐಡಿ

• ಉದಯವಾಹಿನಿ, ಬೆಂಗಳೂರು

ಆಳಂದ ವಿಧಾನಸಭಾ ಕ್ಷೇತ್ರದ ಮತಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶೇಷ ತನಿಖಾ ತಂಡ ಬೆಂಗಳೂರು ನಗರದ ಎಪಿಎಂಎಂ ನ್ಯಾಯಾಲಯಕ್ಕೆ ದೋಷರೋಪಪಟ್ಟಿ ಸಲ್ಲಿಸಿದೆ. 22 ಸಾವಿರ ಪುಟಗಳ ದೋಷರೋಪ ಪಟ್ಟಿಯಲ್ಲಿ ಮಾಜಿ ಶಾಸಕ ಸುಭಾಷ್ ಗುತ್ತೇದಾರ್ ಪುತ್ರ ಹರ್ಷಾನಂದ ಸೇರಿ 7 ಮಂದಿಯನ್ನು ಆರೋಪಿಗಳು ಎಂದು ಹೆಸರಿಸಲಾಗಿದೆ. 5,994 ಮತಗಳನ್ನು ಅಳಿಸಿ ಹಾಕಲು ಕಾಲ್ ಸೆಂಟರ್ ಬಳಕೆ ಮಾಡಲಾಗಿದೆ. ಮತ ಕಳವಿಗೆ ಮಾಜಿ ಶಾಸಕರು ಹಣ ಕೂಡ ಪಾವತಿ ಮಾಡಿದ್ದಾರೆ. ದಾಳಿ ವೇಳೆ ಸಿಕ್ಕಿದ ಡಿಜಿಟಲ್ ಸಾಕ್ಷ್ಯದಿಂದ ಕೃತ್ಯ ಸಾಬೀತಾಗಿದೆ. ಈ ಕೃತ್ಯದಲ್ಲಿ ತಂದೆ-ಮಗ ಪ್ರಮುಖ ಆರೋಪಿಗಳು ಎಂದು ಉಲ್ಲೇಖಿಸಲಾಗಿದೆ. ಶಾಸಕ ಬಿ.ಆರ್.ಪಾಟೀಲ್ ವೋಟ್ ಚೋರಿ ಆರೋಪ ಮಾಡಿದ ಹಿನ್ನೆಲೆ ಸರ್ಕಾರ ಬಿ.ಕೆ. ಸಿಂಗ್ ನೇತೃತ್ವದಲ್ಲಿ ಎಸ್‌ಐಟಿ ರಚನೆ ಮಾಡಿತ್ತು. ಬಂಧನ ಭೀತಿಯಲ್ಲಿ ಈಗಾಗಲೇ ಸುಭಾಷ್ ಗುತ್ತೇದಾರ್, ಪುತ್ರ ಹರ್ಷಾನಂದ ಜಾಮೀನು ಪಡೆದುಕೊಂಡಿದ್ದಾರೆ. ದೆಹಲಿಯಲ್ಲಿ ಕಾಂಗ್ರೇಸ್ ವೋಟ್ ಚೋರಿ ಪ್ರತಿಭಟನೆ ಆಯೋಜಿಸಿದೆ. ಈ ಪ್ರತಿಭಟನೆಗೆ ಮುನ್ನ ಎಸ್‌ಐಟಿ ಚಾರ್ಜ್‌ಶೀಟ್ ಸಲ್ಲಿಕೆ ಮಾಡಿದ್ದು ಕಾಂಗ್ರೇಸ್‌ಗೆ ದೊಡ್ಡ ಅಸ್ತ್ರಸಿಕ್ಕಿದಂತಾಗಿದೆ.

ಮತದಾರರ ಹಕ್ಕಿನ ರಕ್ಷಣೆಗೆ ಹೋರಾಟ ಆರಂಭ: ದೆಹಲಿಯಲ್ಲಿ ನಡೆಯಲಿರುವ ಮತಗಳ್ಳತನ ವಿರುದ್ಧದ ಪ್ರತಿಭಟನೆ ಬಗ್ಗೆ ಕೇಳಿದಾಗ, ಮತದಾರರ ಹಕ್ಕಿನ ರಕ್ಷಣೆಗಾಗಿ ಮತಗಳ್ಳತನ ವಿರುದ್ಧದ ಹೋರಾಟ ಆರಂಭಿಸಿದ್ದೇವೆ. ಮತಗಳ್ಳತನ ವಿರುದ್ಧದ ಹೋರಾಟ ನಮ್ಮ ರಾಜ್ಯದಿಂದಲೇ ಆರಂಭವಾಗಿದ್ದು, ಭಾನುವಾರ ದೆಹಲಿಯ ರಾಮಲೀಲಾ ಮೈದಾನದಲ್ಲಿ ಬೃಹತ್ ಪ್ರತಿಭಟನೆ ನಡೆಯಲಿದೆ. ನಮ್ಮ ರಾಜ್ಯದಲ್ಲಿ ಚಿಲುಮೆ ಸಂಸ್ಥೆ ಮೂಲಕ ಈ ಹಿಂದೆ ಸಾವಿರಾರು ಬಿಎಲ್‌ಓಗಳನ್ನು ನೇಮಕ ಮಾಡಿ ಅಕ್ರಮ ಎಸಗಲಾಗಿತ್ತು. ಕಾಂಗ್ರೇಸ್ ಪಕ್ಷ ಪ್ರಜಾಪ್ರಭುತ್ವವ್ಯವಸ್ಥೆ ಹಾಗೂ ಸಂವಿಧಾನ ಬದ್ಧವಾಗಿ ನಡೆದುಕೊಂಡು ಬಂದಿದೆ.

ನಮ್ಮ ರಾಜ್ಯದ ಎಲ್ಲಾ ಮೂಲೆಗಳಿಂದ ಸಾವಿರಾರು ಕಾರ್ಯಕರ್ತರು, ಮುಖಂಡರು ದೆಹಲಿಗೆ ರೈಲು ಹಾಗೂ ಇತರೆ ಸಾರಿಗೆ ವ್ಯವಸ್ಥೆ ಮೂಲಕ ತೆರಳಿದ್ದಾರೆ. ಈ ಪ್ರತಿಭಟನೆಯಲ್ಲಿ 100ಕ್ಕೂ ಹೆಚ್ಚು ಶಾಸಕರು ಹಾಗೂ ಪರಿಷತ್ ಸದಸ್ಯರು ಭಾಗವಹಿಸುತ್ತಿದ್ದಾರೆ. ನಾವು ಚುನಾವಣೆ ಸೋತಿರಬಹುದು. ಜನರಲ್ಲಿ ಜಾಗೃತಿ ಮೂಡಿಸಬೇಕಿದೆ. ನಮ್ಮ ನಾಯಕರಾದ ರಾಹುಲ್ ಅವರು ಈ ಪ್ರತಿಭಟನೆ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ ಎಂದು ಹೇಳಿದರು.

ನೋಟಿಸ್‌ಗೆ ಉತ್ತರ ನೀಡುವೆ: ದೆಹಲಿ ಪ್ರವಾಸದ ವೇಳೆ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ಚರ್ಚೆ ಮಾಡುತ್ತೀರಾ ಎಂದು ಕೇಳಿದಾಗ, ನಾನು ದೆಹಲಿ ತಲುಪುವುದೇ ತಡವಾಗುತ್ತದೆ. ನ್ಯಾಷನಲ್ ಹೆರಾಲ್ಡ್ ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ನೋಟಿಸ್ ಬಂದಿದ್ದು, ಅದಕ್ಕೆ ನಾನು ಉತ್ತರ ನೀಡಬೇಕಿದೆ. ಎಲ್ಲಾ ದಾಖಲೆ ತೆಗೆದುಕೊಂಡು ಹೋಗಿ ಅವರಿಗೆ ಉತ್ತರ ನೀಡುತ್ತೇನೆ ಎಂದರು. ಡ್ರಗ್ ಪೆಡ್ಲರ್ ಮನೆಗಳ ಮೇಲೆ ಬುಲ್ಡೋಜರ್ ಹತ್ತಿಸಬೇಕು ಎಂಬ ಗೃಹ ಸಚಿವರ ಹೇಳಿಕೆ ಬಗ್ಗೆ ಕೇಳಿದಾಗ, ಇದರ ಬಗ್ಗೆ ಆನಂತರ ಮಾತನಾಡುತ್ತೇನೆ. ತನಿಖೆಗೆ ಚುನಾವಣಾ ಆಯೋಗ ಅಸಹಕಾರ ತೋರಿದೆ ಎಂದು ಕಾಂಗ್ರೇಸ್ ಆರೋಪಿಸಿತ್ತು. ತಾಂತ್ರಿಕ ಮಾಹಿತಿ ಆಧರಿಸಿ ತನಿಖೆ ಶುರು ಮಾಡಿದ್ದ ಎಸ್‌ಐಟಿ, ಮತ ಅಳಿಸಿ ಹಾಕಲು ಸಲ್ಲಿಸಿದ್ದ ಅರ್ಜಿಗಳ ಮೂಲ ಕೆದಕಿದಾಗ ಜಾಲ ಬಯಲಿಗೆ ಬಂದಿದೆ.

1 2023ರ ವಿಧಾನಸಭಾ ಚುನಾವಣೆಗೆ ಸಂಬಂಧಿಸಿದ ಮತ ಕಳವು ಪ್ರಕರಣದಲ್ಲಿ 20,000 ಪುಟಗಳಿಗೂ ಹೆಚ್ಚು ವಿಸ್ತಾರವಾದ ಆರೋಪಪಟ್ಟಿ ಸಲ್ಲಿಕೆ

2 ಮಾಜಿ ಬಿಜೆಪಿ ಶಾಸಕ ಸುಭಾಷ್ ಗುತ್ತೇದಾರ ಮತ್ತು ಅವರ ಪುತ್ರ ಸೇರಿದಂತೆ ಏಳು ಜನರ ವಿರುದ್ಧ ವಿಶೇಷ ತನಿಖಾ ತಂಡದಿಂದ ಚಾರ್ಜ್‌ಶೀಟ್ ದಾಖಲು

3 ಆಳಂದ ವಿಧಾನಸಭಾ ಕ್ಷೇತ್ರದ ಒಟ್ಟು 6,018 ಮತದಾರರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ಅಕ್ರಮವಾಗಿ ತೆಗೆದುಹಾಕಲು ಯತ್ನ ಪ್ರಕರಣ

ಕಾಂಗ್ರೇಸ್ ಪ್ರತಿಭಟನೆಗೆ ಅಸ್ತ್ರ ಮತಗಳ್ಳತನ ನಡೆದಿರುವುದು ಸತ್ಯ, ಇದರ ವಿರುದ್ಧ ಸೂಕ್ತ ಕ್ರಮ: ಡಿಕೆಶಿ

ಹರ್ಷಾನಂದ್ ಸ್ಪಷ್ಟನೆ

ಚಾರ್ಜ್‌ಶೀಟ್‌ನಲ್ಲಿ ಏನೆಲ್ಲಾ ಅಂಶಗಳಿವೆ ಎಂಬ ಬಗ್ಗೆ ನಮಗೆ ಇನ್ನೂ ಯಾವುದೇ ಅಧಿಕೃತ ಮಾಹಿತಿ ಬಂದಿಲ್ಲ. ನೋಟಿಸ್ ನೀಡಿ ನಮ್ಮ ಹೇಳಿಕೆ ಪಡೆದಿದ್ದಾರೆ. ಈ ಪ್ರಕರಣದಲ್ಲಿ ನಮ್ಮ ಯಾವುದೇ ಪಾತ್ರವಿಲ್ಲ ಎಂಬುದನ್ನು ನಾವು ಸ್ಪಷ್ಟವಾಗಿ ಹೇಳಿದ್ದೇವೆ'' ಎಂದು ಸುಭಾಷ್ ಗುತ್ತೇದಾರ್ ಪುತ್ರ ಹರ್ಷಾನಂದ್ ಗುತ್ತೆದಾರ್ ಹೇಳಿದ್ದಾರೆ. ಸರ್ಕಾರ ತಮ್ಮದೇ ಇದ್ದ ಕಾರಣ ಅಧಿಕಾರಿಗಳನ್ನು ಬಳಸಿಕೊಂಡು ನನ್ನ ತಂದೆ ಹಾಗೂ ನನ್ನ ಹೆಸರನ್ನು ಚಾರ್ಜ್‌ಶೀಟ್‌ನಲ್ಲಿ ಸೇರಿಸಲಾಗಿದೆ ಎಂದು ಹರ್ಷಾನಂದ್ ಗುತ್ತೆದಾರ್ ಆರೋಪಿಸಿದ್ದಾರೆ. ಇದು ಬಿಜೆಪಿ ವಿರುದ್ಧ 'ವೋಟ್ ಚೋರಿ' ಎಂಬ ಕಥೆಕಟ್ಟಲು ಕಾಂಗ್ರೇಸ್ ಮಾಡುತ್ತಿರುವ ರಾಜಕೀಯ ತಂತ್ರ. ಜನ ಕಾಂಗ್ರೇಸ್‌ನ್ನು ತಿರಸ್ಕರಿಸಿದ್ದಾರೆ. ಅದಕ್ಕಾಗಿಯೇ ಈಗ ವೋಟ್ ಚೋರಿ ಎನ್ನುವ ಆರೋಪಗಳನ್ನು ಮುಂದಿಟ್ಟು ದೇಶದ ಗಮನ ಸೆಳೆಯಲು ಪ್ರಯತ್ನ ಮಾಡಲಾಗುತ್ತಿದೆ.

ಪ್ರತಿ ಮತ ಅಳಿಸಲು 80ರೂ. ಪಾವತಿ ಆರೋಪ

ಪ್ರಕರಣದಲ್ಲಿ, ಪ್ರತಿ ಮತದಾರರ ಹೆಸರು ಅಳಿಸಲು 80ರೂ. ಹಣ ಪಾವತಿಸಲಾಗಿದೆ ಎಂಬ ಆರೋಪವಿದ್ದು, 2022ರ ಡಿಸೆಂಬರ್‌ನಿಂದ 2023ರ ಫೆಬ್ರವರಿವರೆಗೆ 6,018 ಮತಗಳ ರದ್ದತಿಗೆ ಚುನಾವಣಾ ಆಯೋಗಕ್ಕೆ ಅರ್ಜಿ ಸಲ್ಲಿಸಲಾಗಿತ್ತು ಎಂಬ ಆರೋಪವೂ ಇದೆ. ಮಾಜಿ ಶಾಸಕ ಸುಭಾಷ್ ಗುತ್ತೇದಾರ್ ಮತಗಳ್ಳತನ ಮಾಡಲು ಹಣ ಪಾವತಿ ಮಾಡಿಸಿದ್ದರು ಎಂಬ ಆರೋಪವನ್ನೂ ಚಾರ್ಜ್‌ಶೀಟ್‌ನಲ್ಲಿ ಹೊರಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ರಾಹುಲ್ ಗಾಂಧಿ ವೋಟ್ ಚೋರಿ ಆರೋಪ

ಲೋಕಸಭೆ ಚುನಾವಣೆ ವೇಳೆ ಕಾಂಗ್ರೇಸ್ ವರಿಷ್ಠ ಹಾಗೂ ಸಂಸದ ರಾಹುಲ್ ಗಾಂಧಿ ಮತಗಳವು ವಿರುದ್ಧ ಧ್ವನಿ ಎತ್ತಿದ್ದರು. ಲೋಕಸಭಾ ಚುನಾವಣೆಯಲ್ಲಿ ಮಹದೇವಪುರ ಹಾಗೂ ವಿಧಾನಸಭೆ ಚುನಾವಣೆ ವೇಳೆ ಆಳಂದದಲ್ಲಿ ಮತಗಳವು ಆರೋಪ ಮಾಡಿದ್ರು. ಆಳಂದ ಕ್ಷೇತ್ರದ ಮತಗಳವು ಯತ್ನ ಸಂಬಂಧ ಎಸ್‌ಐಟಿ ರಚನೆ ಮಾಡಲಾಗಿತ್ತು. ಸಿಐಡಿ ಎಡಿಜಿಪಿ ಬಿ.ಕೆ.ಸಿಂಗ್ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ ರಚಿಸಿದ್ರು. ದಶಕಗಳಿಂದ ಸುಭಾಷ್ ಗುತ್ತೇದಾರ್ ಹಾಗೂ ಬಿ.ಆರ್ ಪಾಟೀಲ್ ಆಳಂದದಲ್ಲಿ ಎದುರಾಳಿಗಳು 2018ರಲ್ಲಿ ಅಲ್ಪ ಮತದಿಂದ ಪಾಟೀಲ್ ಸೋಲನುಭವಿಸಿದ್ರು. 2023ರಲ್ಲಿ ಗೆಲುವು ಸಾಧಿಸಿದ್ದ ಬಿ.ಆರ್ ಪಾಟೀಲ್ ತಮ್ಮನ್ನು ಮತ್ತೆ ಸೋಲಿಸಲು ಮತಗಳವು ಮಾಡಿದ್ದಾರೆಂದು ಆರೋಪಿಸಿದ್ರು.

ಕೈಗೆ ದೊಡ್ಡ ಅಸ್ತ್ರ

ಆರು ತಾಲ್ಲೂಕುಗಳು ಬೆಂಗಳೂರಿಗೆ ಸೇರ್ಪಡೆ: ಡಿಕೆ ಶಿವಕುಮಾರ್ ಘೋಷಣೆ

• ಉದಯವಾಹಿನಿ, ಬೆಂಗಳೂರು

ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ನೂತನ ಕಚೇರಿಯನ್ನು ಡಿಕೆ ಶಿವಕುಮಾರ್ ಉದ್ಘಾಟಿಸಿದರು.

ಬೆಂಗಳೂರು ಗ್ರಾಮಾಂತರ: ಹೊಸಕೋಟೆ, ನೆಲಮಂಗಲ, ದೊಡ್ಡಬಳ್ಳಾಪುರ, ದೇವನಹಳ್ಳಿ, ರಾಮನಗರ, ಮಾಗಡಿ ತಾಲ್ಲೂಕಿನ ಬಿಡದಿ ಸೇರಿದಂತೆ ಬೆಂಗಳೂರಿನ ಸುತ್ತಮುತ್ತಲಿನ ಪ್ರದೇಶಗಳು ಹೊಸ ಬೆಂಗಳೂರಾಗಿ ಪರಿವರ್ತನೆ ಆಗುತ್ತವೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ದೇವನಹಳ್ಳಿಯಲ್ಲಿನ ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ (ಬಯಪ್ಪ)ದ ನೂತನ ಕಚೇರಿ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬೆಂಗಳೂರು ವೇಗವಾಗಿ ಬೆಳೆಯುತ್ತಿದೆ. ಬೆಂಗಳೂರು ಸುತ್ತಲಿನ ಪ್ರದೇಶಗಳನ್ನು ಬೆಂಗಳೂರಿಗೆ ಸೇರಿಸುವ ನಿಟ್ಟಿನಲ್ಲಿ ಯೋಜನೆ ಮಾಡಲಾಗುತ್ತಿದೆ.

ಬೆಂಗಳೂರಿನಲ್ಲಿರುವ ನಿಮ್ಮ ಆಸ್ತಿ ಕಾಪಾಡಿಕೊಳ್ಳುವುದು ನಿಮ್ಮೆಲ್ಲರ ಕರ್ತವ್ಯ. ನಾನು ಬೆಂಗಳೂರಿಗೆ ಹೊಸ ರೂಪ ನೀಡುವ ಜತೆಗೆ ಆಸ್ತಿ ಮೌಲ್ಯಕ್ಕೆ ಗೌರವ ತರುವ ಕೆಲಸ ಮಾಡುತ್ತೇನೆ. ಬೆಂಗಳೂರು ನಗರ ಹಾಗೂ ಸುತ್ತಮುತ್ತಲಿನ ಅಭಿವೃದ್ಧಿಗೆ ಒತ್ತು ನೀಡಲಾಗಿದೆ.

ಬೆಂಗಳೂರು ಗ್ರಾಮಾಂತರಕ್ಕೆ ಸಚಿವ ಕೆಎಚ್ ಮುನಿಯಪ್ಪ, ಹೊಸಕೋಟೆ ಶಾಸಕ ಶರತ್ ಬಚ್ಚೇಗೌಡ, ನೆಲಮಂಗಲ ಶಾಸಕ ಶ್ರೀನಿವಾಸ್ ಬೇಡಿಕೆ ಇಟ್ಟಿದ್ದರಿಂದ ಬೆಂಗಳೂರು ಉತ್ತರ ಎಂಬ ಹೊಸ ಹೆಸರನ್ನು ನೀಡಲ

ಯಾರೋ ಕಿರಣ್ ಹೆಬ್ಬಾರ್ ಅಂತೆ, ಪಿಎಂಗೂ ಹೆದರದೇ ಜೈಲಿಗೆ ಹೋಗಿ ಬಂದವನು ನಾನು: ಡಿಕೆಶಿ

• ಉದಯವಾಹಿನಿ, ಬೆಂಗಳೂರು

ಸರ್ಕಾರಕ್ಕೆ ಎಚ್ಚರಿಕೆಯ ಪತ್ರ ಬರೆದ ಅಂಪಾರ್ಟ್ಮೆಂಟ್ ಮಾಲೀಕರೊಬ್ಬರ ವಿರುದ್ಧ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಗರಂ ಆಗಿದ್ದಾರೆ. ನಮಗೆ ಎಚ್ಚರಿಕೆ ನೀಡುವ ಕೆಲಸವನ್ನು ಮಾಡಬೇಡಿ. ಯಾರಿಗೂ ಹೆದರದೇ ಜೈಲಿಗೆ ಹೋಗಿ ಬಂದವನು ನಾನು ಎಂದು ಡಿಸಿಎಂ ಹೇಳಿದ್ದಾರೆ. ಕರ್ನಾಟಕ ಅಪಾರ್ಟ್ಮೆಂಟ್ ವಿಧೇಯಕ 2025 ಕುರಿತು ಅಪಾರ್ಟ್ಮೆಂಟ್ ಅಸೋಸಿಯೇಷನ್‌ಗಳ ಪ್ರತಿನಿಧಿಗಳೊಂದಿಗೆ ಡಿಸಿಎಂ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಶನಿವಾರ ಸಂವಾದ ನಡೆಸಿ ಮಾತನಾಡಿದರು. ಯಾವನೇ ಆಗಿರಲಿ, ಸರ್ಕಾರಕ್ಕೆ ಎಚ್ಚರಿಕೆ ನೀಡಲು ಆಗುವುದಿಲ್ಲ ಎನ್ನುವ ಕಿವಿಮಾತನ್ನು ಈ ಸಂದರ್ಭದಲ್ಲಿ ಹೇಳಿದ್ದಾರೆ. ಕಿರಣ್ ಹೆಬ್ಬಾರ್ ಎಂಬಾತ ತಾನು ಅಂಪಾರ್ಟ್ಮೆಂಟ್ ಮಾಲೀಕ ಎಂದು ಪತ್ರ ಬರೆದಿದ್ದು, ನಮಗೆ ಬೆದರಿಕೆ ಹಾಕಲು ಮುಂದಾಗಿದ್ದಾನೆ. ನಮ್ಮಲ್ಲಿ ಬಹುದೊಡ್ಡ ಮತದಾರರ ಸಮೂಹವಿದ್ದು, ಬೆಂಗಳೂರಿನ 1.30 ಕೋಟಿ ಮತದಾರರ ಮೇಲೆ ಪರಿಣಾಮ ಬೀರಬಲ್ಲೆವು. ಸರ್ಕಾರಗಳು ನಮ್ಮನ್ನು ನಿರ್ಲಕ್ಷಿಸಿದ್ದು, ಆಡಳಿತ ಪಕ್ಷ ನಮ್ಮ ಮನವಿ ನಿರ್ಲಕ್ಷಿಸಿದರೆ ಸದ್ಯದಲ್ಲೇ ಜಿಬಿಎ ಚುನಾವಣೆ ಬರುತ್ತಿದೆ ಎಂದು ಪತ್ರದಲ್ಲಿ ಎಚ್ಚರಿಕೆ ನೀಡಿದ್ದಾನೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದರು. ಈ ದೇಶದ ಪ್ರಧಾನಮಂತ್ರಿ, ಗೃಹ ಸಚಿವರಿಗೆ ಹೆದರದೇ ಜೈಲಿಗೆ ಹೋಗಿ ಬಂದಿರುವವನು ನಾನು. ಅವನ್ಯಾರೋ ಹೆಬ್ಬಾರ್ ಎಂಬುವವನಿಗೆ ಹೆದರುತ್ತೇನೆಯೇ? ಯಾರಿಗೂ ಹೆದರುವ, ಜಗ್ಗುವ ಮಾತೇ ಇಲ್ಲ.

ಯಾರೇ ಆಗಲಿ ಯಾರ ಜೊತೆ ಮಾತನಾಡುತ್ತಿದ್ದೇವೆ ಎಂಬುದರ ಬಗ್ಗೆ ಕನಿಷ್ಠ ಪರಿಜ್ಞಾನ ಇಟ್ಟುಕೊಳ್ಳಬೇಕು ಎಂದು ಡಿಕೆ ಶಿವಕುಮಾರ್, ಕಿವಿಮಾತನ್ನು ಹೇಳಿದ್ದಾರೆ. ನಾನು ಇರುವುದು ನಿಮಗಾಗಿ. ನಾನು ನಿಮ್ಮನ್ನು ಕರೆದು ಅಭಿಪ್ರಾಯ ಪಡೆಯುವ ಅಗತ್ಯ ಇರಲಿಲ್ಲ. ನಾವು ನಿಮ್ಮ ಮೇಲೆ ಪ್ರೀತಿ ವಿಶ್ವಾಸವಿಟ್ಟು ಕರೆದಿದ್ದೇವೆ. ಗಾಂಧೀಜಿ ಒಂದು ಮಾತು ಹೇಳಿದ್ದಾರೆ. ನಿಮ್ಮನ್ನು ನೀವು ನಿಯಂತ್ರಿಸಬೇಕಾದರೆ ನಿಮ್ಮ ಮೆದುಳನ್ನು ಪ್ರಯೋಗಿಸಿ, ಬೇರೆಯವರನ್ನು ನಿಯಂತ್ರಿಸಬೇಕಾದರೆ ನಿಮ್ಮ ಹೃದಯವನ್ನು ಪ್ರಯೋಗಿಸಿ ಎಂದು ಡಿಕೆ ಶಿವಕುಮಾರ್ ಹೇಳಿದರು. ನಾನು ನನ್ನ ಹೃದಯದಿಂದ ಜನರ ಮನಸ್ಸು ಗೆದ್ದಿದ್ದೇನೆ. ನಾನು ಸತತವಾಗಿ 8 ಬಾರಿ ವಿಧಾನಸಭೆಗೆ ಆಯ್ಕೆಯಾಗಿದ್ದೇನೆ. ಕಳೆದ ಚುನಾವಣೆಯಲ್ಲಿ ನಾನು ಪ್ರಚಾರಕ್ಕೆ ಹೋಗಲಿಲ್ಲ. ವಿರೋಧ ಪಕ್ಷದ ನಾಯಕ ಅಶೋಕ್ ನನ್ನ ವಿರುದ್ಧ ಸ್ಪರ್ಧಿಸಿದ್ದರೂ ಜನ ನನಗೆ 1.23 ಲಕ್ಷ ಮತಗಳ ಅಂತರದಲ್ಲಿ ಗೆಲ್ಲಿಸಿದ್ದಾರೆ.

ಇದು ರಾಜ್ಯದ ಇತಿಹಾಸದಲ್ಲೇ ಅತಿ ದೊಡ್ಡ ಅಂತರದ ಗೆಲುವು ಎಂದು ಕಳೆದ ವಿಧಾನಸಭಾ ಚುನಾವಣೆಯ ಫಲಿತಾಂಶವನ್ನು ಸ್ಮರಿಸಿಕೊಂಡರು. ನಿಮ್ಮ ಸೇವೆ ಮಾಡಿದರೆ ನಮಗೆ ಮತ ಹಾಕುತ್ತೀರಿ ಎಂಬುದಷ್ಟೇ ನಮ್ಮ ಆಸೆ. ಅದನ್ನು ಬಿಟ್ಟು ನಿಮ್ಮನ್ನು ಬೇರೆ ಏನು ಕೇಳುತ್ತೇವೆ? ನಾವು ಕೊಟ್ಟ ಮಾತಿನಂತೆ ಪಂಚ ಗ್ಯಾರಂಟಿ ಯೋಜನೆ ಜಾರಿ ಮಾಡಿದ್ದೇವೆ. ಅಪಾರ್ಟ್ ಮೆಂಟ್ ನಿವಾಸಿಗಳಿಗೆ 200 ಯೂನಿಟ್ ವರೆಗೂ ಉಚಿತ ವಿದ್ಯುತ್ ನೀಡಿದ್ದೇವೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು. ಫ್ರೀಬೀಸ್ ಯೋಜನೆ ಜಾರಿ ಅಸಾಧ್ಯ ಎಂದು ಪ್ರಧಾನಮಂತ್ರಿಗಳು ಹೇಳಿದರು.

ಆದರೆ ಇಂದು ಬೇರೆ ರಾಜ್ಯಗಳಲ್ಲಿ ನಮ್ಮ ಯೋಜನೆಗಳೇ ಅವರನ್ನು ಕಾಪಾಡುತ್ತಿದೆ. ಕಾವೇರಿ 5ನೇ ಹಂತದ ಕುಡಿಯುವ ನೀರಿನ ಯೋಜನೆ ಜಾರಿ ಮಾಡಿ, ಮೊದಲು ನೀರಿನ ಸಂಪರ್ಕ ಪಡೆಯಿರಿ, ಒಂದು ವರ್ಷ ತಡವಾಗಿ ಬೇಕಾದರೆ ಹಣ ಪಾವತಿಸಿ ಎಂದು ಕಾಲಾವಕಾಶವನ್ನು ನೀಡಿದ್ದೇವೆ. ಆರನೇ ಹಂತದ ಯೋಜನೆಗೆ ಯೋಜನೆ ರೂಪಿಸಿದ್ದೇವೆ. ಇದನ್ನು ನೀವುಗಳು ಅರಿಯಬೇಕು. ಎಲ್ಲರನ್ನು ಆಟವಾಡಿಸಿದಂತೆ ನಮ್ಮನ್ನು ಆಟವಾಡಿಸಲು ಸಾಧ್ಯವಿಲ್ಲ ಎಂದು ಡಿಕೆ ಶಿವಕುಮಾರ್ ಹೇಳಿದರು.

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ

ಧರ್ಮ ನಿರ್ಣಯ

ಸಕ್ಕರೆಯ ರುಚಿ ತಿಂದವ ಬಲ್ಲ. ಆತ ಅದರ ರುಚಿ ಹೇಳಲಿ. ತಿನ್ನದವ ಹೇಳಿದರೆ ಬೆಲೆ ಇಲ್ಲ. ಇದು ಧರ್ಮ ಇದು ಧರ್ಮವಲ್ಲ ಎಂದು ಧರ್ಮ ತಿಳಿದವ ಹೇಳಲಿ. ಇದೇ ಶ್ರೇಷ್ಠ ಧರ್ಮ ಎಂದು ಎಲ್ಲ ಧರ್ಮ ಅರಿತವ ಹೇಳಬೇಕು. ನ್ಯಾಯ ಹೇಳಿದ ಮಾತ್ರಕ್ಕೆ ನ್ಯಾಯಮೂರ್ತಿ, ಅಧಿಕಾರವಿದ್ದಮಾತ್ರಕ್ಕೆ ಅಧಿಕಾರಿ ಮಂತ್ರಿ ಮುಖ್ಯಮಂತ್ರಿ ಪ್ರಧಾನಮಂತ್ರಿ ರಾಜ್ಯಪಾಲ ರಾಷ್ಟ್ರಪತಿ ಇದುವೇ ಧರ್ಮ ಇದು ಧರ್ಮವಲ್ಲ ಎಂದು ನಿರ್ಣಯಿಸಲಾಗದು. ಸಂಗೀತಜ್ಞನ ವಿದ್ವತ್ತನ್ನು ಸಂಗೀತಜ್ಞ, ಸಂಸ್ಕೃತಜ್ಞನ ವಿದ್ವತ್ತನ್ನು ಸಂಸ್ಕೃತಜ್ಞ ಅಳೆಯಬಲ್ಲ. ವಿದ್ಯಾರ್ಥಿಯ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಪಾಠ ಮಾಡಿದ ಅಧ್ಯಾಪಕ ಮಾಡಬಲ್ಲನೇ ಹೊರತು ಶಿಕ್ಷಣಾಧಿಕಾರಿ ಶಿಕ್ಷಣ ಮಂತ್ರಿಯಲ್ಲ. ಧರ್ಮದ ಸ್ವರೂಪವರಿಯದವರು ಧರ್ಮದಂತೆ ನಡೆಯದವರು ಸಾತ್ತ್ವಿಕ ಸಾಧಕರಾಗದವರು ಇದು ಧರ್ಮ ಇದು ಧರ್ಮವೇ ಅಲ್ಲ ಇದೇ ಶ್ರೇಷ್ಠ ಧರ್ಮ ಎಂದು ಹೇಳಿದರೆ ಒಪ್ಪಲಾಗದು. ನೀರಿನ ಆಳದಲ್ಲಿ ಮುಳುಗಿದವನು ಮಾತನಾಡಲಾರ. ಧರ್ಮದಲ್ಲಿ ಮುಳುಗಿದವನು ಧರ್ಮದ ಟೀಕೆ ಮಾಡಲಾರ. ಬಸವಣ್ಣ ರಾಮಕೃಷ್ಣ ಪರಮಹಂಸ ಸಿದ್ಧಾರೂಢ ಸ್ವಾಮಿ ವಿವೇಕಾನಂದರಂಥವರು ಧರ್ಮ ಸುಧಾರಕರು ಹೊರತು ಧರ್ಮದ್ವೇಷಿಗಳಲ್ಲ. ಬದಲಾಗಿ ಎಲ್ಲಾ ಧರ್ಮಗಳನ್ನು ಪ್ರೀತಿಸಿದವರು.

ಶ್ರೀ ಲಾಲ್ ದಾಸ್ ವೆಂಕಟರಮಣಸ್ವಾಮಿ ದೇವಸ್ಥಾನದಲ್ಲಿ 29ನೇ ಧನುರ್ಮಾಸ ಸಂಗೀತೋತ್ಸವ

ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಬಳೇಪೇಟೆಯಲ್ಲಿರುವ ಪುರಾತನ ದೇವಸ್ಥಾನವಾದ ಲಾಲ್ ದಾಸ್ ಶ್ರೀ ವೆಂಕಟರಮಣಸ್ವಾಮಿ ದೇವಸ್ಥಾನದಲ್ಲಿ ಶ್ರೀ ಲಾಲ್ ದಾಸ್ ಭಕ್ತಾಂಜನೇಯ ಸ್ವಾಮಿ ಭಜನೆ ಮಂಡಳಿ ನಡೆಸುತ್ತಿರುವ 29ನೇ ವರ್ಷದ ಧನುರ್ಮಾಸ ಸಂಗೀತೋತ್ಸವವು ಡಿ. 16 ರಿಂದ ಜನವರಿ 15ರ ವರೆಗೂ ಹಮ್ಮಿಕೊಂಡಿದ್ದು ವಿವರಗಳು ಈ ರೀತಿ ಇವೆ ; ಪ್ರತಿದಿನ ಬೆಳಗ್ಗೆ 5-30 ರಿಂದ 6-30ರ ವರೆಗೆ ಶ್ರೀ ಭಕ್ತ ಆಂಜನೇಯ ಸ್ವಾಮಿ ಭಜನಾ ಮಂಡಳಿಯ ಸದಸ್ಯರಿಂದ ಭಜನಾ ಕಾರ್ಯಕ್ರಮ ಇರುತ್ತದೆ. ಗಾನ ಸಂಗೀತ, ವಾದ್ಯ ಸಂಗೀತ **ಕಾರ್ಯಕ್ರಮಗಳು:** ಪ್ರತಿದಿನ ಬೆಳಗ್ಗೆ 6-30 ರಿಂದ 7-30. ಡಿ.16ರಂದು ವಿ|| ಶ್ರೀಕಿರಣ್, ನಂದನ್ ಜೋಷಿಯಾರ್ (ಗಾಯನ), ಡಿ. 17ರಂದು ವಿ|| ಶ್ರೀಮತಿ ಇಂದಿರಾ ದತ್ತಾತ್ರೇಯ ಶರ್ಮಾ (ಗಾಯನ), ಡಿ. 18ರಂದು ವಿ|| ಶ್ರೀ ತಿರುಮಲೆ ಶ್ರೀನಿವಾಸ್ (ಗಾಯನ), ಡಿಸೆಂಬರ್ 19ರಂದು ಕು|| ಮನಸ್ವಿ ಜಿ. ಕಶ್ಯಪ್ (ಗಾಯನ), ಡಿ. 20ರಂದು ವಿ|| ಶ್ರೀಮತಿ ಮಾನಸ ಕುಲಕರ್ಣಿ (ಗಾಯನ), ಡಿಸೆಂಬರ್ 21ರಂದು ವಿ|| ರಾಜಪ್ಪ (ಗಾಯನ), ಡಿ. 22ರಂದು ವಿ|| ನಾಗೇಶ್ (ಗಾಯನ), ಡಿ. 23ರಂದು ವಿ|| ಸಿ. ರಮೇಶ್ (ಗಾಯನ), ಡಿಸೆಂಬರ್ 24ರಂದು ವಿ|| ಶ್ರೀಮತಿ ರಕ್ಷಾ ರಾವ್ (ಗಾಯನ), ಡಿಸೆಂಬರ್ 25ರಂದು ವಿ|| ಜಿ ಎಸ್ ನಾಗರಾಜ್, ತಂಡ (ತಾಳವಾದ್ಯ), ಡಿ.26ರಂದು ಕು||ಅನನ್ಯ ಬೆಳವಾಡಿ (ಗಾಯನ), ಡಿಸೆಂಬರ್ 27ರಂದು ವಿ|| ಆನೂರ್ ಸುನಾದ್, ತಂಡ (ತಾಳವಾದ್ಯ), ಡಿಸೆಂಬರ್ 28ರಂದು ವಿ|| ಶ್ರೀಮತಿ ಸರಳಾ ರಾಘವೇಂದ್ರ (ಗಾಯನ), ಡಿ. 29ರಂದು ವಿ|| ಚಿಂತಲಪಲ್ಲಿ ವಿ ಶ್ರೀನಿವಾಸ್ (ಗಾಯನ), ಡಿ. 30ರಂದು ವೈಕುಂಠ ಏಕಾದಶಿ, ಡಿಸೆಂಬರ್ 31ರಂದು ವಿ|| ನಾಗೇಶ್, ತಂಡ (ಗಾಯನ).

ಜ.1ರಂದು ವಿ|| ಎಲ್ ವಿ ಮುಕುಂದ್ ಮತ್ತು ತಂಡ (ಕೊಳಲು ವಾದನ), ಜ. 2ರಂದು ವಿ|| ನಂದಕುಮಾರ್ ಮತ್ತು ತಂಡ (ಕೊಳಲು ವಾದನ), ಜ. 3ರಂದು ವಿ|| ಶ್ರೀಮತಿ ರೇಖಾ ಪ್ರಸಾದ್ (ಗಾಯನ), ಜ. 4ರಂದು ವಿ|| ಶ್ರೀಮತಿ ಸುಜಾತಾ ಮಂಜುನಾಥ್ (ಗಾಯನ), ಜ. 5ರಂದು ವಿ|| ಶ್ರೀಮತಿ ಅನುಕೃಪಾ ರೌಡೂರ್, ಬಳ್ಳಾರಿ (ಗಾಯನ), ಜ. 6ರಂದು ವಿ|| ವಿಷ್ಣು ವೆಂಕಟೇಶ್ (ಮ್ಯಾಂಡೋಲಿನ್ ವಾದನ), ಜ. 7ರಂದು ವಿ|| ಶ್ರೀಮತಿ ಅಂಜಲಿ ಶ್ರೀರಾಮ್ (ಗಾಯನ), ಜನವರಿ 8ರಂದು ವಿ| ಅನಂತಪದ್ಮನಾಭ (ಗಾಯನ), ಜ. 9ರಂದು ವಿ|| ಆನೂರ್ ಅನಂತ ಕೃಷ್ಣ ಶರ್ಮಾ, ಮೇಧಾ ಮಂಜುನಾಥ್ (ಗಾಯನ), ಜ. 10ರಂದು ವಿ|| ಶ್ರೀಮತಿ ಅಪೇಕ್ಷ ಅಪ್ಪಾಲ (ಗಾಯನ), ಜ. 11ರಂದು ಬೆಂಗಳೂರು ಸಹೋದರರಾದ ವಿ|| ಅಶೋಕ್ ಮತ್ತು ವಿ|| ಹರಿಹರನ್ (ಗಾಯನ), ಜ. 12ರಂದು ವಿ|| ಪಟ್ಟಾಭಿರಾಮ್ ಪಂಡಿತ್ (ಗಾಯನ), ವಿ|| ವೆಂಕಟೇಶ್ ಜೋಷಿಯಾರ್ (ಪಿಟೀಲು), ವಿ|| ಎಚ್ ಎಸ್ ಸುಧೀಂದ್ರ (ಮೃದಂಗ), ಜ. 13ರಂದು ಶ್ರೀರಾಗ ಮ್ಯೂಸಿಕ್ ಶಾಲೆ, ಜ. 14ರಂದು ವಿ|| ಸ್ವಾಮೀಜಿ (ಗಾಯನ), ಜ. 15ರಂದು ನಗರ ಸಂಕೀರ್ತನೆ ಮತ್ತು ಸಮಾರೋಪ ಸಮಾರಂಭ ಜರುಗಲಿದೆ ಎಂದು ಮಂಡಲಿಯ ಮುಖ್ಯಸ್ಥರಾದ ಮೃದಂಗ ವಿದ್ವಾನ್ ಶ್ರೀ ಶ್ರೀನಿವಾಸ್ ಅನಂತರಾಮಯ್ಯ ಅವರು ತಿಳಿಸಿದ್ದಾರೆ.

ದಲಿತ ಹಣ ದುರ್ಬಳಕೆ ಮಾಡಿದ್ದೇ ಸಿಎಂ ಸಿದ್ದರಾಮಯ್ಯರ ಸಾಧನೆ : ಆರ್.ಅಶೋಕ್

• ಉದಯವಾಹಿನಿ, ಬೆಂಗಳೂರು

ದಲಿತರ ಹಣ ದುರ್ಬಳಕೆ ಮಾಡಿದ್ದೇ ಸಿಎಂ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಸಾಧನೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ವ್ಯಂಗ್ಯವಾಡಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ದಲಿತ ಸಮುದಾಯದ ನಾಯಕರ ಬೆನ್ನಿಗೆ ಚೂರಿ ಹಾಕಿ ಎರಡು ಬಾರಿ ಅಧಿಕಾರಕ್ಕೇರಿರುವ ಸಿಎಂ ಸಿದ್ದರಾಮಯ್ಯನವರ ದಲಿತ ವಿರೋಧಿ ನೀತಿಗಳು ಅಲ್ಲಿಗೇ ನಿಂತಿಲ್ಲ ಎಂದು ಗುಡುಗಿದ್ದಾರೆ. ದಲಿತರ ಅಭ್ಯುದಯಕ್ಕಾಗಿ ವಿನಿಯೋಗ ವಾಗಬೇಕಾಗಿದ್ದ 25,000 ಕೋಟಿ ರೂಪಾಯಿ ಎಸ್‌ಸಿಪಿ, ಟಿಎಸ್‌ಪಿ ಹಣವನ್ನ ಗ್ಯಾರೆಂಟಿ ಹೆಸರಿನಲ್ಲಿ ಕಬಳಿಸಿ ದಲಿತರಿಗೆ ವಂಚನೆ ಮಾಡುತ್ತಿದ್ದೀರಲ್ಲ ಸಿಎಂ ಸಿದ್ದರಾಮಯ್ಯನವರೇ ಇದೇನಾ ನಿಮ ಸಾಮಾಜಿಕ ನ್ಯಾಯ? ಇದೇನಾ ದಲಿತರ ಬಗ್ಗೆ ನಿಮಗಿರುವ ಬದ್ಧತೆ? ಎಂದು ಪ್ರಶ್ನಿಸಿದ್ದಾರೆ. ಗ್ಯಾರೆಂಟಿ ಯೋಜನೆಗಳ ಹೆಸರಿನಲ್ಲಿ ಕನ್ನಡಿಗರ ಖಜಾನೆ ಲೂಟಿ ಮಾಡಿ ರಾಜ್ಯವನ್ನು ಅಭಿವೃದ್ಧಿ ಶೂನ್ಯ ಮಾಡಿರುವ ಕಾಂಗ್ರೇಸ್ ಸರ್ಕಾರ ನಾಡಿನ ಬಡವರು, ರೈತರು, ಮಹಿಳೆಯರು, ಯುವಕರಿಗೆ ಮೋಸ ಮಾಡುತ್ತಿದೆ ದಲಿತ ವಿರೋಧಿ ಕಾಂಗ್ರೇಸ್ ಎಂದು ಅಶೋಕ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೆಂಗಳೂರು 2ನೇ ಏರ್‌ಪೋರ್ಟ್: ಅಂತಿಮ ಸ್ಥಳದ ಆಯ್ಕೆಗೆ ಟೆಂಡರ್ ಕರೆದ ಸರ್ಕಾರ, ರೇಸ್‌ನಲ್ಲಿರುವ 3 ಸ್ಥಳಗಳಿವು

ಹೊಸೂರು ಬಳಿ ವಿಮಾನ ನಿಲ್ದಾಣ; ಎಚ್ಚೆತ್ತುಕೊಂಡ ಕರ್ನಾಟಕ ಸರ್ಕಾರ

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ದಿನೇ ದಿನೇ ಹೆಚ್ಚುತ್ತಿರುವ ವಿಮಾನ ಪ್ರಯಾಣಿಕರ ದಟ್ಟಣೆಯನ್ನು ನಿರ್ವಹಿಸಲು ಮತ್ತು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ (ಕೆಐಎ) ಪೂರಕವಾಗಿ ಎರಡನೇ ವಿಮಾನ ನಿಲ್ದಾಣವನ್ನು ನಿರ್ಮಿಸಲು ಕರ್ನಾಟಕ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದೆ. ಈ ಸಂಬಂಧ ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮ (ಕೆಎಸ್‌ಐಐಡಿಸಿ) ಸ್ಥಳದ ಅನುಕೂಲ ಮತ್ತು ತಾಂತ್ರಿಕ ಹಾಗೂ ಆರ್ಥಿಕ ಕಾರ್ಯಸಾಧ್ಯತಾ ವರದಿ ಸಿದ್ಧಪಡಿಸಲು ಪರಿಣತ ಸಲಹಾ ಸಂಸ್ಥೆಯ ಆಯ್ಕೆಗಾಗಿ ಟೆಂಡರ್ ಆಹ್ವಾನಿಸಿದೆ. ಅರ್ಜಿ ಸಲ್ಲಿಸಲು 2026ರ ಜನವರಿ 12 ಕೊನೆಯ ದಿನವಾಗಿದೆ ಎಂದು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ್ ಶನಿವಾರ ತಿಳಿಸಿದ್ದಾರೆ.

ಮೂರು ಸ್ಥಳಗಳ ಮೇಲೆ ಕಣ್ಣು: ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ ನಡೆಸಿದ ಪ್ರಾಥಮಿಕ ಸಮೀಕ್ಷೆಯ ಆಧಾರದ ಮೇಲೆ, ಬೆಂಗಳೂರಿನ ಹೊರವಲಯದಲ್ಲಿ ಎರಡನೇ ವಿಮಾನ ನಿಲ್ದಾಣಕ್ಕೆ ಸೂಕ್ತವಾದ ಮೂರು ಸ್ಥಳಗಳನ್ನು ಅಂತಿಮಗೊಳಿಸಲಾಗಿದೆ.

- **ಕನಕಪುರ ರಸ್ತೆ:** ಚೂಡಹಳ್ಳಿ
- **ಕನಕಪುರ ರಸ್ತೆ:** ಸೋಮನಹಳ್ಳಿ
- **ತುಮಕೂರು ರಸ್ತೆ:** ನೆಲಮಂಗಲ ಮತ್ತು ಕುಣಿಗಲ್ ರಸ್ತೆ ಬಳಿಯ ಪ್ರದೇಶ

ಪ್ರತಿ ಸ್ಥಳದಲ್ಲೂ ಸುಮಾರು 4,500 ಎಕರೆ ಭೂಮಿಯನ್ನು ವಿಮಾನ ನಿಲ್ದಾಣ ಯೋಜನೆಗಾಗಿ ಗುರುತಿಸಲಾಗಿದೆ. ವಿಶೇಷವೆಂದರೆ, ಕನಕಪುರ ರಸ್ತೆಯಲ್ಲಿ ಗುರುತಿಸಲಾದ ಎರಡು ಸ್ಥಳಗಳು ಅಕ್ಕಪಕ್ಕದಲ್ಲಿದ್ದು, ಅವುಗಳ ಭೂಪ್ರದೇಶಗಳು ಪರಸ್ಪರ ಹೊಂದಿಕೊಂಡಿವೆ. ಹೀಗಾಗಿ ಈ ಎರಡು ಸ್ಥಳಗಳನ್ನು ಪ್ರತ್ಯೇಕವಾಗಿ ಹಾಗೂ ಒಟ್ಟಾಗಿ ಮೌಲ್ಯಮಾಪನ ಮಾಡಲು ಟೆಂಡರ್‌ನಲ್ಲಿ ಸೂಚಿಸಲಾಗಿದೆ.

ರಾಜಕೀಯ ನಾಯಕರ ಒಲವು ಯಾವ ಕಡೆಗೆ?: ಎರಡನೇ ವಿಮಾನ ನಿಲ್ದಾಣದ ಸ್ಥಳದ ಕುರಿತು ರಾಜ್ಯ ಸರ್ಕಾರದಲ್ಲಿ ಭಿನ್ನಾಭಿಪ್ರಾಯಗಳೂ ಇವೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕನಕಪುರ ರಸ್ತೆಯಲ್ಲಿ ವಿಮಾನ ನಿಲ್ದಾಣ ನಿರ್ಮಾಣವಾಗಬೇಕೆಂಬ ಒಲವು ಹೊಂದಿದ್ದರೆ, ಗೃಹ ಸಚಿವ ಜಿ. ಪರಮೇಶ್ವರ್ ಅವರು ತುಮಕೂರು ರಸ್ತೆಯ ಕಡೆಗೆ ಒಲವು ತೋರಿದ್ದಾರೆ. ಈ ರಾಜಕೀಯ ಹಗ್ಗಜಗ್ಗಾಟದ ನಡುವೆಯೇ ತಜ್ಞರ ವರದಿ ನಿರ್ಣಾಯಕವಾಗಲಿದೆ.

ಅಂತಿಮವಾಗಿ, ಡಿಜಿಸಿಎ, ರಕ್ಷಣಾ ಸಚಿವಾಲಯ ಮತ್ತು ಸ್ಥಳೀಯ ಪ್ರಾಧಿಕಾರಗಳಿಂದ ಅಗತ್ಯವಿರುವ ಅನುಮತಿಗಳ ಕುರಿತು ಸಲಹೆಗಾರರು ಸರ್ಕಾರಕ್ಕೆ ವರದಿ ನೀಡಲಿದ್ದಾರೆ.

ಕೆಎಸ್‌ಐಐಡಿಸಿ ಪ್ರಕಾರ, ಅಗತ್ಯವಿದ್ದರೆ ಮೌಲ್ಯಮಾಪನಕ್ಕಾಗಿ ಮತ್ತೊಂದು ಹೊಸ ಸ್ಥಳವನ್ನು ಸೇರಿಸುವ ಅವಕಾಶವನ್ನೂ ಮುಕ್ತವಾಗಿಡಲಾಗಿದೆ.

ತಮಿಳುನಾಡಿನ ಹೊಸೂರು ಎಫೆಕ್ಟ್

ಕರ್ನಾಟಕದ ಗಡಿಗೆ ಹೊಂದಿಕೊಂಡಿರುವ ಹೊಸೂರಿನಲ್ಲಿ ತಮಿಳುನಾಡು ಸರ್ಕಾರವು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ನಿರ್ಮಿಸಲು ವೇಗವಾಗಿ ಹೆಜ್ಜೆ ಇಡುತ್ತಿದೆ. ವಾರ್ಷಿಕ 3 ಕೋಟಿ ಪ್ರಯಾಣಿಕರನ್ನು ನಿರ್ವಹಿಸುವ ಸಾಮರ್ಥ್ಯದೊಂದಿಗೆ ಹೊಸೂರು ವಿಮಾನ ನಿಲ್ದಾಣ ರೂಪುಗೊಳ್ಳುತ್ತಿದ್ದು, ಇದು ಬೆಂಗಳೂರಿನ ಪ್ರಯಾಣಿಕರನ್ನು ಸೆಳೆಯುವ ಸಾಧ್ಯತೆಯಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರ ತನ್ನ ಪ್ರಕ್ರಿಯೆಯನ್ನು ತ್ವರಿತಗೊಳಿಸಿದೆ.

ಸಲಹೆಗಾರರ ಜವಾಬ್ದಾರಿಗಳೇನು?

- **ತಾಂತ್ರಿಕ ಸಮೀಕ್ಷೆ:** ಮಣ್ಣಿನ ಗುಣಮಟ್ಟ, ಭೌಗೋಳಿಕ ರಚನೆ, ಹವಾಮಾನ ಪರಿಸ್ಥಿತಿ ಮತ್ತು ವಿಮಾನ ಹಾರಾಟಕ್ಕೆ ಅಡ್ಡಿಯಾಗುವ ಅಡೆತಡೆಗಳ (ಒಎಲ್‌ಎಸ್) ಅಧ್ಯಯನ.
- **ಸಂಚಾರ ದಟ್ಟಣೆ ಅಂದಾಜು:** ಮುಂದಿನ 35 ವರ್ಷಗಳವರೆಗೆ (ಪ್ರತಿ 5 ವರ್ಷಕ್ಕೊಮ್ಮೆ) ಪ್ರಯಾಣಿಕರು ಮತ್ತು ಕಾರ್ಗೋ (ಸರಕು) ಸಾಗಣೆಯ ಬೇಡಿಕೆ ಎಷ್ಟಿರಲಿದೆ ಎಂಬ ವರದಿ.
- **ಸಂಪರ್ಕ ವ್ಯವಸ್ಥೆ:** ರಸ್ತೆ ಮತ್ತು ರೈಲು ಸಂಪರ್ಕದ ಲಭ್ಯತೆ ಮತ್ತು ಅಗತ್ಯತೆಗಳು
- **ಪರಿಸರ ಮತ್ತು ಅನುಮತಿ:** ಅರಣ್ಯ, ವನ್ಯಜೀವಿ ಧಾಮಗಳು ಮತ್ತು ಪರಿಸರ ಸಂಬಂಧಿತ ನಿಯಮಗಳ ಪರಿಶೀಲ

ಹುಲಿ ದಾಳಿಗೆ ಹಸು ಬಲಿ : ನಿಲ್ಲದ ವ್ಯಾಘ್ರ ಸರಣಿ ದಾಳಿಗೆ ಬೆಚ್ಚಿಬಿದ್ದ ರೈತಾಪಿ ವರ್ಗ

ಉದಯವಾಹಿನಿ ಚಿತ್ರ

• ಉದಯವಾಹಿನಿ, ಗುಂಡ್ಲುಪೇಟೆ

ಹಾಡಹಗಲೇ ಹುಲಿ ದಾಳಿಗೆ ಹಸುವೊಂದು ಬಲಿಯಾದ ಘಟನೆ ಬಂಡೀಪುರ ಹುಲಿ ಸಂರಕ್ಷಿತಾ ಪ್ರದೇಶದ ಗುಂಡ್ಲುಪೇಟೆ ಬಫರ್ ಜೋನ್ ವಲಯಕ್ಕೆ ಸೇರಿದ ದೇಪಾಪುರ ಗ್ರಾಮದಲ್ಲಿ ನಡೆದಿದೆ, ಇತ್ತ ವ್ಯಾಘ್ರ ಉಪಟಳ ನಿಯಂತ್ರಣಕ್ಕೆ ಬಂದಿದೆ ಎಂದು ನಿಟ್ಟುಸಿರು ಬಿಟ್ಟಿದ್ದ ರೈತಾಪಿ ವರ್ಗ ಮತ್ತಷ್ಟು ಆತಂಕಕ್ಕೆ ಒಳಗಾಗಿದ್ದು ಹಾಡಹಗಲೇ ವ್ಯಾಘ್ರ ದಾಳಿ ಕಂಡ ರೈತರು ಅಕ್ಷರಶಃ ಬೆಚ್ಚಿಬಿದ್ದಿದ್ದಾರೆ. ದೇಪಾಪುರ ಗ್ರಾಮದ ವೀರಭದ್ರಪ್ಪ ಎಂಬವರ ಜಮೀನಿನಲ್ಲಿ ಮೇಯಲು ಬಿಟ್ಟಿದ್ದ ಗುರುಮಲ್ಲಪ್ಪ ಎಂಬವರಿಗೆ ಸೇರಿದ ಹಸುವಿನ ಮೇಲೆರಗಿದ ವ್ಯಾಘ್ರ ಕೊಂದು ಹಾಕಿದೆ, ಹುಲಿ ದಾಳಿಯನ್ನ ಕಂಡ ಅಕ್ಕಪಕ್ಕದಲ್ಲಿದ್ದವರ ಕಿರುಚಾಟಕ್ಕೆ ವ್ಯಾಘ್ರ ಸ್ಥಳದಿಂದ ಓಡಿ ಹೋಗಿದೆ. ಮಾಹಿತಿ ತಿಳಿದ ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ದೌಡಾಯಿಸಿ ಪರಿಶೀಲನೆ ನಡೆಸಿದ್ದಾರೆ.

ಅಧಿಕಾರಿಗಳ ಜೊತೆ ಸ್ಥಳೀಯರ ವಾಗ್ವಾದ : ಹುಲಿ ದಾಳಿ ವಿಚಾರ ಕುರಿತಂತೆ ಗ್ರಾಮಕ್ಕೆ ಆಗಮಿಸಿದ ಅರಣ್ಯ ಇಲಾಖೆ ಅಧಿಕಾರಿಗಳ ಜೊತೆಗೆ ಸ್ಥಳೀಯ ರೈತರು ವಾಗ್ವಾದಕ್ಕಿಳಿದ ಘಟನೆ ನಡೆಯಿತು. ನಮಗೇನು ಪರಿಹಾರ ಬೇಡ ಪದೇಪದೇ ವ್ಯಾಘ್ರ ದಾಳಿ ನಡೆಸುತ್ತಿರುವ ಕುರಿತು ವರದಿಯಾಗುತ್ತಲಿದ್ದರೂ ಕಡಿವಾಣಕ್ಕೆ ಮುಂದಾಗದ ಅರಣ್ಯ ಇಲಾಖೆ ಬಲಿಯಾದ ಹಸುವಿಗೆ ಬದಲಾಗಿ ಮತ್ತೊಂದು ಹಸುವನ್ನ ರೈತನಿಗೆ ನೀಡಬೇಕು ಎಂದು ಪಟ್ಟುಹಿಡಿದರು.

ನೀವು ಕೊಡುವ ಪರಿಹಾರದ ಹಣದಿಂದ ನಮಗೇನು ಉಪಯೋಗವಿಲ್ಲ, ಕಾಡಿನನೊಳಗೆ ಅತಿಕ್ರಮ ಪ್ರವೇಶ ಮಾಡಿದ್ದರೆ ನಮ್ಮ ಅಭ್ಯಂತರವಿರಲಿಲ್ಲ ಆದರೆ ರೈತರ ಜಮೀನಿನಲ್ಲಿ ಪ್ರತ್ಯಕ್ಷವಾಗಿರುವ ವ್ಯಾಘ್ರನಿಂದ ಹಸು ಸಾವನ್ನಪ್ಪಿರುವುದಕ್ಕೆ ಇಲಾಖೆಯೇ ನೇರ ಹೊಣೆ ಹೊರುವ ಮೂಲಕ ಸಂತ್ರಸ್ತ ರೈತನಿಗೆ ಬದಲಿಯಾಗಿ ಹಸುವನ್ನ ನೀಡುವಂತೆ ಒತ್ತಾಯಿಸಿದ್ದು ಅರಣ್ಯ ಇಲಾಖೆಯ ನಡೆ ಮೇಲೆ ಉತ್ಸುಕತೆ ಎದುರಾಗಿದೆ.

ಸ್ಪರ್ಧಾ ಮನೋಭಾವ, ಆತ್ಮವಿಶ್ವಾಸವಿರಿಲಿ

• ಉದಯವಾಹಿನಿ, ಕುಶಾಲನಗರ

ಕ್ರೀಡಾಪಟುಗಳು ಸ್ಪರ್ಧಾ ಮನೋಭಾವ, ಆತ್ಮವಿಶ್ವಾಸದಿಂದ ಕ್ರೀಡಾ ಚಟುವಟಿಕೆಯಲ್ಲಿ ಪಾಲ್ಗೊಳ್ಳಬೇಕು. ಜತೆಗೆ ಸುರಕ್ಷತೆ, ತಂಡ ಮನೋಭಾವ, ಪರಸ್ಪರ ಗೌರವ ಕಾಪಾಡಿಕೊಳ್ಳಬೇಕು ಎಂದು ಸೈನಿಕ ಶಾಲೆಯ ನಿವೃತ್ತ ಪ್ರಾಂಶುಪಾಲ ಕರ್ನೋಡೋರ್ ಎಂ.ಟಿ. ರಮೇಶ್ ಸಲಹೆ ನೀಡಿದರು. ಸಮೀಪದ ಕೂಡಿಗೆ ಕೃಷಿ ಫಾರಂ ಆವರಣದಲ್ಲಿರುವ ಕೊಡಗು ಸೈನಿಕ ಶಾಲೆಯಲ್ಲಿ ಏರ್ಪಡಿಸಿದ್ದ 2025-26ನೇ ಸಾಲಿನ ವಾರ್ಷಿಕ ಕ್ರೀಡಾಕೂಟದಲ್ಲಿ ಪಾರಿವಾಳಗಳನ್ನು ಹಾರಿಬಿಡುವ ಮೂಲಕ ಚಾಲನೆ ನೀಡಿದರು. ಶಾಲೆಯು ಕ್ರೀಡೆ ಮತ್ತು ಪ್ರತ್ಯೇತರ ಚಟುವಟಿಕೆಗಳಲ್ಲಿನ ನಿರಂತರ ಸಾಧನೆ ಮಾಡಿದೆ. ಜೊತೆಗೆ ವಿದ್ಯಾರ್ಥಿಗಳು ಶಾಲೆಯ ಧೈರ್ಯ ವಾಕ್ಯವಾದ ವೀರತೆ, ಧೃಡತೆ ಹಾಗೂ ಪ್ರಾಮಾಣಿಕತೆಯನ್ನು ಸದಾ ಪಾಲಿಸುವುದರೊಂದಿಗೆ, ಕ್ರೀಡಾ ಮೈದಾನದ ಒಳಗೂ ಹಾಗೂ ಹೊರಗೂ ಶಿಸ್ತಿನಿಂದ ನಡೆದುಕೊಳ್ಳಬೇಕು ಎಂದರು.

ಉದಯವಾಹಿನಿ ಚಿತ್ರ

ಮೇಕೆದಾಟು ಯೋಜನೆಯಲ್ಲಿ ಮಹತ್ವದ ಬೆಳವಣಿಗೆ, ರಾಮನಗರದಲ್ಲಿ ಯೋಜನಾ ಕಚೇರಿ

ಮೇಕೆದಾಟು ಯೋಜನೆ ಮುಂದುವರಿಸಲು ಹಸಿರು ನಿಶಾನೆ

• ಉದಯವಾಹಿನಿ, ರಾಮನಗರ

ಮೇಕೆದಾಟು ಯೋಜನೆ ತ್ವರಿತ ಅನುಷ್ಠಾನಕ್ಕೆ ರಾಜ್ಯ ಸರಕಾರ ಮುಂದಾಗಿದ್ದು, ಈ ಕುರಿತು ಮಹತ್ವದ ಆದೇಶ ಹೊರಡಿಸಿದೆ. ಕರ್ನಾಟಕ ಎಂಜಿನಿಯರಿಂಗ್ ಸಂಶೋಧನಾ ಕೇಂದ್ರದ ನಿರ್ದೇಶಕರ ನೇತೃತ್ವದಲ್ಲಿ ವಿಶೇಷ ತಂಡ ರಚನೆ ಮಾಡಿದ್ದು, ಬೆಂಗಳೂರು ದಕ್ಷಿಣ ಜಿಲ್ಲೆಯ ಜಿಲ್ಲಾ ಕೇಂದ್ರ ರಾಮನಗರದಲ್ಲೇ ಮೇಕೆದಾಟು ಯೋಜನಾ ಕಚೇರಿ ತೆರೆಯಲು ಮುಂದಾಗಿದೆ. ಬೆಂಗಳೂರು ದಕ್ಷಿಣ ಜಿಲ್ಲೆಯ ಕನಕಪುರ ತಾಲ್ಲೂಕು ಮೇಕೆದಾಟು ಬಳಿ ಕಾವೇರಿ ನದಿಗೆ ಅಡ್ಡಲಾಗಿ ಸಮತೋಲಿತ ಜಲಾಶಯ ನಿರ್ಮಿಸುವುದು ಕರ್ನಾಟಕ ಸರಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿದೆ.

- ಮೇಕೆದಾಟು ಯೋಜನೆ ತ್ವರಿತ ಅನುಷ್ಠಾನಕ್ಕಾಗಿ ವಿಶೇಷ ತಂಡವನ್ನು ರಚಿಸಿದ ರಾಜ್ಯ ಸರಕಾರ
- ರಾಮನಗರದಲ್ಲೇ ಯೋಜನಾ ಕಚೇರಿಯನ್ನು ತೆರೆಯಲು ತೀರ್ಮಾನ
- ತಮಿಳುನಾಡು ಸರಕಾರದ ಅರ್ಜಿಯನ್ನು ವಜಾಗೊಳಿಸಿರುವ ಸುಪ್ರೀಂ ಕೋರ್ಟ್

ಈ ಮೂಲಕ ಬೆಂಗಳೂರು ಸೇರಿದಂತೆ ನಾನಾ ಜಿಲ್ಲೆಗಳ ಕುಡಿವ ನೀರಿನ ಸಮಸ್ಯೆ ಬಗೆಹರಿಸುವುದು, ವಿದ್ಯುತ್ ಉತ್ಪಾದನೆ ಸರಕಾರದ ಉದ್ದೇಶವಾಗಿದೆ.

ಆದರೆ, ಏಳು ವರ್ಷದಿಂದ ತಮಿಳುನಾಡು ಸರಕಾರ ಇದಕ್ಕೆ ಅಡ್ಡಗಾಲು ಹಾಕುತ್ತಲೇ ಬರುತ್ತಿತ್ತು, ಈ ಯೋಜನೆಗೆ ತಡೆಕೋರಿ ಸುಪ್ರೀಂಗೆ ಅರ್ಜಿ ಸಲ್ಲಿಸಿತ್ತು.

ಆದರೆ, ತಮಿಳುನಾಡು ಸರಕಾರ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸುವುದರೊಂದಿಗೆ ಮೇಕೆದಾಟು ಯೋಜನೆ ಮುಂದುವರಿಸಲು ಹಸಿರು ನಿಶಾನೆ ಸಿಕ್ಕಂತಾಗಿದೆ. ಸುಪ್ರೀಂ ಕೋರ್ಟ್ ನಿರ್ಧಾರದ ಬೆನ್ನಲ್ಲೇ ರಾಜ್ಯ ಸರಕಾರ ಕಾರ್ಯಪ್ರವೃತ್ತವಾಗಿದೆ.

ಕೆಇಆರ್‌ಎಸ್ ನಿರ್ದೇಶಕರಿಗೆ ಯೋಜನೆ ಜಾರಿ ಜವಾಬ್ದಾರಿ: ನ.18ರಂದು ಜಲಸಂಪನ್ಮೂಲ ಸಚಿವರೂ ಆಗಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮೇಕೆದಾಟು ಯೋಜನೆ ತ್ವರಿತ ಜಾರಿಗಾಗಿ ಮುಖ್ಯ ಇಂಜಿನಿಯರ್ ಕಚೇರಿ ಹಾಗೂ ಒಬ್ಬರು ಅಧೀಕ್ಷಕ ಎಂಜಿನಿಯರ್ ಕಚೇರಿ ಆರಂಭಿಸಲು ನಿರ್ಧರಿಸಲಾಗಿತ್ತು. ಆದರೆ, ಹೊಸದಾಗಿ ಕಚೇರಿ ಸ್ಥಾಪನೆ ಹಾಗೂ ಹುದ್ದೆಗಳ ನೇಮಕಕ್ಕೆ ಆರ್ಥಿಕ ಇಲಾಖೆ ಅನುಮತಿ ಅಗತ್ಯವಾಗಿದ್ದು, ಇದಕ್ಕೆ ಬಹಳಷ್ಟು ಸಮಯಾವಕಾಶದ ಅವಶ್ಯಕತೆಯಿತ್ತು. ಈ ಹಿನ್ನೆಲೆಯಲ್ಲಿ ಸರಕಾರ ಈ ಯೋಜನೆ ಜಾರಿಯ ಜವಾಬ್ದಾರಿಯನ್ನು ಕೆಇಆರ್‌ಎಸ್ ನಿರ್ದೇಶಕರಿಗೆ ವಹಿಸಿದೆ.

ಅಧಿಕಾರಿಗಳು ಮತ್ತು ಸಿಬ್ಬಂದಿ ತಂಡ: ಕೆಇಆರ್‌ಎಸ್ ಸಂಸ್ಥೆ ತನ್ನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಹಾಗೂ ನೌಕರರನ್ನು ಒಳಗೊಂಡ ತಂಡ ರಚಿಸಿ ಮೇಕೆದಾಟು ಯೋಜನೆ ಜಾರಿ ಜವಾಬ್ದಾರಿ ನೀಡಲಾಗಿದೆ. ಈ ತಂಡಕ್ಕೆ ಒಬ್ಬ ಕಾರ್ಯಪಾಲಕ ಎಂಜಿನಿಯರ್, ಮೂವರು ತಾಂತ್ರಿಕ ಸಹಾಯಕರು, ಆರು ಮಂದಿ ಸಹಾಯಕ ಎಂಜಿನಿಯರ್, ಒಬ್ಬರು ಸಹಾಯಕ ಆಡಳಿತಾಧಿಕಾರಿ, ಒಬ್ಬ ಲೆಕ್ಕಾಧೀಕ್ಷಕರು, ಅಧೀಕ್ಷಕರು, ಪ್ರಥಮ ದರ್ಜೆ ಲೆಕ್ಕ ಸಹಾಯಕರು, ಇಬ್ಬರು ಪ್ರಥಮ ದರ್ಜೆ ಸಹಾಯಕರು, ಒಬ್ಬ ದ್ವಿತಿಯ ದರ್ಜೆ ಲೆಕ್ಕ ಸಹಾಯಕರು, ನಾಲ್ವರು ದ್ವಿತೀಯ ದರ್ಜೆ ಸಹಾಯಕರು, ಒಬ್ಬ ಶೀಘ್ರ ಲಿಪಿಗಾರರು, ನಾಲ್ವರು ಬೆರಳಚ್ಚುಗಾರರು, ಒಬ್ಬ ವಾಹನ ಚಾಲಕ, ಇಬ್ಬರು ಗ್ರೂಪ್ ಡಿ ಸಿಬ್ಬಂದಿ, 1 ಕಾವಲುಗಾರನನ್ನು ನೇಮಿಸಲಾಗಿದೆ.

ರಾಮನಗರವೇ ಕೇಂದ್ರ ಸ್ಥಾನ: ಸರಕಾರದ ಆದೇಶದ ಪ್ರಕಾರ ಮೇಕೆದಾಟು ಯೋಜನೆ ತ್ವರಿತ ಅನುಷ್ಠಾನಕ್ಕಾಗಿ ರಚನೆಯಾಗಲಿರುವ ಈ ತಂಡ ರಾಮನಗರವನ್ನೇ ಕೇಂದ್ರ ಸ್ಥಾನವಾಗಿಟ್ಟುಕೊಂಡು ಕೆಲಸ ನಿರ್ವಹಿಸಲಿದೆ. ರಾಮನಗರದಲ್ಲೇ ಮೇಕೆದಾಟು ಯೋಜನೆಯ ಕಚೇರಿ ಸ್ಥಾಪಿಸಲಾಗುವುದು ಎಂದು ಆದೇಶದಲ್ಲಿ ತಿಳಿಸಲಾಗಿದೆ.

ರಾಮನಗರದಲ್ಲಿಯೇ ಏಕೆ ?: ಈಗಾಗಲೇ ಹಾರೋಬೆಲೆಯಲ್ಲಿ ಮೇಕೆದಾಟು ಯೋಜನಾ ಕಚೇರಿ ಆರಂಭಿಸಲಾಗಿತ್ತು. ಆದರೆ, ಈ ಮೇಕೆದಾಟು ಯೋಜನೆ ಕೇವಲ ಬೆಂ.ದಕ್ಷಿಣ ಜಿಲ್ಲೆಯನ್ನು ಮಾತ್ರ ಒಳಗೊಂಡಿಲ್ಲ. ಬದಲಾಗಿ ಮಂಡ್ಯ, ಚಾಮರಾಜನಗರ ಜಿಲ್ಲೆಗಳನ್ನು ಒಳಗೊಂಡಿದೆ. ಹೀಗಾಗಿ ಎಲ್ಲಾ ಜಿಲ್ಲೆಗಳಿಗೆ ಅನುಕೂಲವಾಗುವಂತೆ, ಅದರಲ್ಲಿಯೂ ಮಂಡ್ಯಕ್ಕೆ ಹತ್ತಿರವಾಗುವಂತೆ ರಾಮನಗರದಲ್ಲಿ ಮೇಕೆದಾಟು ಯೋಜನೆ ಕಚೇರಿ ಆರಂಭಿಸಲಾಗುತ್ತಿದೆ.

ಕಚೇರಿ ನಿರ್ವಹಣೆ ಹೇಗೆ?: ಮೇಕೆದಾಟು ಯೋಜನೆ ಕಚೇರಿ ಕಟ್ಟಡ ವ್ಯವಸ್ಥೆಗೆ ಕಾವೇರಿ ನೀರಾವರಿ ನಿಗಮ ನಿಯಮಿತ ಕ್ರಮ ಕೈಗೊಳ್ಳಲಿದೆ. ಈ ತಂಡ ಕೆಎನ್‌ಎನ್‌ಎಲ್‌ನ ವ್ಯವಸ್ಥಾಪಕ ನಿರ್ದೇಶಕರ ಅಧೀನದಲ್ಲಿ ಕಾರ್ಯನಿರ್ವಹಿಸಲಿದ್ದು, ಕಚೇರಿ ನಿರ್ವಹಣೆ, ಮೂಲ ಸೌಕರ್ಯ ಹಾಗೂ ಇತರೆ ವೆಚ್ಚವನ್ನು ಕೆಎನ್‌ಎನ್‌ಎಲ್ ಅನುದಾನದಿಂದ ಭರಿಸಲಾಗುವುದು. ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಎಲ್ಲಾ ಕಡತ, ಪತ್ರ ವ್ಯವಹಾರ, ಹಾಗೂ ಇನ್ನಿತರೆ ದಾಖಲೆಗಳನ್ನು ಕೆಇಆರ್‌ಎಸ್ ನಿರ್ದೇಶಕರಿಗೆ ಹಸ್ತಾಂತರಿಸುವಂತೆ ಕೆಎನ್‌ಎನ್‌ಎಲ್‌ನ ವ್ಯವಸ್ಥಾಪಕ ನಿರ್ದೇಶಕರಿಗೆ ಸೂಚಿಸಲಾಗಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಉದಯವಾಹಿನಿ ಚಿತ್ರ

ಆರಂಭಿಕ ಅಡ್ಡಿ ನಿವಾರಣೆ

ಬೆಂಗಳೂರು ಮತ್ತು ಸುತ್ತಮುತ್ತಲಿನ ಜಿಲ್ಲೆಗಳ ನೀರಿನ ದಾಹ ತಣಿಸಲು, ವಿದ್ಯುತ್ ಉತ್ಪಾದನೆಗೆ ಉತ್ತೇಜನ ನೀಡಲು ರಾಜ್ಯ ಸರ್ಕಾರ ಮೇಕೆದಾಟು ಯೋಜನೆಗೆ ಚಾಲನೆ ನೀಡಿದೆ. ಕರ್ನಾಟಕ ಎಂಜಿನಿಯರಿಂಗ್ ಸಂಶೋಧನಾ ಕೇಂದ್ರದ ನಿರ್ದೇಶಕರ ಮಾರ್ಗದರ್ಶನದಲ್ಲಿ ವಿಶೇಷ ತಂಡ ರಚನೆಯಾಗಿದ್ದು, ರಾಮನಗರದಲ್ಲಿ ಯೋಜನೆ ಕಚೇರಿ ಸ್ಥಾಪನೆಯಾಗಲಿದೆ. ಸುಪ್ರೀಂ ಕೋರ್ಟ್ ತಮಿಳುನಾಡಿನ ಅರ್ಜಿಯನ್ನು ವಜಾಗೊಳಿಸಿರುವುದರಿಂದ ಯೋಜನೆಗೆ ಇದ್ದ ಆರಂಭಿಕ ಅಡ್ಡಿ ನಿವಾರಣೆಯಾಗಿದೆ.

ಅಂಕಿ-ಅಂಶ

- ಮೇಕೆದಾಟು ಜಲಾಶಯದ ಅಂದಾಜು ವೆಚ್ಚ- 9,000 ಕೋಟಿ ರೂ.
- ಅಣೆಕಟ್ಟೆ ಎತ್ತರ - 441.2 ಮೀಟರ್
- ನೀರಿನ ಸಂಗ್ರಹ - 66.5 ಟಿಎಂಸಿ
- ಡೆಡ್ ಸ್ಟೋರೆಜ್ - 7.7 ಟಿಎಂಸಿ
- ವಿದ್ಯುತ್ ಉತ್ಪಾದನೆ - 400 ಮೆಗಾ ವ್ಯಾಟ್

ಪರಿಷ್ಕೃತ ಡಿಪಿಆರ್ ಸಲ್ಲಿಕೆಗೆ ಸಿದ್ಧತೆ: ಮೇಕೆದಾಟು ಯೋಜನೆಗೆ ಪರಿಷ್ಕೃತ ಡಿಪಿಆರ್ ತಯಾರಿಸಿ ಕೇಂದ್ರ ಸರಕಾರಕ್ಕೆ ಸಲ್ಲಿಸುವುದಾಗಿ ಈಗಾಗಲೇ ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿಕೊಂಡಿದ್ದಾರೆ. ಈ ಹಿಂದೆ ಸಲ್ಲಿಸಿದ್ದ ಡಿಪಿಆರ್ ತಿರಸ್ಕಾರಗೊಂಡಿದೆ. ಹೀಗಾಗಿ ಅದರಲ್ಲಿದ್ದ ಲೋಪದೋಷಗಳನ್ನು ಸರಿಪಡಿಸಿ ಹೊಸದಾಗಿ ಡಿಪಿಆರ್ ಸಲ್ಲಿಸಲು ಸರಕಾರ ಸಿದ್ಧತೆ ನಡೆಸಿದೆ. ಇದರಲ್ಲಿ ಯೋಜನೆಯ ಸಂಪೂರ್ಣ ವಿವರ, ಎಷ್ಟು ಅರಣ್ಯ ಪ್ರದೇಶ ಮುಳುಗಡೆಯಾಗಲಿದೆ ಎಂಬುದರ ಬಗ್ಗೆ ಮಾಹಿತಿ ಇರಲಿದೆ. ಈ ಡಿಪಿಆರ್ ಸಿದ್ಧಪಡಿಸುವ ಕೆಲಸವನ್ನು ಸಹ ಈ ತಂಡ ಮಾಡಲಿದೆ.

ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ಕಡ್ಡಾಯ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಜಿಲ್ಲೆಯಾದ್ಯಂತ ಇಂದಿನಿಂದ ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ಕಡ್ಡಾಯವಾಗಿದ್ದು ಹೆಲೆಟ್ ಹಾಕದೆ ವಾಹನ ಚಲಾಯಿಸಿದರೆ ದಂಡ ಖಚಿತ ಎಂದು ಜಿಲ್ಲಾ ಪೊಲೀಸ್ ಇಲಾಖೆ ಈಗಾಗಲೇ ಎಚ್ಚರಿಕೆ ನೀಡಿದೆ. ಅದರಂತೆ ಜಿಲ್ಲೆಯ ಜಿಲ್ಲಾ ಕೇಂದ್ರದಲ್ಲಿ ಬೆಳಗ್ಗೆಯಿಂದಲೇ ಪೊಲೀಸರು ನಾನಾ ಪ್ರಮುಖ ವೃತ್ತಗಳಲ್ಲಿ ಕಾರ್ಯಾಚರಣೆಯಲ್ಲಿ ತೊಡಗಿದ್ದು ಹೆಲೆಟ್ ಹಾಕಿಕೊಂಡು ಬಾರದವರ ಬಗ್ಗೆ ತೀವ್ರ ನಿಗಾ ಇಟ್ಟು ದಂಡ ವಿಧಿಸುವ ಕಾರ್ಯಕ್ಕೆ ಕಟ್ಟುನಿಟ್ಟಿನ ಕ್ರಮ ವಹಿಸಿದ್ದಾರೆ.

ಇದಕ್ಕೆ ಪೂರಕವಾಗಿ ಇಂದು ಸಹ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಪೊಲೀಸ್ ಉಪ ಅಧಿಕ್ಷಕ, ನಗರ, ಸಂಚಾರಿ ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ಸೇರಿ ಎಲ್ಲಾ ಪೊಲೀಸ್ ಅಧಿಕಾರಿಗಳ ಮೂಲಕ ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಮುಂಭಾಗದಲ್ಲಿ ಚಿಕ್ಕಬಳ್ಳಾಪುರ ನಗರ ಪೊಲೀಸ್, ಸಂಚಾರಿ ಪೊಲೀಸ್ ಠಾಣೆಯ ಹೆಲೆಟ್ ಧರಿಸಿ ಬೈಕ್ ಸವಾರಿ ನಡೆಸುವ ಮೂಲಕ ಚಾಲನೆ ನೀಡಿದರು.

ಪೊಲೀಸರ ಹೆಲೆಟ್ ಕಡ್ಡಾಯಗೊಳಿಸಿ ಜಾಗೃತಿ ಮೂಡಿಸುತ್ತಿದ್ದಂತೆ ಸಮಾಜ ಸೇವಕ ಹೋಟೆಲ್ ಮಾಲೀಕ ಹೆಲೆಟ್ ರಾಮಣ್ಣ ಎಂಬವರು ಪ್ರತಿ ವರ್ಷದಂತೆ ಈ ವರ್ಷವೂ ಸಹ ನೂರಕ್ಕೂ ಅಧಿಕ ಹೆಲೆಟ್‌ಗಳನ್ನು ಉಚಿತವಾಗಿ ನೀಡಿ ಉದಾರ ತೋರಿದರು. ಅಲ್ಲದೆ ಪ್ರತಿಯೊಬ್ಬರು ಹೆಲೆಟ್ ಹಾಕಿಕೊಂಡು ವಾಹನ ಚಲಾಯಿಸಬೇಕು, ಇತರರಿಗೂ ಹೆಲೆಟ್ ಬಳಕೆಯಿಂದ ಆಗುವ ಉಪಯೋಗದ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಹೆಲ್ಮೆಟ್ ರಾಮಣ್ಣ ಅವರು ಸಲಹೆ ನೀಡಿದರು.

ಸಾಕಷ್ಟು ಜಾಗೃತಿ

ಜಿಲ್ಲೆಯ ಜಿಲ್ಲಾ ಕೇಂದ್ರ ಚಿಕ್ಕಬಳ್ಳಾಪುರ, ಗುಡಿಬಂಡೆ, ಗೌರಿಬಿದನೂರು, ಬಾಗೇಪಲ್ಲಿ, ಚೇಳೂರು ಶಿಡ್ಲಘಟ್ಟ, ಮಂಚೇನಹಳ್ಳಿ ಏಳು ತಾಲ್ಲೂಕುಗಳಲ್ಲಿ ಹೆಲೆಟ್ ಕಡ್ಡಾಯವನ್ನು ಜಾರಿಗೊಳಿಸಲಾಗಿದ್ದು ಈ ಕಡ್ಡಾಯದ ಕುರಿತು ಈಗಾಗಲೇ ಕಳೆದ ಒಂದು ತಿಂಗಳಿಂದಲೂ ಜಿಲ್ಲೆಯಾದ್ಯಂತ ಸಾಕಷ್ಟು ಜಾಗೃತಿ ಮೂಡಿಸಿ ಅನೇಕ ಕಾರ್ಯಕ್ರಮಗಳನ್ನು ರೂಪಿಸಿ ಇದಕ್ಕೆ ಪೊಲೀಸ್ ಇಲಾಖೆ ಜೊತೆ ಹಲವು ಸಂಘ ಸಂಸ್ಥೆಗಳು, ಸಂಘಟನೆಗಳು ಕೈ ಜೋಡಿಸಿದ್ದವು.

ಕ್ರೀಡಾ ಪ್ರತಿಭೆಯಿಂದ ದೇಶದ ಘನತೆ ಉತ್ತುಂಗಕ್ಕೆ

• ಉದಯವಾಹಿನಿ, ಗುಂಡ್ಲುಪೇಟೆ

ಕ್ರೀಡಾ ಪ್ರತಿಭೆಯಿಂದ ದೇಶದ ಘನತೆಯನ್ನ ಉತ್ತುಂಗಕ್ಕೆ ಕೊಂಡೊಯ್ಯಲು ಸಾಧ್ಯವಿದೆ ಎಂದು ಯುವ ವಿಜ್ಞಾನಿ ಡಾ.ನವೀನ್ ಮೌರ್ಯ ಹೇಳಿದರು. ದೇಶದ ಯುವಕರಲ್ಲಿ ಅಡಗಿರುವ ಅಸಮಾನ್ಯ ಪ್ರತಿಭೆಯನ್ನ ಜಗಜ್ಜಾಹೀರುಗೊಳಿಸಲು ವಿವಿಧ ವೇದಿಕೆಗಳಿರುವಂತೆ ಕ್ರೀಡಾಕೂಟವು ಒಂದು ಭಾಗವಾಗಿದೆ ಎಂದು ಅಭಿಪ್ರಾಯ ಪಟ್ಟರು. ತಾಲ್ಲೂಕಿನ ರಾಘವಪುರ ಗ್ರಾಮದ ಅಭಿಮಾನಿಗಳು ಆಯೋಜನೆ ಮಾಡಿದ್ದ ಜೈ ಭೀಮ್ ರೆವಿಲ್ಯೂಷನ್ ಕ್ರಿಕೆಟ್ ಪಂದ್ಯಾವಳಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ತಾಲ್ಲೂಕಿನ ರಾಘವಪುರ ಗ್ರಾಮದ ಅಭಿಮಾನಿಗಳು ಅಂಬೇಡ್ಕರ್ ಅವರ ತತ್ವ ಆದರ್ಶಗಳನ್ನ ಪಾಲನೆ ಮಾಡುವ ಶಿಸ್ತುಬದ್ಧ ಸೈನಿಕರಾಗಿದ್ದಾರೆ, 75ನೇ ಸಂವಿಧಾನ ದಿನಾಚರಣೆ ಅಂಗವಾಗಿ ಕ್ರಿಕೆಟ್ ಪಂದ್ಯಾವಳಿ ಆಯೋಜನೆ ಮಾಡಿರುವುದು ಸಂತಸಕರ ಸಂಗತಿಯಾಗಿದೆ ಎಂದರು. ಜೈ ಭೀಮ್ ರೆವಿಲ್ಯೂಷನ್ ಕ್ರಿಕೆಟ್ ಟೂರ್ನಮೆಂಟ್ ಮೂಲಕ ತಾಲ್ಲೂಕಿನ ಎಲ್ಲಾ ಕ್ರೀಡಾಳುಗಳನ್ನ ಒಂದೆಡೆ ಸೇರಿಸುವ ಕೆಲಸ ಮಾಡಿರುವುದು ಸರ್ವಧರ್ಮ ಸಮನ್ವಯತೆಯನ್ನ ಎತ್ತಿಹಿಡಿಯುತ್ತಿದೆ ಎಂದು ಶ್ಲಾಘಿಸಿದರು. ಕ್ರೀಡೆಯಲ್ಲಿ ಸೋಲು ಗೆಲುವು ಸಹಜವಾಗಿದ್ದರು ಪ್ರಮುಖ ಘಟ್ಟದ ಸಾಧನೆ ಸೇತುವಾಗಿ ಪಂದ್ಯಾವಳಿ ಪ್ರಮುಖ ಪಾತ್ರವಹಿಸುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಪ್ರಮುಖರಾದ ಸೋಮಹಳ್ಳಿ ಗುರುಪ್ರಸಾದ್, ಸುಭಾಷ್ ಮಾಡ್ರಹಳ್ಳಿ, ಆರ್.ಡಿ.ಉಲ್ಲಾಸ್ ಕ್ರೀಡಾಳುಗಳ ಕುರಿತು ಮಾತನಾಡಿದರು.

ಈ ಸಂಧರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಗೋವಿಂದರಾಜು, ಉಪಾಧ್ಯಕ್ಷೆ ಸುಧಾರಾಣಿ, ನವೀನ್ ಸೇರಿದಂತೆ

ಅಂತರಾಳದಿಂದ... EDITORIAL

ಜೀವವೈವಿಧ್ಯ ತಾಣ ರದ್ದು ನಿರ್ಧಾರ ಜನವಿರೋಧಿ, ಪರಿಸರಕ್ಕೆ ಮಾರಕ

ಉದಯವಾಹಿನಿ ಚಿತ್ರ

ಬೆಂಗಳೂರಿನ ರೈಲ್ವೆ ಕಂಟೋನ್ಮೆಂಟ್ ಕಾಲೊನಿಯಲ್ಲಿ 371 ಮರಗಳಿರುವ 8.61 ಎಕರೆ ಪ್ರದೇಶವನ್ನು 'ಜೀವವೈವಿಧ್ಯ ಪಾರಂಪರಿಕ ತಾಣ' (ಬಿಎಚ್‌ಎಸ್) ಎಂದು ಹೊರಡಿಸಿದ್ದ ಆದೇಶವನ್ನು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆ ಹಿಂಪಡೆದಿದೆ. ಈ ನಿರ್ಧಾರ, ಪರಿಸರ ಸಂರಕ್ಷಣೆಯ ಬಗ್ಗೆ ಸರ್ಕಾರಕ್ಕಿರುವ ಬದ್ಧತೆಯ ಕೊರತೆಯನ್ನು ಸಂಕೇತಿಸುವಂತಿದೆ. ಹಸುರು ವಲಯಗಳೇ ವಿರಳವಾಗಿರುವ ಸಂದರ್ಭದಲ್ಲಿ, ಪಾರಿಸರಿಕ ಪ್ರದೇಶಗಳಿಗೆ ಇರುವ ಕಾನೂನಿನ ಸುರಕ್ಷತೆಯನ್ನು ಬಿಟ್ಟುಕೊಡುವ ನಿರ್ಧಾರಗಳನ್ನು ಆತ್ಮಹತ್ಯೆಘಾತುಕ ಕೃತ್ಯವೆಂದೇ ಭಾವಿಸಬೇಕಾಗುತ್ತದೆ. ಈ ಮೊದಲು, ಬೆಂಗಳೂರು ಉಪನಗರ ರೈಲ್ವೆ ಯೋಜನೆಗೆ ನಿಧಿ ಸಂಗ್ರಹಿಸುವುದಕ್ಕಾಗಿ ರೈಲ್ವೆ ಭೂ ಅಭಿವೃದ್ಧಿ ಪ್ರಾಧಿಕಾರ, ವಸಂತನಗರ ದಂಡು ಪ್ರದೇಶದ ಬಳಿಯಿರುವ ಕಾಲೊನಿಯಲ್ಲಿನ ಈ ಪ್ರದೇಶವನ್ನು ಖಾಸಗಿ ಸಂಸ್ಥೆಯೊಂದಕ್ಕೆ 60 ವರ್ಷಗಳ ಗುತ್ತಿಗೆ ನೀಡಿತ್ತು. ಗುತ್ತಿಗೆ ಪಡೆದವರು ಬೃಹತ್ ಮರಗಳನ್ನು ಕಡಿಯಲು ಮುಂದಾದಾಗ, ನಾಗರಿಕರು ಮತ್ತು ಪರಿಸರ ಕಾರ್ಯಕರ್ತರ ಪ್ರತಿರೋಧ ಎದುರಾಗಿತ್ತು. ಮರಗಳನ್ನು ಕಡಿಯುವುದರ ವಿರುದ್ಧ ಸಾವಿರಾರು ಜನರು ಸರ್ಕಾರಕ್ಕೆ ಪತ್ರ ಹಾಗೂ ಇ-ಮೇಲ್ ಬರೆಯುವ ಮೂಲಕ ಅಂದೋಲನ ತೀವ್ರ ಸ್ವರೂಪ ಪಡೆದುಕೊಂಡಿತ್ತು. ಆ ಹೋರಾಟದಿಂದಾಗಿ, ಜೀವವೈವಿಧ್ಯ ಕಾಯ್ದೆ-2002ರ ನಿಬಂಧನೆಗಳ ಅಡಿಯಲ್ಲಿ 8.61 ಎಕರೆ ಪ್ರದೇಶವನ್ನು 'ಬಿಎಚ್‌ಎಸ್' ಎಂದು 2025ರ ಸೆಪ್ಟೆಂಬರ್‌ನಲ್ಲಿ ಘೋಷಿಸಲಾಗಿತ್ತು. ಈಗ ಆ ಪ್ರಕಟಣೆಯನ್ನು ಇದ್ದಕ್ಕಿದ್ದಂತೆ ಹಿಂದಕ್ಕೆ ಪಡೆದಿರುವುದರಿಂದಾಗಿ, ಮರಗಳ ಸುರಕ್ಷತೆಗೆ ಮತ್ತೆ ಗಂಡಾಂತರ ಎದುರಾದಂತಾಗಿದೆ. ಸಸ್ಯಪ್ರಭೇದಗಳ ಜೊತೆಗೆ, ಅಲ್ಲಿನ ಪರಿಸರದಲ್ಲಿ ಆಸರೆ ಕಂಡುಕೊಂಡಿರುವ ಪಕ್ಷಿ ಹಾಗೂ ಕೀಟ ಸಂಕುಲಗಳೂ ಅಪಾಯ ಎದುರಿಸುವಂತಾಗಿದೆ.

ಮೂರು ತಿಂಗಳ ಹಿಂದಷ್ಟೇ ಹೊರಡಿಸಲಾಗಿದ್ದ ಆದೇಶವನ್ನು ಹಿಂಪಡೆದಿರುವುದಕ್ಕೆ ಅರಣ್ಯ ಇಲಾಖೆ ಯಾವುದೇ ಸ್ಪಷ್ಟ ಕಾರಣಗಳನ್ನು ನೀಡಿಲ್ಲ. ರೈಲ್ವೆ ಇಲಾಖೆಯ ಲಾಭದಾಯಕ ಯೋಜನೆಗಳಿಗೆ ಉತ್ತೇಜನ ನೀಡುವುದಕ್ಕೆ ಉತ್ಸುಕವಾದಂತಿರುವ ಸರ್ಕಾರ, ಅದಕ್ಕೆ ತೆರಬೇಕಾದ ಬೆಲೆಯನ್ನು ನಿರ್ಲಕ್ಷಿಸಿದೆ. ಪರಿಸರ ಕಾಳಜಿ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ಸರ್ಕಾರ ತನ್ನ ನಿಲುವಿನಿಂದ ಹಿಂದಕ್ಕೆ ಸರಿದು, 8.61 ಎಕರೆ ಪ್ರದೇಶಕ್ಕೆ ನೀಡಿದ್ದ 'ಬಿಎಚ್‌ಎಸ್' ಮಾನ್ಯತೆಯ ಸುರಕ್ಷತೆಯನ್ನು ವಿಳಂಬವಿಲ್ಲದೆ ಮತ್ತೆ ಜಾರಿಗೊಳಿಸಬೇಕು.

ಅರಣ್ಯ ಇಲಾಖೆ ನಿರ್ಧಾರ ಬದಲಿಸಿರುವುದರ ಹಿಂದೆ ಇರುವ ಕಾರಣಗಳು ಬಹಿರಂಗವಾಗಬೇಕು. ರಿಯಲ್ ಎಸ್ಟೇಟ್ ಉದ್ಯಮದ ಒತ್ತಡಕ್ಕೆ ಮಣಿದು ಅರಣ್ಯ ಇಲಾಖೆ ತನ್ನ ಬದ್ಧತೆಯಿಂದ ಹಿಂದಕ್ಕೆ ಸರಿದಿದೆ ಎಂದು ಹೇಳಲಾಗುತ್ತಿದೆ. ಸರ್ಕಾರದ ಈ ಕ್ರಮ ಸಾರ್ವಜನಿಕ ಹೋರಾಟಗಳನ್ನು ಅಗೌರವಿಸುವ ನಡೆಯೂ ಆಗಿದೆ. ಬೆಂಗಳೂರು ಮಹಾನಗರದ ಪರಿಸರ ಸಂರಕ್ಷಣೆಗೆ ಸಂಬಂಧಿಸಿದಂತೆ ಸರ್ಕಾರದ ಚಿಂತನೆಗಳು ದೂರದೃಷ್ಟಿಯ ಕೊರತೆಯನ್ನು ಹೊಂದಿವೆ.

ಸಂಚಾರ ದಟ್ಟಣೆಯನ್ನು ಕಡಿಮೆ ಮಾಡುವ ನೆಪದಲ್ಲಿ ರಾಜ್ಯ ಸರ್ಕಾರ ನಿರ್ಮಿಸಲು ಉದ್ದೇಶಿಸಿರುವ ಜೋಡಿ ಸುರಂಗ ರಸ್ತೆ ನಿರ್ಮಾಣ ಯೋಜನೆಯಿಂದ, ಲಾಲ್‌ಬಾಗ್ ಉದ್ಯಾನದ ಜೀವವೈವಿಧ್ಯಕ್ಕೆ ಧಕ್ಕೆ ಉಂಟಾಗುವ ಆತಂಕವನ್ನು ಪರಿಸರ ತಜ್ಞರು ವ್ಯಕ್ತಪಡಿಸಿದ್ದಾರೆ. ಒಳಚರಂಡಿ ಮತ್ತು ರಾಜ ಕಾಲುವೆ ಮಾರ್ಗಗಳ ಮೇಲೂ ಸುರಂಗ ಮಾರ್ಗ ಪರಿಣಾಮ ಬೀರಬಹುದು ಎಂದು ಹೇಳಲಾಗುತ್ತಿದೆ. ಕೆರೆಗಳಿಗೆ ಕಡ್ಡಾಯವಾಗಿದ್ದ 30 ಮೀಟರ್ ಸಂರಕ್ಷಿತಾ ಪ್ರದೇಶವನ್ನು ಕಡಿತಗೊಳಿಸುವ ಮೂಲಕ, ಆ ಪ್ರದೇಶದಲ್ಲಿ ನಾಗರಿಕರಿಗೆ ಅನುಕೂಲವಾಗುವ ಮೂಲಸೌಕರ್ಯ ಕಾಮಗಾರಿಗಳನ್ನು ನಡೆಸುವ ಸರ್ಕಾರದ ಚಿಂತನೆಗೂ ವ್ಯಾಪಕ ವಿರೋಧ ವ್ಯಕ್ತವಾಗಿತ್ತು. ಆ ವಿವಾದಾಸ್ಪದ ನಿಲುವುಗಳ ಸಾಲಿಗೆ ಕಂಟೋನ್ಮೆಂಟ್ ಕಾಲೊನಿಯನ್ನು ಜೀವವೈವಿಧ್ಯ ಪಾರಂಪರಿಕ ತಾಣ' ವ್ಯಾಪ್ತಿಯಿಂದ ಹೊರಗಿಟ್ಟಿರುವ ಪ್ರಸ್ತುತ ನಿರ್ಧಾರವೂ ಸೇರಿಕೊಂಡಿದೆ. ಅಭಿವೃದ್ಧಿ ಮತ್ತು ಪರಿಸರ ಸಂರಕ್ಷಣೆಯ ನಡುವಿನ ಸಮತೋಲನವನ್ನು ಕಾಯ್ದುಕೊಳ್ಳುವ ವಿವೇಕವನ್ನು ಸರ್ಕಾರ ಪ್ರದರ್ಶಿಸದೆ, ಅನಾಹುತಕಾರಿ ಯೋಜನೆಗಳಿಗೆ ಅವಕಾಶ ಕಲ್ಪಿಸಿದರೆ ಅಪಾಯ ಕಟ್ಟಿಟ್ಟ ಬುತ್ತಿ. ನಗರದ ನಿರ್ಮಾಣವೆಂದರೆ ರಸ್ತೆ ಹಾಗೂ ಬೃಹತ್ ಕಟ್ಟಡಗಳ ನಿರ್ಮಾಣ ಮಾತ್ರವಲ್ಲ; ಹೊಸುರು ವಲಯವನ್ನು ನಿಧಿಯಂತೆ ಜತನವಾಗಿ ಇರಿಸುವುದೂ ನಗರ ನಾಗರಿಕತೆಯ ಲಕ್ಷಣವೇ ಆಗಿದೆ ಹಾಗೂ ಅದು ಸರ್ಕಾರದ ಕರ್ತವ್ಯವೂ ಆಗಿದೆ.

ರಾಮಾಯಣ

ಕಬಂಧನು ಹೇಳಿದ ಸುಗ್ರೀವನ ವೃತ್ತಾಂತ

ಹಿಂದಿನ ಸಂಚಿಕೆಯಿಂದ **120ನೆಯ ಅಧ್ಯಾಯ**

ನಿನ್ನ ಕಾರ್ಯವು ಸುಗ್ರೀವನಿಂದಲೇ ಆಗಬೇಕಲ್ಲದೆ ಮತ್ತೊಬ್ಬನಿಂದಾಗಲಾರದು. ಆತನೊಡನೆ ಸ್ನೇಹವನ್ನು ಮಾಡಿಕೊಳ್ಳುವುದಕ್ಕೆ ಇದೇ ಸಮಯ. ನೀನು ತಡಮಾಡದೆ ಆತನ ಸಮೀಪಕ್ಕೆ ಹೋಗು. ಸುಗ್ರೀವನು ಯಜ್ಞಪುರುಷನ ಸಾಕ್ಷಿಯಾಗಿ ನಿನ್ನ ಮಿತ್ರತ್ವವನ್ನು ಪಡೆದು ನಿನಗೆ ದ್ರೋಹ ಬಗೆಯದೆ ಸಹಾಯಮಾಡುತ್ತ ಅನುಕೂಲ ನಾಗಿರುವನು. ಆತನು ಮಾಡಿದ ಉಪಕಾರವನ್ನು ಮರೆಯದವನು ಕಾಮರೂಪ. ನಿನ್ನ ಕಾರ್ಯವನ್ನು ಮಾಡಿಕೊಡುವುದಕ್ಕೆ ಸಮರ್ಥ. ಆತನು ನೆನೆದ ಕಾರ್ಯವು ಆಯಿತೆಂದೇ ನಿಶ್ಚಯಿಸಬೇಕು. ಆತನಿಗೆ ಉಪಕಾರಮಾಡಿದರೂ ಸರಿ ಮಾಡದಿದ್ದರೂ ಸರಿ ನಂಬಿದವರ ಕೆಲಸವನ್ನು ನೆರವೇರಿಸಿ ಕೊಡುವನು. ಸುಗ್ರೀವನು ಬ್ರಹ್ಮದೇವನ ಮಾನಸಪುತ್ರನಾದ ಯಕ್ಷರಜಸ್ಸೆಂಬವನ ಮಗನು. ಆತನು ಪಂಪಾ ತೀರದಲ್ಲಿ ವಾಲಿಗೆ ಹೆದರಿಕೊಂಡು ಸಂಚರಿಸುತ್ತಿರುವನು. ಅವನು ಸೂರ್ಯನ ಔರಸಪುತ್ರ. ಅಂಥ ಸುಗ್ರೀವನನ್ನು ವಾಲಿಯು ಕಪಟದಿಂದ ಹೊರಡಿಸಿದ್ದರಿಂದ ಅವನು ಯಷ್ಯಮೂಕಪರ್ವತದಲ್ಲಿ ನೆಲೆಸಿದ್ದಾನೆ. ನೀನು ಆ ಪರ್ವತಕ್ಕೆ ಹೋಗಿ ಸುಗ್ರೀವನೊಡನೆ ಸ್ನೇಹವನ್ನು ಮಾಡಿಕೊ. ಆತನು ರಾಕ್ಷಸರು ವಾಸವಾಗಿರುವ ನಾನಾ ಸ್ಥಳಗಳನ್ನು ಬಲ್ಲನು. ನಾನಾ ಜಾತಿವಿಶೇಷಗಳನ್ನೂ ತನ್ನ ನಿಪ್ರಣತೆಯಿಂದ ತಿಳಿಯುವನು. ಶ್ರೀರಾಮ, ಸುಗ್ರೀವನು ಸೂರ್ಯನು ಬೆಳಗುತ್ತಿರುವ ಭೂಮಂಡಲ ದೊಳಗಿನ ಸಮಸ್ತ ವೃತ್ತಾಂತವನ್ನೂ ಬಲ್ಲವನು. ಆತನರಿಯದ ವೃತ್ತಾಂತವಿಲ್ಲ. ಆತನು ತನ್ನ ಸಮೀಪದಲ್ಲಿರುವ ಕಪಿಗಳನ್ನು ಕಳುಹಿಸಿ ನಾನಾ ಪರ್ವತ ಗುಹೆ ಗಿರಿ ದುರ್ಗ ಮೊದಲಾದ ಸ್ಥಳಗಳಲ್ಲಿ ಅರಸಿ ನಿನ್ನ ಪತ್ನಿಯಾದ ಸೀತಾದೇವಿಯನ್ನು ಹುಡುಕಿ ಕೊಡುವನು... ಮಹಾಮೇರುಪರ್ವತ ಪಾತಾಳಲೋಕ ಮೊದಲಾದವನ್ನೇ ಪ್ರವೇಶ ಮಾಡಿಯಾದರೂ ಸೀತಾದೇವಿಯನ್ನು ತಂದು ಒಪ್ಪಿಸುವನು. ಸಂಶಯವಿಲ್ಲ ಎಂದು ಕಬಂಧನು ನುಡಿದನು.

ಕಬಂಧನ ಸ್ವರ್ಗಾರೋಹಣ

ಈ ಪ್ರಕಾರ ನುಡಿದು ಕಬಂಧನು ಶ್ರೀರಾಮನಿಗೆ ಸೀತಾದೇವಿಯನ್ನು ಹುಡುಕಿಕೊಂಡು ಹೋಗುವ ಮಾರ್ಗವನ್ನು ತೋರಿಸಿ ಪುನಃ ಹೇಳಿದನು ಶ್ರೀರಾಮ, ಇಲ್ಲಿಂದ ಪಶ್ಚಿಮದಿಕ್ಕಿನಲ್ಲಿ ಎಲ್ಲಿ ನೋಡಿದರೂ ಫಲಪುಷ್ಪ ಗಳಿಂದ ಪರಿಪೂರ್ಣವಾದ ಮಾವು ನೇರಲು ಹಲಸು ಅಶ್ವತ್ಥ ಕರ್ಣಿಕಾರ ತಿಲಕ ಮಲ್ಲಿಗೆ ಮೊದಲಾದ ವೃಕ್ಷಲತೆಗಳು ಮನೋಹರವಾಗಿರುವುವು. ಆ ಮರಗಳನ್ನು ಹತ್ತಿ ಕೈಗೆ ಸಿಕ್ಕುವ ಫಲಪುಷ್ಪಗಳನ್ನು ಮನಸ್ಸು ಬಂದಂತೆ ಕಿತ್ತು ಉಪಯೋಗಿಸಬಹುದು. ನೀವು ಮುಂದೆ ಒಂದು ವನದಿಂದ ಮತ್ತೊಂದು ವನಕ್ಕೂ ಒಂದು ಪರ್ವತದಿಂದ ಮತ್ತೊಂದು ಪರ್ವತಕ್ಕೂ ಹೋಗುತ್ತ ಅನೇಕ ವನಗಳನ್ನು ದಾಟಿ ಮನೋಹರವಾದ ಪಂಪಾತೀರಕ್ಕೆ ಹೋಗಿರಿ. ಆ ಪಂಪಾ ತೀರವು ಸಮಮಾರ್ಗವುಳ್ಳದ್ದಾಗಿಯೂ ಸಂಚರಿಸುವುದಕ್ಕೆ ಸುಲಭವಾದ ತಡಿಯುಳ್ಳದ್ದಾಗಿಯೂ ಕನ್ನೈದಿಲೆ.. ಕಮಲಗಳಿಂದ ಜಒಪ್ಪುವಂಥಾದ್ದಾಗಿಯೂ ಹಂಸ ಚಕ್ರವಾಕ ಸಾರಸಪಕ್ಷಿಗಳ ಮನೋಹರವಾದ ಧ್ವನಿಯುಳ್ಳದ್ದಾಗಿಯೂ ಇರುವುದು. ಅಲ್ಲಿರುವ ಪಕ್ಷಿಗಳು ಮನುಷ್ಯರನ್ನು ಕಂಡು ಬೆದರುವುದಿಲ್ಲ. ಅವುಗಳನ್ನು ಯಾರೂ ಕೊಲ್ಲುತ್ತಿಲ್ಲ. ಅಲ್ಲಿರುವ ಪರ್ವತ ಗುಹಾದಿಗಳಲ್ಲಿ ಸಂಚರಿಸುವ ಕಾಡುಹಂದಿ ಕೃಷ್ಣಸಾರಂಗ ಎರಳೆ ಮೊದಲಾದ ಮೃಗಗಳನ್ನು ನೀವು ಉಪಯೋಗಿಸ ಬಹುದು.

ಮುಂದುವರಿಯುವುದು...

ಭಯೋತ್ಪಾದಕರಿಗೆ ತಕ್ಕ ಉತ್ತರ ನೀಡಲು ಪ್ರತಿ ಮನೆಯಲ್ಲಿಯೂ ಛತ್ರಪತಿ ಶಿವಾಜಿ ಮಹಾರಾಜರು ಜನಿಸಲಿದ್ದಾರೆ

ದೇಶದ ರಾಜಧಾನಿಯಲ್ಲಿ ಸನಾತನ ರಾಷ್ಟ್ರದ ಭವ್ಯ ಶಂಖನಾದ

- ಉದಯವಾಹಿನಿ, ನವದೆಹಲಿ
- ಶ್ರೀ. ವಿನೋದ ಕಾಮತ್

ಹಿಂದೆ ಜಿಹಾದಿ ಭಯೋತ್ಪಾದಕರು ಎಲ್ಲೆಂದರಲ್ಲಿ ಬಾಂಬ್ ಸ್ಫೋಟ ಮಾಡುತ್ತಿದ್ದರು, ಆದರೆ ಈಗ ಅವರಿಗೆ ಹಾಗೆ ಮಾಡುವ ಮೊದಲೇ ತಕ್ಕ ಉತ್ತರ ನೀಡಲಾಗುತ್ತಿದೆ. ಹೆಚ್ಚಿನ ಸಂಖ್ಯೆಯಲ್ಲಿ ಭಯೋತ್ಪಾದಕರು ಹತ್ಯೆಗೀಡಾಗುತ್ತಿದ್ದು, ಇದರಿಂದ ಜಾತ್ಯತೀತರೆಂದು ಕರೆಯಲ್ಪಡುವವರ ಹೊಟ್ಟೆಯಲ್ಲಿ ನೋವು ಶುರುವಾಗಿದೆ. ಈ ನೋವು ಮುಂಬರುವ ದಿನಗಳಲ್ಲಿ ಇನ್ನಷ್ಟು ಹೆಚ್ಚಾಗಲಿದೆ. ಅವರು ದೆಹಲಿಯಲ್ಲಿ ಬಾಂಬ್ ಸ್ಫೋಟ ಮಾಡಿ ಜನರಲ್ಲಿ ಭಯ ಹುಟ್ಟಿಸಲು ಪ್ರಯತ್ನಿಸಿದರು, ಆದರೆ ನಮ್ಮಲ್ಲಿ ಭಯವನ್ನು ಸೃಷ್ಟಿಸಲು ಸಾಧ್ಯವಿಲ್ಲ. ಇದಕ್ಕೆ ವಿರುದ್ಧವಾಗಿ, ಎಷ್ಟು ಜಿಹಾದಿ ಭಯೋತ್ಪಾದಕರು ಹುಟ್ಟುತ್ತಾರೋ, ಅಷ್ಟು ಛತ್ರಪತಿ ಶಿವಾಜಿ ಮಹಾರಾಜರು ದೇಶದ ಪ್ರತಿ ಮನೆಯಲ್ಲಿಯೂ ಜನಿಸಲಿದ್ದಾರೆ ಎಂಬ ಸ್ಪಷ್ಟ ಸಂದೇಶವನ್ನು ದೆಹಲಿಯ ಸಾಂಸ್ಕೃತಿಕ ಕಾರ್ಯಮಂತ್ರಿ ಶ್ರೀ. ಕಪಿಲ್ ಮಿಶ್ರಾ ಅವರು ನೀಡಿದರು.

ಹಿಂದಿನ ಸರ್ಕಾರಗಳ ಅವಧಿಯಲ್ಲಿ ರಾಷ್ಟ್ರದ ನಿಜವಾದ ಸಮಸ್ಯೆಗಳ ಬಗ್ಗೆ ಚರ್ಚೆಯ ಅಗತ್ಯವಿದ್ದಾಗ, ಸ್ವತಃ ಸರ್ಕಾರವೇ ಅದನ್ನು ವಿರೋಧಿಸುತ್ತಿತ್ತು ಮತ್ತು ಇಂತಹ ವಿಷಯಗಳ ಬಗ್ಗೆ ಎಲ್ಲಿ ಚರ್ಚಿಸಬೇಕು ಎಂಬ ಪ್ರಶ್ನೆ ಉದ್ಭವಿಸುತ್ತಿತ್ತು. ಆದರೆ, ಇಂದು ನಡೆಯುತ್ತಿರುವ 'ಸನಾತನ ರಾಷ್ಟ್ರ ಶಂಖನಾದ ಮಹೋತ್ಸವಕ್ಕೆ ಕೇಂದ್ರ ಮತ್ತು ರಾಜ್ಯ ಎರಡೂ ಸರ್ಕಾರಗಳ ಬೆಂಬಲವಿದೆ. ಮುಂಬರುವ ದಿನಗಳಲ್ಲಿ ಧರ್ಮ ಮತ್ತು ಸಂಸ್ಕೃತಿಯ ರಕ್ಷಣೆ ಹಾಗೂ ಉನ್ನತಿಗಾಗಿ ಪ್ರತಿಯೊಬ್ಬ ನಾಗರಿಕನು ನಿರಂತರವಾಗಿ ಕಾರ್ಯನಿರ್ವಹಿಸುವ ಸಂಕಲ್ಪ ಮಾಡಬೇಕು.

- ಶ್ರೀ. ಕಪಿಲ್ ಮಿಶ್ರಾ , ದೆಹಲಿಯ ಸಾಂಸ್ಕೃತಿಕಕಾರ್ಯಮಂತ್ರಿ

ಅವರು ದೇಶದ ರಾಜಧಾನಿ ದೆಹಲಿಯ ಭಾರತ್ ಮಂಡಪಮ್‌ನಲ್ಲಿ 'ಸೇವ್ ಕಲ್ಚರ್ ಸೇವ್ ಭಾರತ್ ಫೌಂಡೇಶನ್' ವತಿಯಿಂದ ಪ್ರಸ್ತುತಪಡಿಸಿದ ಹಾಗೂ 'ಸನಾತನ ಸಂಸ್ಥೆ' ಆಯೋಜಿಸಿದ ಭವ್ಯ 'ಸನಾತನ ರಾಷ್ಟ್ರ ಶಂಖನಾದ ಮಹೋತ್ಸವದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡುತ್ತಿದ್ದರು.

ಈ ಸಂದರ್ಭದಲ್ಲಿ ಪರಮ ಪೂಜ್ಯ ಶಾಂತಿಗಿರಿ ಮಹಾರಾಜ್, ಸನಾತನ ಸಂಸ್ಥೆಯ ಸಂಸ್ಥಾಪಕರಾದ ಸಚ್ಚಿದಾನಂದ ಪರಬ್ರಹ್ಮ ಡಾ. ಜಯಂತ ಬಾಳಾಜಿ ಆಠವಲೆ ಅವರ ಆಧ್ಯಾತ್ಮಿಕ ಉತ್ತರಾಧಿಕಾರಿಗಳಾದ ಶ್ರೀಸತ್‌ಶಕ್ತಿ (ಶ್ರೀಮತಿ) ಬಿಂದಾ ಸಿಂಗಬಾಳ ಮತ್ತು ಶ್ರೀಚಿತ್‌ಶಕ್ತಿ (ಶ್ರೀಮತಿ) ಅಂಜಲಿ ಗಾಡಗೀಳ, 'ಸೇವ್ ಕಲ್ಚರ್ ಸೇವ್ ಭಾರತ್ ಫೌಂಡೇಶನ್'ನ ಅಧ್ಯಕ್ಷರು ಮತ್ತು ಭಾರತದ ಮಾಜಿ ಮಾಹಿತಿ ಆಯುಕ್ತರಾದ ಶ್ರೀ. ಉದಯ ಮಾಹೂರಕರ, ಸುದರ್ಶನ್ ನ್ಯೂಸ್‌ನ ಪ್ರಧಾನ ಸಂಪಾದಕರಾದ ಶ್ರೀ. ಸುರೇಶ್ ಚವ್ಹಾಣ್ಕೆ, ಹಿಂದೂ ಜನಜಾಗೃತಿ ಸಮಿತಿಯ ರಾಷ್ಟ್ರೀಯ ಮಾರ್ಗದರ್ಶಕರಾದ ಸದ್ಗುರು (ಡಾ.) ಚಾರುದತ್ತ ಪಿಂಗಳೆ ಮತ್ತು ಸನಾತನ ಸಂಸ್ಥೆಯ ವಕ್ತಾರರಾದ ಶ್ರೀ. ಅಭಯ ವರ್ತಕ ಅವರ ಕರಕಮಲಗಳಿಂದ ದೀಪ ಬೆಳಗುವುದರ ಮೂಲಕ ಮಹೋತ್ಸವಕ್ಕೆ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ 'ವಂದೇ ಮಾತರಮ್' ಗೀತೆಗೆ 150 ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ, ಹಾಜರಿದ್ದ ಎಲ್ಲರೂ ಸಾಮೂಹಿಕವಾಗಿ 'ವಂದೇ ಮಾತರಮ್' ಗೀತೆಯನ್ನು ಹಾಡಿ ರಾಷ್ಟ್ರಭಾವನೆಯನ್ನು ಜಾಗೃತಗೆಳಿಸಿದರು. ಕೇಂದ್ರ ಸಂಸ್ಕೃತಿ ಸಚಿವಾಲಯವೂ ಈ ಕಾರ್ಯಕ್ರಮಕ್ಕೆ ಸಹಕಾರ ನೀಡಿತು. ಉದ್ಘಾಟನಾ ಸಮಾರಂಭದಲ್ಲಿ ಶ್ರೀ. ಸೊರಟಿ ಸೋಮನಾಥ ಜ್ಯೋತಿರ್ಲಿಂಗದ ದಿವ್ಯಾಂಶದ ದರ್ಶನವನ್ನು ಎಲ್ಲರಿಗೂ ಮಾಡಿಸಲಾಯಿತು ಮತ್ತು ಸದ್ಗುರುಗಳಿಂದ ಪೂಜೆ ಮಾಡಿಸಿ ಅದರ ಮಹತ್ವವನ್ನು ತಿಳಿಸಲಾಯಿತು. ಈ ಸಂದರ್ಭದಲ್ಲಿ ಸನಾತನ ಸಂಸ್ಥೆ ನಿರ್ಮಿತ ಹಿಂದಿ ಪುಸ್ತಕ 'ಸಂಕಲ್ಪ ರಾಮರಾಜ್ಯ ಕಾ', ವೇದವೀರ್ ಆರ್ಯ ರಚಿತ ಇಂಗ್ಲಿಷ್ ಗ್ರಂಥ 'ಕ್ರೋನಾಲಜಿ ಆ್ಯಂಡ್ ಒರಿಜಿನ್ಸ್ ಆಫ್ ಇಂಡೋ ಯುರೋಪಿಯನ್ ಸಿವಿಲೈಸೇಶನ್' ಅನ್ನು ಲೋಕಾರ್ಪಣೆ ಮಾಡಲಾಯಿತು.

ಈ ಮಹೋತ್ಸವವನ್ನು SanatanRashtraShankhnad.in ವೆಬ್‌ಸೈಟ್‌ನಲ್ಲಿ ನೇರವಾಗಿ ವೀಕ್ಷಿಸಬಹುದಾಗಿದೆ. ಹಾಗೆಯೇ, ಭಾರತ್ ಮಂಡಪಮ್ ಆವರಣದ ಹಾಲ್ ನಂ 12 ರಲ್ಲಿ ಆಳವಡಿಸಲಾಗಿರುವ ಐತಿಹಾಸಿಕ ಶಸ್ತ್ರಾಸ್ತ್ರಗಳ ಪ್ರದರ್ಶನವನ್ನು ನೋಡಲು ಎಲ್ಲರಿಗೂ ಆಹ್ವಾನ ನೀಡಲಾಗಿದೆ.

ಉದಯವಾಹಿನಿ ಚಿತ್ರ

ಭಯೋತ್ಪಾದಕರನ್ನು ಎದುರಿಸಲು ಎರಡೂವರೆ ರಂಗಗಳಲ್ಲಿ ಹೋರಾಟ ಅಗತ್ಯ

ಸನಾತನ ಸಂಸ್ಥೆಯ ವಕ್ತಾರರಾದ ಶ್ರೀ. ಅಭಯ ವರ್ತಕ ಅವರು, ಇಂದು ದೇಶದಲ್ಲಿ ಭಯೋತ್ಪಾದಕರ 'ಸ್ಲೀಪರ್ ಸೆಲ್' ಇಲ್ಲದ ಜಿಲ್ಲೆ ಅಥವಾ ರಾಜ್ಯವಿಲ್ಲ ಎಂದರು. ಎರಡು ರಂಗಗಳಲ್ಲಿ ಸೇನೆ ಮತ್ತು ಸರ್ಕಾರ ಹೋರಾಡುತ್ತಿವೆ; ಅರ್ಧ ರಂಗದಲ್ಲಿ ಜನಸಾಮಾನ್ಯರು ಹೋರಾಡಬೇಕಿದೆ. ಆಗ ಮಾತ್ರ ಭಯೋತ್ಪಾದಕರನ್ನು ಸಂಪೂರ್ಣವಾಗಿ ತಡೆಯಲು ಸಾಧ್ಯ. ಇದೇ ಉದ್ದೇಶದಿಂದ ನಾವು ದೇಶದ ರಾಜಧಾನಿ ಕುರುಕ್ಷೇತ್ರದ ಸಮೀಪ 'ಸನಾತನ ರಾಷ್ಟ್ರ'ದ ಶಂಖನಾದ ಮಾಡುತ್ತಿದ್ದೇವೆ ಎಂದರು.

ಭಾರತವನ್ನು 'ವಿಕೃತಿ ಸಾಮಗ್ರಿ ಮುಕ್ತ' ದೇಶವನ್ನಾಗಿ ಮಾಡೋಣ

ಇಂದು ಒಟಿಟಿ, ಸಾಮಾಜಿಕ ಮಾಧ್ಯಮಗಳ ಮೂಲಕ ಅಶ್ಲೀಲತೆಯು ಹರಡುತ್ತಿದೆ. ಹಿಂದವೀ ಸ್ವರಾಜ್ಯ ಸ್ಥಾಪನೆಯಾದಂತೆಯೇ, ಹಿಂದೂ ರಾಷ್ಟ್ರದ ನಿರ್ಮಾಣಕ್ಕಾಗಿ ಭಾರತದ ಶಿಕ್ಷಣ ವ್ಯವಸ್ಥೆಯಲ್ಲಿ ಶಿಸ್ತು ಮತ್ತು ಕಠಿಣತೆ ಅಗತ್ಯವಿದೆ. ಪ್ರತಿಯೊಬ್ಬ ಭಾರತೀಯನು ವಿಕೃತಿ ಸಾಮಗ್ರಿ ಮುಕ್ತ ಭಾರತದ ಸಂಕಲ್ಪ ಮಾಡಬೇಕು.

- ಉದಯ ಮಾಹೂರಕರ

ಉದಯವಾಹಿನಿ ಚಿತ್ರ

ಇಂದಿನ ಕನ್ನಡ ಸಾಹಿತ್ಯ ಮತ್ತು ಯುವ ಬರಹಗಾರರು

ಹೊಸ ದಿಕ್ಕಿನ ಹುಡುಕಾಟ

ವಿಶ್ವಾಸ್.ಡಿ.ಗೌಡ
- ಉದಯವಾಹಿನಿ, ವಿಶೇಷ

ಕನ್ನಡ ಸಾಹಿತ್ಯವು ತನ್ನ ದೀರ್ಘ ಹಾಗೂ ಶ್ರೀಮಂತ ಪರಂಪರೆಯೊಂದಿಗೆ ಇಂದಿಗೂ ಕಾಲಕ್ಕೆ ಹೆಜ್ಜೆ ಹಾಕುತ್ತಾ ಸಾಗುತ್ತಿದೆ. ವಚನಕಾರರ ಸಾಮಾಜಿಕ ಜಾಗೃತಿಯಿಂದ ಆರಂಭವಾಗಿ ನವ್ಯ, ಬಂಡಾಯ ಮತ್ತು ದಲ

ಅಳವಂಡಿ ಆಸ್ಪತ್ರೆ ಮೇಲ್ದರ್ಜೆಗೆ ಯಾವಾಗ: ಸಾರ್ವಜನಿಕರ ಪ್ರಶ್ನೆ

• ಉದಯವಾಹಿನಿ ಅಳವಂಡಿ

ಇಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸುವ ಮಾತು ಮಾತಾಗಿಯೇ ಉಳಿದಿದ್ದು, ಹಲವು ವರ್ಷಗಳ ಮೇಲ್ದರ್ಜೆಗೇರುವ ಕನಸು ಇನ್ನೂ ಈಡೇರಿಲ್ಲ.

ಅಳವಂಡಿ ಗ್ರಾಮದಲ್ಲಿ 1998 ರಲ್ಲಿ ಪ್ರಾಥಮಿಕ ಕೇಂದ್ರ ಆರಂಭಿಸಲಾಗಿದ್ದು, ಈ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಒಳಪಡುವ ಗ್ರಾಮಗಳಾದ ಅಳವಂಡಿ, ಕಂಪ್ಲಿ, ಬೈರಾಪುರ, ಬೋಚನಹಳ್ಳಿ, ಮೋರನಾಳ, ಬಿಕನಳ್ಳಿ, ಮೈನಹಳ್ಳಿ, ಹಂದ್ರಾಳ ಹಾಗೂ ಹಣವಾಳ ಸೇರಿದಂತೆ ಅನೇಕ ಗ್ರಾಮದ ಜನರು ಇಲ್ಲಿಗೆ ಚಿಕಿತ್ಸೆ ಪಡೆಯಲು ಬರುತ್ತಾರೆ. ಗ್ರಾಮೀಣ ಸೇವೆ ಅಡಿಯಲ್ಲಿ ಓರ್ವ ಎಂಬಿಬಿಎಸ್ ವೈದ್ಯಾಧಿಕಾರಿ ಹಾಗೂ ಗುತ್ತಿಗೆ ಆಧಾರದ ಮೇಲೆ ಆಯುಷ್ ವೈದ್ಯಾಧಿಕಾರಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಒಟ್ಟು ಇಲ್ಲಿನ ಹಲವು

ಉದಯವಾಹಿನಿ ಚಿತ್ರ

ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದು, ಇನ್ನೂ ಕೆಲವು ಹುದ್ದೆಗಳು ಖಾಲಿ ಇವೆ. ಅಳವಂಡಿಯು ಹೋಬಳಿ ಕೇಂದ್ರವಾಗಿದ್ದು, ಇಲ್ಲಿನ

ಅಳವಂಡಿ ಪಿಎಚ್‌ಸಿಯನ್ನು ಸಿಎಚ್‌ಸಿ ಮಾಡುವ ಅಗತ್ಯವಿದೆ. ಈಗಾಗಲೇ ಶಾಸಕರಿಗೆ ಅಧಿಕಾರಿಗಳಿಗೆ ಮನವಿ ಮಾಡಲಾಗಿದೆ. ಹಲವು ವರ್ಷಗಳ ಈ ಬೇಡಿಕೆಯ ಬಗ್ಗೆ ಮುತುವರ್ಜಿ ವಹಿಸಬೇಕು. -ಗುರು ಬಸವರಾಜ ಗ್ರಾ.ಪಂ ಸದಸ್ಯ

ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೆರಿಸುವಂತೆ ಕ್ಷೇತ್ರದ ಶಾಸಕರು, ಜನಪ್ರತಿನಿಧಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗುತ್ತಿಲ್ಲ ಎನ್ನುತ್ತಾರೆ ಇಲ್ಲಿನ ಗ್ರಾಮಸ್ಥರು. ಇಲ್ಲಿ ಸದ್ಯ ಜ್ವರ, ಕೆಮ್ಮು, ನೆಗಡಿ ಸೇರಿದಂತೆ ಸಣ್ಣ ಪುಟ್ಟ ಕಾಯಿಲೆಗಳಿಗೆ ಮಾತ್ರ ಚಿಕಿತ್ಸೆ ದೊರೆಯುತ್ತದೆ. ಈ ಕೇಂದ್ರವನ್ನು ಮೇಲ್ದರ್ಜೆಗೆ ಏರಿಸಿದರೆ ನಾನಾ ಸೌಲಭ್ಯ, ಅಗತ್ಯ ಸಿಬ್ಬಂದಿಗಳು, ಅತ್ಯಾಧುನಿಕ ವೈದ್ಯಕೀಯ ಉಪಕರಣಗಳು, ಮೂಲ ಸೌಕರ್ಯ ದೊರೆತು ಸಾರ್ವಜನಿಕರಿಗೆ ಉತ್ತಮ ಉತ್ತಮ ಸೇವೆ ಸಿಗಲಿದೆ. ಜೊತೆಗೆ ಹೋಬಳಿ ಕೇಂದ್ರದ ವ್ಯಾಪ್ತಿಯ ನಾನಾ ಗ್ರಾಮಗಳ ಜನರಿಗೆ ಅನುಕೂಲವಾಗಲಿದೆ. ಆಸ್ಪತ್ರೆಯನ್ನು ಮೇಲ್ದರ್ಜೆಗೆ ಏರಿಸುವ ಕೆಲಸ ಬೇಗ ಆಗಬೇಕು ಎನ್ನುವುದು ಜನರ ಒತ್ತಾಯವಾಗಿದೆ.

ಹಲವು ಬಸ್ ನಿಲ್ದಾಣಗಳು, ರಸ್ತೆಯಿಂದ ಕೆಳಗಿವೆ, ಇಂಥ ನಿಲ್ದಾಣಗಳ ಸುಧಾರಣೆಗೆ ಕ್ರಮ ಕೈಗೊಳ್ಳಲಾಗುವುದು

ರಾ. ಹೆದ್ದಾರಿ ಪಕ್ಕದ ನಿಲ್ದಾಣಗಳ ಅಭಿವೃದ್ಧಿ: ರಾಮಲಿಂಗಾರೆಡ್ಡಿ

• ಉದಯವಾಹಿನಿ ಶಿಗ್ಗಾವಿ

ರಾಜ್ಯದಲ್ಲಿರುವ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಹಾಗೂ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗಳಿಗೆ (ವಾಕರಸಾಸಂ) ಸುಮಾರು 5,800 ಹೊಸ ಬಸ್‌ಗಳನ್ನು ನೀಡಲಾಗುತ್ತಿದೆ. ಇದರ ಜೊತೆಯಲ್ಲಿ 9 ಸಾವಿರ ನೌಕರರನ್ನು ನೇಮಕಾತಿ ಮಾಡಲಾಗಿದ್ದು, ಅನುಕಂಪದ ಆಧಾರದಲ್ಲಿ ಒಂದು ಸಾವಿರ ಸಿಬ್ಬಂದಿಯನ್ನು ಕೆಲಸಕ್ಕೆ ಸೇರಿಸಿಕೊಳ್ಳಲಾಗಿದೆ' ಎಂದು ಸಾರಿಗೆ ಮತ್ತು ಮುಜರಾಯಿ ಇಲಾಖೆ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ವಿದ್ಯಾರ್ಥಿಗಳ ಸುಗಮ ಸಂಚಾರಕ್ಕೆ ಅನುಕೂಲ

ಪಟ್ಟಣದ ಗಂಗಿಭಾವಿ ರಸ್ತೆಯಲ್ಲಿ ನಿರ್ಮಿಸಿರುವ ನೂತನ ಬಸ್ ಡಿಪೊ ಮತ್ತು ಚಾಲನಾ-ಮೆಕ್ಯಾನಿಕ್ ತರಬೇತಿ ಕೇಂದ್ರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಾಯವ್ಯ ಕರ್ನಾಟಕ ಸಾರಿಗೆ ಸಂಸ್ಥೆಗೆ ಈಗಾಗಲೇ 300 ಬಸ್‌ಗಳು ಮಂಜೂರಾಗಿವೆ. ಸದ್ಯದಲ್ಲಿ ಹೊಸದಾಗಿ 400 ಹೊಸ ಬಸ್‌ಗಳನ್ನು ಮಂಜೂರಾತಿ ನೀಡಲಾಗುವುದು. ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲಿರುವ ರಾಜ್ಯದ ಹಲವು ಬಸ್ ನಿಲ್ದಾಣಗಳು, ರಸ್ತೆಯಿಂದ ಕೆಳಗಿವೆ. ಇಂಥ ನಿಲ್ದಾಣಗಳ ಸುಧಾರಣೆಗೆ ಕ್ರಮ ಕೈಗೊಳ್ಳಲಾಗುವುದು' ಎಂದರು.

ಶಿಗ್ಗಾವಿ ಬಳಿಯ ಹುಲಗೂರ, ತಡಸಕ್ಕೆ ನೂತನ ಬಸ್ ನಿಲ್ದಾಣ ಮತ್ತು ಕಾಶಿಪೀಠದ ವಿಶ್ವನಾಥ ದೇವಸ್ಥಾನಕ್ಕೆ ಅನುದಾನ ನೀಡುವ ಕುರಿತು ಪರಿಶೀಲಿಸಲಾಗುವುದು ಎಂದರು.



ಉದಯವಾಹಿನಿ ಚಿತ್ರ

ಶಿಗ್ಗಾವಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗಾಗಿ ನಾನು ಕಂಡ ಕನಸು, ಡಿಪೊ ಉದ್ಘಾಟನೆ ಮೂಲಕ ಇಂದು ಬಹುತೇಕ ಸಾಕಾರಗೊಂಡಿದೆ' ಎಂದು ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ಈ ಕುರಿತು 'ಎಕ್ಸ್' ಮಾಡಿರುವ ಅವರು, 'ಶಿಗ್ಗಾವಿ ಗೊಂದು ನೂತನ ಬಸ್ ಡಿಪೊ, ವಾಹನ ಚಾಲನಾ ಮತ್ತು ತಾಂತ್ರಿಕ ತರಬೇತಿ ಕೇಂದ್ರದ ಅಗತ್ಯವಿತ್ತು. ನಾನು ಸಿಎಂ ಆಗಿದ್ದಾಗ ರೂ. 28 ಕೋಟಿ ಬಿಡುಗಡೆಗೊಳಿಸಿದ್ದೆ. ಈಗ ಘಟಕ ಲೋಕಾರ್ಪಣೆಯಾಗಿದೆ. ಇದರಿಂದ ಕ್ಷೇತ್ರದ ಜನರು ಮತ್ತು ವಿದ್ಯಾರ್ಥಿಗಳ ಸುಗಮ ಸಂಚಾರಕ್ಕೆ ಅನುಕೂಲವಾಗಲಿದೆ. ತರಬೇತಿ ಮೂಲಕ ಸ್ಥಳೀಯ ಯುವಕರಿಗೂ ಉದ್ಯೋಗ ಸಿಗಲಿದೆ' ಎಂದಿದ್ದಾರೆ.

ಕಂಡ ಕನಸು ಸಾಕಾರ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಧ್ಯಕ್ಷರೂ ಆಗಿರುವ ಶಾಸಕ ಭರಮಗೌಡ ಕಾಗೆ ಮಾತನಾಡಿ, ಸರ್ಕಾರ ಸದ್ಯದಲ್ಲಿ 700 ಹೊಸ ಬಸ್ ನೀಡುತ್ತಿದೆ. ಹೊಸ ಬಸ್ ಘಟಕಗಳಿಗೆ ತಲಾ 50 ಬಸ್ ನೀಡಲಾಗುವುದು. ಶಿಗ್ಗಾವಿಯಲ್ಲಿ ನೌಕರರ ಸಮಸ್ಯೆಗಳಿದ್ದು, ಈ ಸಭೆ ನಡೆಸಿ ಚರ್ಚಿಸಿದ್ದೇವೆ. ಹೊಸ ನೇಮಕಾತಿಗೂ ಸದ್ಯದಲ್ಲೇ ಚಾಲನೆ ನೀಡಲಾಗುವುದು' ಎಂದರು.

ಶಾಸಕ ಯಾಸೀರ್ ಅಹ್ಮದಖಾನ್ ಪಠಾಣ ಮಾತನಾಡಿ, 'ಶಕ್ತಿ ಯೋಜನೆಯು ಗಿನ್ನಿಸ್ ದಾಖಲೆ ಮಾಡಿದೆ. ಈ ಯೋಜನೆಯನ್ನು ದೇಶದ ವಿವಿಧ ರಾಜ್ಯಗಳು ಹಾಗೂ ಅಮೆರಿಕಾದ ನ್ಯೂಯಾರ್ಕ್‌ನಲ್ಲೂ ಸಹ ಜಾರಿಯಾಗಿರುವುದು ಹೆಮ್ಮೆಯ ಸಂಗತಿ ಎಂದರು.

ಶಿಗ್ಗಾವಿ ಕ್ಷೇತ್ರದ ಹುಲಗೂರ ಹಾಗೂ ತಡಸ ಗ್ರಾಮಗಳು, ಪಟ್ಟಣ ಪಂಚಾಯಿತಿ ಆಗಲಿವೆ. ಈ ಗ್ರಾಮಗಳಲ್ಲಿನ ಬಸ್ ನಿಲ್ದಾಣ, ಸವಣೂರ ಬಸ್ ನಿಲ್ದಾಣ ಸೇರಿದಂತೆ ಗ್ರಾಮೀಣ ಹಾಗೂ ನಗರದ ಪ್ರದೇಶದಲ್ಲಿ ಬಸ್ ನಿಲ್ದಾಣಗಳು ಶಿಥಿಲಗೊಂಡಿವೆ. ಹೊಸ ಬಸ್ ನಿಲ್ದಾಣ ನಿರ್ಮಾಣ ಮಾಡಬೇಕು' ಎಂದು ಮನವಿ ಮಾಡಿದರು.

ಮಾಜಿ ಮುಖ್ಯಮಂತ್ರಿಗೆ ಅಪಮಾನ: ಖಂಡನೆ

ಶಿಗ್ಗಾವಿ ಡಿಪೊ ನಿರ್ಮಾಣದಲ್ಲಿ ಮಾಜಿ ಮುಖ್ಯಮಂತ್ರಿಯೂ ಆಗಿರುವ ಸಂಸದ ಬಸವರಾಜ ಬೊಮ್ಮಾಯಿ ಅವರ ಪಾತ್ರ ಮುಖ್ಯವಾಗಿದೆ. ಆದರೆ, ಡಿಪೊ ಉದ್ಘಾಟನೆಗೆ ಬೊಮ್ಮಾಯಿ ಅವರಿಗೆ ಆಹ್ವಾನ ನೀಡದೇ ಅಪಮಾನ ಮಾಡಲಾಗಿದೆ' ಎಂದು ಬಿಜೆಪಿ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದರು. ಶಿಗ್ಗಾವಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿದ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು, ಕಾರ್ಯಕ್ರಮದ ಅಮಂತ್ರಣ ಪತ್ರಿಕೆಯಲ್ಲಿಯೂ ಬೊಮ್ಮಾಯಿ ಹೆಸರು ಹಾಕಿಲ್ಲ. ಈ ವರ್ತನೆ ಖಂಡನೀಯ. ಬೊಮ್ಮಾಯಿ ಮಾಡಿರುವ ಕೆಲಸವನ್ನು ತಮ್ಮ ಕೆಲಸವೆಂದು ಹೇಳುವ ಶಾಸಕ ಹಾಗೂ ಕಾಂಗ್ರೇಸ್ ಸರ್ಕಾರ, ತನ್ನ ಮನ ಸಾಕ್ಷಿಯನ್ನು ಕೇಳಿಕೊಳ್ಳಬೇಕು' ಎಂದರು. ಬಿಜೆಪಿಯ ಶಿಗ್ಗಾವಿ ಮಂಡಲದ ಅಧ್ಯಕ್ಷ ವಿಶ್ವನಾಥ ಹರವಿ ಮಾತನಾಡಿ, ಡಿಪೊ ನಿರ್ಮಾಣವಾಗಬೇಕು ಎಂಬುದು ಶಿಗ್ಗಾವಿ ಜನರ ಬಹುದಿನಗಳ ಬೇಡಿಕೆಯಾಗಿತ್ತು. ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ 28 ಕೋಟಿ ಅನುದಾನ ಮಂಜೂರು ಮಾಡಿದ್ದರು. ಈ ಸಂಗತಿ ಜನರಿಗೂ ಗೊತ್ತಿದೆ. ಯಾರೋ ಮಾಡಿದ ಕೆಲಸವನ್ನು ತಮ್ಮ ಸಾಧನೆ ಎಂದು ತೋರಿಸು ವುದು ಮೂರ್ಖತನ' ಎಂದರು.

ದಸ್ತು ಬರಹಗಾರರ ಮುಷ್ಕರ: ಬಿಕೋ ಎನ್ನುತ್ತಿದೆ ಉಪನೋಂದಣಿ ಕಚೇರಿ

• ಉದಯವಾಹಿನಿ ಮೂಡಲಗಿ

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ದಸ್ತು ಬರಹಗಾರರು ಉಪ ನೋಂದಣಿ ಕಚೇರಿ ಆವರಣದಲ್ಲಿ ನಡೆಸುತ್ತಿರುವ ಅನಿರ್ದಿಷ್ಟಾವಧಿ ಮುಷ್ಕರವು 2ನೇ ದಿನ ಮುಂದುವರೆಯಿತು.

ಮುಷ್ಕರದಿಂದಾಗಿ ಸಾರ್ವಜನಿಕರು ಹಾಗೂ ಸಹಕಾರ ಸಂಘ, ಬ್ಯಾಂಕ್ ವ್ಯವಹಾರಕ್ಕೆ ತೀವ್ರ ತೊಂದೆ ಉಂಟಾಗಿತ್ತು. ಜಮೀನು ಖರೀದಿ, ಮಾರ್ಟಗೇಜ್ ಸೇರಿದಂತೆ ಇನ್ನಿತರ ನೋಂದಣಿ ಕಾರ್ಯಗಳೆಲ್ಲ ಸ್ಥಗಿತಗೊಂಡಿದ್ದರಿಂದ ಸಾರ್ವಜನಿಕರು ಯಾವುದೇ ಕೆಲಸವಾಗದೆ ಮರಳಬೇಕಾಯಿತು. ಉಪ ನೋಂದಣಿ ಕಚೇರಿಯು ಸಾರ್ವಜನಿಕರು ಇಲ್ಲದೆ ಬಿಕೋ ಎನ್ನುತಿತ್ತು. ಸರ್ಕಾರವು ದಸ್ತು ಬರಹಗಾರರ ಬೇಡಿಕೆಗಳ ಈಡೇರಿಸಿ ಸಾರ್ವಜನಿಕರ ನೋಂದಣಿ ಕಾರ್ಯಗಳು ಸ್ಥಗಿತವಾಗದಂತೆ ನೋಡಿಕೊಳ್ಳಬೇಕು ಎಂದು ಒತ್ತಾಯಿಸಿದರು.

ಪತ್ರ ಬರಹಗಾರಾದ ಪಿ.ಬಿ.ಹಿರೇಮಠ, ಆರ್.ಎಂ.ಕುಲಕರ್ಣಿ, ಎಲ್.ಸಿಗಾಡವಿ, ಕೆ.ಎಸ್.ಹುಬಳಿ, ಎಂ.ಎನ್.ಶಿರಸಂಗಿ, ರಾಜು ಅಥಣಿ, ಎಸ್.ಬಿ.ಸಿದ್ದುಮಾಳಿ, ಎಸ್.ಎನ್.ಗೋಟಡಕಿ, ಎ.ಎಂ.ಥರಥರಿ, ಆರ್.ಎಂ. ಮಂಗಸೂಳಿ, ವಿ.ಎಸ್.ಶಿರಸಂಗಿ ಇದ್ದರು.

ಶಿಕ್ಷಣದ ಜತೆ ಸಂಸ್ಕಾರ ಅಗತ್ಯ

• ಉದಯವಾಹಿನಿ ಶಿಕಾರಿಪುರ

ಜೀವನ ನಡೆಸಲು, ಜ್ಞಾನಾರ್ಜನೆಗೆ ಶಿಕ್ಷಣ ಅಗತ್ಯವಾದರೆ, ಸಂಸ್ಕಾರವು ಮನುಷ್ಯನಿಗೆ ಗೌರವ, ಪ್ರೀತಿ, ಉತ್ತಮ ನಡವಳಿಕೆ ಕಲಿಸುತ್ತದೆ. ಇವೆರಡೂ ಇದ್ದಾಗ ಸುಂದರ ಜೀವನ ಸಾಧ್ಯ ಎಂದು ಬಾಪೂಜಿ ಪ್ರೌಢಶಾಲೆ ಮುಖ್ಯ ಶಿಕ್ಷಕ ರಾಘವೇಂದ್ರ ಕುಲಕರ್ಣಿ ಹೇಳಿದರು.

ಪಟ್ಟಣದ ಮೈತ್ರಿ ಪ್ರಾಥಮಿಕ, ಕುಮದ್ವತಿ ಪ್ರೌಢಶಾಲೆಯಲ್ಲಿ ವಾರ್ಷಿಕ ಬಹುಮಾನ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಸಂಸ್ಕಾರವಿಲ್ಲದ ಶಿಕ್ಷಣ ನಿರರ್ಥಕ ಮತ್ತು ಸಂಸ್ಕಾರವಿಲ್ಲದ ಶಿಕ್ಷಣ ಮನುಷ್ಯನನ್ನು ಯಾಂತ್ರಿಕವಾಗಿಸುತ್ತದೆ. ಆಧುನಿಕ ಜಗತ್ತಿನಲ್ಲಿ ಸಂಬಂಧ ನಶಿಸುತ್ತಿರುವ ಈ ಕಾಲಘಟ್ಟದಲ್ಲಿ ಶಿಕ್ಷಣದ ಜತೆ ಸಂಸ್ಕಾರ ನೀಡುವ ಶಾಲೆಗಳ ಅಗತ್ಯ ಹೆಚ್ಚಾಗಿದೆ' ಎಂದರು. ವಿದ್ಯಾರ್ಥಿಯ ಶ್ರಮ, ಪ್ರತಿಭೆ, ಶ್ರೇಷ್ಠತೆ ಗುರುತಿಸಿ ಪುರಸ್ಕರಿಸುವ ಕೆಲಸ ಮಾಡಿದಾಗ ಸಾಧನೆಗೆ ಉತ್ತೇಜನ ಸಿಗುತ್ತದೆ. ಶೈಕ್ಷಣಿಕ, ಕ್ರೀಡಾ ಮತ್ತು ಸಾಂಸ್ಕೃತಿಕ ಸಾಧನೆಗಳಿಗಾಗಿ ಬಹುಮಾನ ವಿತರಿಸಲಾಗುತ್ತಿದ್ದು ಬಹುಮಾನ ಪಡೆದವರು ಇತರೆ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಲಿ' ಎಂದು ಕುಮದ್ವತಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಕೆ.ಸಿ.ರವೀಂದ್ರ ಹೇಳಿದರು.

ಪುನರ್ವಸತಿ ಕಾರ್ಯಕರ್ತರ ಗೌರವಧನ ಕನಿಷ್ಠ ವೇತನ ಕಾಯ್ದೆ ವ್ಯಾಪ್ತಿಗೆ

• ಉದಯವಾಹಿನಿ ಬೆಳಗಾವಿ

ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು, ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರು, ನಗರ ಪುನರ್ವಸತಿ ಕಾರ್ಯಕರ್ತರ ಗೌರವಧನವನ್ನು ಕನಿಷ್ಠ ವೇತನ ಕಾಯ್ದೆಯಡಿ ತರುವ ಪ್ರಸ್ತಾವನೆಯನ್ನು ಕಾರ್ಮಿಕ ಇಲಾಖೆ ಅಭಿಪ್ರಾಯ ಪಡೆಯಲು ಸಲ್ಲಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಯಕರ ಸಬಲೀಕರಣ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ವಿಧಾನಸಭೆಗೆ ತಿಳಿಸಿದ್ದಾರೆ. ಶಾಸಕ ಎಸ್.ಸುರೇಶ್‌ಕುಮಾರ್ ಅವರ ಗಮನ ಸೆಳೆಯುವ ಸೂಚನೆಗೆ ಉತ್ತರ ನೀಡಿರುವ ಸಚಿವರು, ಗ್ರಾಮೀಣ ಪುನರ್ವಸತಿ ಯೋಜನೆಯಡಿ ತಾಲ್ಲೂಕು ಪಂಚಾಯ್ತಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ 176 ವಿವಿದ್ದೋದ್ದೇಶ ಕಾರ್ಯಕರ್ತರಿಗೆ 16 ಸಾವಿರ ರೂ. ಗೌರವಧನ ನೀಡಲಾಗುತ್ತಿದೆ ಎಂದಿದ್ದಾರೆ. 6,022 ಗ್ರಾಮಪಂಚಾಯ್ತಿಗಳಲ್ಲಿನ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಿಗೆ 10 ಸಾವಿರ ರೂ. ಹಾಗೂ 613 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ನಗರ ಪುನರ್ವಸತಿ ಕಾರ್ಯಕರ್ತರಿಗೆ 10 ಸಾವಿರ ರೂ. ಗೌರವಧನ ನೀಡಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಬೋಧಕೇತರ ಹುದ್ದೆಗಳಿಗೆ ಶೀಘ್ರ ಮುಂಬಡ್ತಿ : ಸಚಿವ ಮಧುಬಂಗಾರಪ್ಪ

• ಉದಯವಾಹಿನಿ ಬೆಳಗಾವಿ

ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯಲ್ಲಿ 1879 ಬೋಧಕೇತರ ವೃಂದದ ಹುದ್ದೆಗಳು ಖಾಲಿ ಇವೆ. ಶೀಘ್ರದಲ್ಲೇ ಬೋಧಕೇತರ ವೃಂದದ ಎಲ್ಲಾ ಹುದ್ದೆಗಳಿಗೆ ಮುಂಬಡ್ತಿ ನೀಡಲು ಕ್ರಮ ಕೈಗೊಳ್ಳುವುದಾಗಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧುಬಂಗಾರಪ್ಪ ವಿಧಾನಸಭೆಗೆ ತಿಳಿಸಿದ್ದಾರೆ. ಶಾಸಕ ಅನಿಲ್ ಚಿಕ್ಕಮಾದು ಅವರು ನಿಯಮ 351ರಡಿ ನೀಡಿರುವ ಸೂಚನೆಗೆ ಉತ್ತರಿಸಿದ ಸಚಿವರು, ಪ್ರಸಕ್ತ ಸಾಲಿನಲ್ಲಿ ಮುಂಬಡ್ತಿ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಕಾರ್ಯ ನಿರ್ವಹಣಾ ವರದಿ ಪರಿಶೀಲನಾ ಹಂತದಲ್ಲಿದೆ. ಶೀಘ್ರದಲ್ಲೇ ಬೋಧಕೇತರ ವೃಂದದ ಹುದ್ದೆಗಳಿಗೆ ಬಡ್ತಿ ನೀಡಲಾಗುವುದು ಎಂದಿದ್ದಾರೆ.

ಕಾಲಕಾಲಕ್ಕೆ ಉದ್ಭವವಾಗುವ ಹಾಗೂ ಮುಂಬಡ್ತಿ ಪ್ರಕ್ರಿಯೆಯಲ್ಲಿ ಬಡ್ತಿಯನ್ನು ಮುಂದೂಡುವ ನೌಕರರಿಂದ, ಬಡ್ತಿ ನಂತರ ನಿವೃತ್ತಿ, ನಿಧನ ಮತ್ತಿತರ ಕಾರಣಗಳಿಂದ ಸ್ಥಾನಗಳು ತೆರವಾದಲ್ಲಿ ಬಡ್ತಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ. ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯಲ್ಲಿ 3740 ಬೋಧಕೇತರ ವೃಂದದ ಅಧಿಕಾರಿ/ನೌಕರರ ಹುದ್ದೆಗಳು ಮಂಜೂರಾಗಿವೆ. 1861 ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸಲಾಗುತ್ತಿದೆ. ಇನ್ನು 1879 ಹುದ್ದೆಗಳು ಖಾಲಿ ಇವೆ ಎಂದು ಅವರು ವಿವರಣೆ ನೀಡಿದ್ದಾರೆ.

ಕೃಷ್ಣೆಗೆ ಕಂಟಕವಾದ ತ್ಯಾಜ್ಯ : ನದಿ ವಿಷವಾಗುತ್ತಿರುವ ಬಗ್ಗೆ ಕೇಳುವವರಿಲ್ಲ

• ಉದಯವಾಹಿನಿ ರಾಯಚೂರು

ಜಿಲ್ಲೆಯಲ್ಲಿ ಹರಿದು ಹೋಗುವ ಕೃಷ್ಣಾ ನದಿಗೆ ತ್ಯಾಜ್ಯ ನೇರವಾಗಿ ಸೇರುತ್ತಿದ್ದು, ನದಿ ಪಾತ್ರದ ಜೀವ ಸಂಕುಲಕ್ಕೆ ಕಂಟಕವಾಗಿ ಪರಿಣಮಿಸಿದೆ.

ನದಿ ಪಾತ್ರದ ಊರುಗಳ ಚರಂಡಿ ನೀರು ನದಿ ಪಾಲಾಗುತ್ತಿದೆ. ಮತ್ತೊಂದೆಡೆ ನದಿ ದಂಡೆಯಲ್ಲಿ ನಡೆಸುವ ಧಾರ್ಮಿಕ ಕಾರ್ಯಕ್ರಮ, ಹಬ್ಬ ಹರಿದಿನ, ಸಮಾವೇಶ, ಮದುವೆ, ನಾಮಕರಣ ಸೇರಿ ಇತರ ಸಮಾರಂಭಗಳಲ್ಲಿ ಊಟ, ಉಪಾಹಾರದ ಬಳಿಕ ಎಸೆಯುವ ಪ್ಲಾಸ್ಟಿಕ್ ತಟ್ಟೆ, ಲೋಟ ಮುಂತಾದ ತ್ಯಾಜ್ಯಗಳು ನದಿಗೆ ಸೇರುತ್ತಿವೆ. ಮತ್ತೊಂದೆಡೆ ಕುರಿ, ಕೋಳಿ, ದನ-ಕರುಗಳ ಮಾಂಸದ ತ್ಯಾಜ್ಯವನ್ನೂ ನದಿಗೆ ಸುರಿಯುತ್ತಿರುವುದು ಕಂಡುಬಂದಿದೆ.

ಸ್ಥಳೀಯ ಸಂಸ್ಥೆಗಳ ನಿರ್ಲಕ್ಷ್ಯ: ನದಿ ಹಾಗೂ ನದಿ ಪಾತ್ರ ಕಲುಷಿತವಾಗದಂತೆ ಎಚ್ಚರವಹಿಸಬೇಕಾದ ಸ್ಥಳೀಯ ಸಂಸ್ಥೆಗಳೂ ಮೌನವಹಿಸಿವೆ. ಬೇಸಾಯಕ್ಕೆ ಬಳಕೆಯಾಗುವ ಹಾನಿಕಾರಕ ರಾಸಾಯನಿಕಗಳು ಮಳೆಗಾಲದಲ್ಲಿ ಹಳ್ಳಗಳ ಮೂಲಕ ನದಿ ಸೇರುತ್ತಿದೆ.

ವೈಜ್ಞಾನಿಕವಾಗಿ ಸಂಸ್ಕರಿಸದೇ ಕಾರ್ಖಾನೆಗಳ ತ್ಯಾಜ್ಯವನ್ನು ನದಿಗೆ ಬಿಡುತ್ತಿರುವುದರಿಂದ ನದಿಗಳು ರಾಜಕಾಲುವೆಗಳ ರೂಪ ಪಡೆಯುತ್ತಿವೆ.

2024ರ ಮಳೆಗಾಲದ ಸಂದರ್ಭ ಆರ್‌ಟಿಪಿಎಸ್‌ನ ಬೂದಿ ಹಾಗೂ ತ್ಯಾಜ್ಯ ನೀರು ಕೃಷ್ಣಾ ನದಿಗೆ ಸೇರಿ ಮಾಲಿನ್ಯ ಉಂಟಾಗಿತ್ತು.

ಈ ಕುರಿತು ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ನೋಟಿಸ್ ಜಾರಿಯ

ದಿನ ಭವಿಷ್ಯ

ರಾಹುಕಾಲ	ಸಾಯಂಕಾಲ	04:30 ರಿಂದ 06:00
ಗುಳಿಕ ಕಾಲ	ಮಧ್ಯಾಹ್ನ	03:00 ರಿಂದ 04:30
ಯಮಗಂಡ ಕಾಲ	ಮಧ್ಯಾಹ್ನ	12:00 ರಿಂದ 01:30

ಮೇಷ ಆರೋಗ್ಯಕ್ಕೆ ಸಂಬಂಧಿಸಿದಂತೆ ನೀವು ತಿನ್ನುವುದರ ಬಗ್ಗೆ ಜಾಗರೂಕರಾಗಿರಿ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ಕುಟುಂಬದ ಸದಸ್ಯರ ಅಗತ್ಯಗಳಿಗೆ ಆದ್ಯತೆ ನೀಡಿ.

ವೃಷಭ ಸಂಘರ್ಷವು ನಿಮ್ಮ ಅನಾರೋಗ್ಯವನ್ನು ಇನ್ನಷ್ಟು ಹಾಳು ಮಾಡಬಹುದಾದ್ದರಿಂದ ಅದನ್ನು ತಪ್ಪಿಸಿ. ತಂದೆ ತಾಯಿಯರಲ್ಲಿ ಯಾರಾದರೂ ಒಬ್ಬರು ಹಣವನ್ನು ಸಂಗ್ರಹಿಸುವ ಬಗ್ಗೆ ಉಪನ್ಯಾಸಗಳನ್ನು ನೀಡಬಹುದು.

ಮಿಥುನ ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಧೃತಿಗೆಡಬೇಡಿ ಹಾಗೂ ನಿರೀಕ್ಷಿತ ಫಲಿತಾಂಶ ಪಡೆಯಲು ಕಠಿಣ ಪರಿಶ್ರಮಪಡಿ. ಈ ಹಿನ್ನಡೆಗಳು ನಿಮ್ಮ ಯಶಸ್ಸಿನ ಸೋಪಾನಗಳಾಗಿರಲಿ.

ಕರ್ಕಾಟಕ ನಿಮ್ಮ ಜೀವನವನ್ನು ಲಘುವಾಗಿ ತೆಗೆದುಕೊಳ್ಳಬೇಡಿ, ಬದುಕಿನ ರಕ್ಷಣೆ ನಿಜವಾದ ಆಣೆ. ನೀವು ಯಾತ್ರೆಯಲ್ಲಿ ಹೋಗುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ಗಮನ ಹರಿಸಿ ಅವುಗಳನ್ನು ಕದಿಯುವ ಸಾಧ್ಯತೆ ಇದೆ.

ಸಿಂಹ ನೀವು ವ್ಯಾಯಾಮದ ಮೂಲಕ ನಿಮ್ಮ ತೂಕವನ್ನು ನಿಯಂತ್ರಿಸಬಹುದು. ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ಮನೆಯ ಸುಧಾರಣೆಯ ಯೋಜನೆಗಳನ್ನು ಪರಿಗಣಿಸಬೇಕು.

ಕನ್ಯಾ ಸಿಹಿಯಾದ ಪ್ರೀತಿಯ ಜೀವನದಲ್ಲಿನ ಉತ್ಕಟತೆಯನ್ನು ಆನಂದಿಸುತ್ತೀರಿ. ಯಾವುದೊ ಹೊಸ ಪುಸ್ತಕವನ್ನು ಖರೀದಿಸಿ, ಯಾವುದೇ ಕೊಠಡಿಯಲ್ಲಿ ಸ್ವತಃ ಲಾಕ್ ಮಾಡಿ ಇಡೀ ದಿನವನ್ನು ಕಳೆಯಬಹುದು.

ತುಲಾ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಇಂದು ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ನೀವು ನಿಮ್ಮ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು.

ವೃಶ್ಚಿಕ ನೀವು ನಿಮ್ಮ ಪ್ರಯತ್ನಗಳ ಮೇಲೆ ಗಮನ ಹರಿಸಬೇಕು. ಕೆಲಸದ ಪ್ರದೇಶದಲ್ಲಿ ಯಾವುದೇ ಕೆಲಸ ಸಿಲುಕಿಕೊಂಡಿರುವ ಕಾರಣದಿಂದಾಗಿ ಇಂದು ನಿಮ್ಮ ಸಂಜೆಯ ಅಮೂಲ್ಯವಾದ ಸಮಯ ಹದಗೆಡಬಹುದು.

ಧನಸ್ಸು ನಿಮ್ಮ ಮಾರ್ಗದಲ್ಲಿ ಆಫೀಸಿನ ಕೆಲಸದಲ್ಲಿ ಗುಣಮಟ್ಟದ ಸುಧಾರಣೆಯನ್ನು ಅನುಭವಿಸುತ್ತೀರಿ. ಪ್ರಯಾಣ ಹೊಸ ಸ್ಥಳಗಳನ್ನು ನೋಡಲು ಮತ್ತು ಪ್ರಮುಖರನ್ನು ಭೇಟಿಯಾಗಲು ನಿಮಗೆ ಅವಕಾಶ ನೀಡುತ್ತದೆ.

ಮಕರ ನಿಮ್ಮ ಜೀವನವನ್ನು ಲಘುವಾಗಿ ತೆಗೆದುಕೊಳ್ಳಬೇಡಿ ನೆನಪಿಡಿ, ಬದುಕಿನ ರಕ್ಷಣೆ ನಿಜವಾದ ಆಣೆ. ಆಸ್ತಿ ವ್ಯವಹಾರಗಳು ಅಸಾಧಾರಣ ಲಾಭ ತರುತ್ತವೆ. ವೈಯಕ್ತಿಕ ವಿಷಯಗಳನ್ನು ಬಗೆಹರಿಸುವಲ್ಲಿ ಉದಾರತೆ ತೋರಿ.

ಕುಂಭ ಇಂದು ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ನೀವು ಇಂದು ಹಣ ಉಳಿಸುವುದು ಕಷ್ಟ. ನೀವು ಇಂದು ಅತಿಯಾಗಿ ಖರ್ಚು ಮಾಡುವ ಅಥವಾ ನಿಮ್ಮ ಪರ್ಸ್ ಕಳೆದುಕೊಳ್ಳುವ ಸಾಧ್ಯತೆಗಳಿವೆ.

ಮೀನ ಸಂಗಾತಿಯು ಸಂತೋಷ ನೀಡಲು ಪ್ರಯತ್ನ ಮಾಡಿದಾಗಿನ ಪೂರ್ಣ ಸಂತೋಷದ ಒಂದು ದಿನ. ಸಹಭಾಗಿತ್ವ ಯೋಜನೆಗಳು ಲಾಭಕ್ಕಿಂತ ಹೆಚ್ಚಾಗಿ ಸಮಸ್ಯೆಗಳನ್ನು ಸೃಷ್ಟಿಸುತ್ತವೆ.

ತಲಾ ಆದಾಯ ಅಂಕಿ ಸಂಖ್ಯೆ ಗಮನಿಸಿದರೆ ನಮ್ಮ ಭಾಗದ ಆರ್ಥಿಕತೆ ಹಾಗೂ ಜನರ ಜೀವನಮಟ್ಟ ಕೆಳಮಟ್ಟದಲ್ಲಿದೆ

ತಲಾ ಆದಾಯ ಹೆಚ್ಚಳಕ್ಕೆ ಯೋಜನೆ ರೂಪಿಸಿ: ಡಾ.ಶೈಲೇಂದ್ರ ಬೆಲ್ದಾಳೆ

• ಉದಯವಾಹಿನಿ ಬೀದರ್

ವಾರ್ಷಿಕ ತಲಾ ಆದಾಯದಲ್ಲಿ ಕರ್ನಾಟಕ ನಂಬರ್ ಒನ್ ಇದ್ದರೂ, ಕಲ್ಯಾಣ ಕರ್ನಾಟಕ ಭಾಗದ ಎಲ್ಲಾ ಜಿಲ್ಲೆಗಳು ತೀರ ಹಿಂದುಳಿದಿವೆ. ತಲಾ ಆದಾಯ ಅಂಕಿ ಸಂಖ್ಯೆ ಗಮನಿಸಿದರೆ ನಮ್ಮ ಭಾಗದ ಆರ್ಥಿಕತೆ ಹಾಗೂ ಜನರ ಜೀವನಮಟ್ಟ ಎಷ್ಟು ಕೆಳಮಟ್ಟದಲ್ಲಿದೆ ಎಂಬುದು ತೋರಿಸುತ್ತದೆ. ಸರ್ಕಾರ ಇದನ್ನು ಗಂಭೀರ ಪರಿಗಣಿಸಿ ತಲಾ ಆದಾಯ ಹೆಚ್ಚಳಕ್ಕೆ ವಿಶೇಷ ಯೋಜನೆ ರೂಪಿಸಬೇಕು ಎಂದು ಬೀದರ್ ದಕ್ಷಿಣ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಆಗ್ರಹಿಸಿದ್ದಾರೆ.

ಬೆಳಗಾವಿ ಅಧಿವೇಶನದಲ್ಲಿ ಉತ್ತರ ಕರ್ನಾಟಕ ಭಾಗದ ವಿಶೇಷ ಚರ್ಚೆ ಮೇಲೆ ಮಾತನಾಡಿದ ಅವರು, ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ ಸೇರಿ ಎಲ್ಲಾ ಜಿಲ್ಲೆಗಳು ತಲಾ ಆದಾಯದಲ್ಲಿ ಕೊನೇ ಸ್ಥಾನದಲ್ಲಿರುವುದು 2024-25ನೇ ಸಾಲಿನ ಆರ್ಥಿಕ ಸಮೀಕ್ಷೆ, ಹಣಕಾಸು ಇಲಾಖೆ ಅಂಕಿಅಂಶ ತಿಳಿಸುತ್ತಿವೆ. ಬೆಂಗಳೂರಿನ ತಲಾ ಆದಾಯ 6 ಲಕ್ಷಕ್ಕೂ ಹೆಚ್ಚಿದೆ.

ನಮ್ಮ ಜಿಲ್ಲೆಗಳ ಪ್ರಮಾಣ 1.50 ಲಕ್ಷ ದಾಟಿಲ್ಲ. ಕಲ್ಯಾಣ ಕರ್ನಾಟಕ ವಿಭಾಗ ಕೇಂದ್ರ ಕಲಬುರಗಿ ಜಿಲ್ಲೆಯ ತಲಾ ಆದಾಯ ರಾಜ್ಯದಲ್ಲೇ ಅತೀ ಕಡಿಮೆ 1.30 ಲಕ್ಷವಿದೆ. ಈ ಸಂಖ್ಯೆ ಕಳವಳಕಾರಿಯಾಗಿವೆ. ಸರ್ಕಾರ ಏನು ಮಾಡುತ್ತಿದೆ ಎಂದು ಪ್ರಶ್ನಿಸಿ ಸದನದ ಗಮನ ಸೆಳೆದರು. ಕಲ್ಯಾಣ ಕರ್ನಾಟಕದ ಜಿಲ್ಲೆಗಳಿಗಿಂತ ಬೆಂಗಳೂರಿನ ತಲಾ ಆದಾಯ 4-5 ಪಟ್ಟು ಹೆಚ್ಚಿದೆ. ಹಾಗಾದರೆ ನಮ್ಮ ಭಾಗದ ಜನರ ಸ್ಥಿತಿ, ಆರ್ಥಿಕತೆ ಸುಧಾರಿಸುವುದು ಯಾವಾಗ? ಮಳೆಯಾಧಾರಿತ ಕೃಷಿ, ಕಡಿಮೆ ಕೈಗಾರಿಕೆ, ಶಿಕ್ಷಣದ ಕೊರತೆ ಇದಕ್ಕೆ ಪ್ರಮುಖ ಕಾರಣವಿದೆ. ಸಮಸ್ಯೆ ಮೂಲ ಹುಡುಕಿ ಸರ್ಕಾರ ಕ್ರಮ ಕೈಗೊಳ್ಳಬೇಕು. ಯಾವ್ಯಾವ ಯೋಜನೆಗಳ ಮೂಲಕ ತಲಾ ಆದಾಯ ಹೆಚ್ಚಿಸಲಾಗುತ್ತದೆ ಎಂಬುದು ಸರ್ಕಾರ ಸ್ಪಷ್ಟಪಡಿಸಬೇಕೆಂದು ಒತ್ತಾಯಿಸಿದರು.

ಪೋಲಾಗುತ್ತಿದೆ ನಮ್ಮ ನೀರು: ಈ ಭಾಗದ ನೀರಾವರಿ ವಿಷಯ ಪ್ರಸ್ತಾಪಿಸಿದ ಶಾಸಕ ಬೆಲ್ದಾಳೆ, ಕಾವೇರಿಗೆ ನೀಡುವ ಪ್ರಾಮುಖ್ಯತೆ ಕೃಷ್ಣಾ, ಗೋದಾವರಿ ಜಲಾನಯನ ಸೇರಿ ನಮ್ಮ ಭಾಗದ ನೀರಾವರಿಗಳಿಗೆ ಏಕೆ ಕೊಡುತ್ತಿಲ್ಲ ಎಂದು ಪ್ರಶ್ನಿಸಿದರು.

ಬೆಳಗಾವಿ ಜಿಲ್ಲೆಯ 14 ಏತ ನೀರಾವರಿ ಯೋಜನೆಗಳಿಗೆ ಹಿಂದಿನ ಬಿಜೆಪಿ ಸರ್ಕಾರ ಅಸ್ತು ನೀಡಿ 5 ಸಾವಿರ ಕೋಟಿ ರೂ. ಘೋಷಿಸಿತ್ತು. ಆದರೆ ಈ ಸರ್ಕಾರ ಇದಕ್ಕೆ ಹಣವೇ ನೀಡಿಲ್ಲ. ಕಳಸಾಬಂಡೂರಿ ಯೋಜನೆ ನೆನೆಗುದಿಗೆ ಬಿದ್ದಿದೆ. ಕೃಷ್ಣಾ ಮೇಲ್ದಂಡೆ 3ನೇ ಹಂತದ ಕೆಲಸ ಆರಂಭಿಸುತ್ತಿಲ್ಲ. ಕಲಬುರಗಿ ಜಿಲ್ಲೆಯ ಭೀಮಾ, ಸೊನ್ನ ಇತರೆ ನೀರು ಸದ್ಬಳಕೆಗೆ ಕ್ರಮವಿಲ್ಲ. ಬಚಾವತ್ ಆಯೋಗದ ತೀರ್ಪಿನಂತೆ ಬೀದರ್ ಜಿಲ್ಲೆಯ ಗೋದಾವರಿ ಜಲಾನಯನದ ಇನ್ನೂ 8 ಟಿಎಂಸಿ ನೀರಿನ ಬಳಕೆಗೆ ಅನುದಾನ ಕೊಡುತ್ತಿಲ್ಲ. ಏತ ನೀರಾವರಿ, ಹೊಸ ಬ್ಯಾರೇಜ್ ನಿರ್ಮಾಣಕ್ಕೆ ಯೋಜನೆ ರೂಪಿಸುತ್ತಿಲ್ಲ. ಹೀಗಾಗಿ ನಮ್ಮ ನೀರು ತೆಲಂಗಾಣಕ್ಕೆ ಹರಿದುಹೋಗುತ್ತಿದೆ. ಸರ್ಕಾರ ನೀರಾವರಿ ಯೋಜನೆ ಕೈಗೆತ್ತಿಕೊಂಡು ನುಡಿದಂತೆ ನಡೆಯಲಿ ಎಂದರು.

ಅನುಭವ ಮಂಟಪ ಬೇಗ ಮುಗಿಸಿ: ಬಸವಕಲ್ಯಾಣದಲ್ಲಿ ನೂತನ ಅನುಭವ ಮಂಟಪಕ್ಕೆ ಹಿಂದಿನ ನಮ್ಮ ಸರ್ಕಾರದಲ್ಲಿ ಯಡಿಯೂರಪ್ಪ ಅವರು 200 ಕೋಟಿ ರೂ. ನೀಡಿದ್ದರು. ಆದರೆ ಈ ಸರ್ಕಾರ ಕೇವಲ 50 ಕೋಟಿ ಕೊಟ್ಟಿದೆ. 750 ಕೋಟಿ ವೆಚ್ಚದ ಈ ಕಾಮಗಾರಿಗೆ ವೇಗ ನೀಡಿ ಆದ್ಯತೆ ಮೇಲೆ ಮುಗಿಸಿ ಬಸವಕಲ್ಯಾಣ ವಿಶ್ವದ ಪ್ರಮುಖ ಆಧ್ಯಾತ್ಮಿಕ, ಧಾರ್ಮಿಕ ಪ್ರವಾಸಿ ತಾಣವಾಗಿಸಬೇಕು ಎಂದು ಆಗ್ರಹಿಸಿದರು.

ಪರಿಶಿಷ್ಟರ ಓಣಿ ಅಭಿವೃದ್ಧಿಪಡಿಸಿ: ಎಸ್ಸಿಪಿ/ಟಿಎಸ್‌ಪಿ ಅಡಿ ಸರ್ಕಾರ ವರ್ಷಕ್ಕೆ ನಮ್ಮ ವಿಧಾನಸಭೆ ಕ್ಷೇತ್ರಕ್ಕೆ ಕೇವಲ 50 ಲಕ್ಷ ನೀಡುತ್ತಿದೆ. ಇದು ಯಾವುಕ್ಕೂ ಸಾಲದು. ಮಾತೆತ್ತಿದರೆ ಸಿಎಂ, ಡಿಸಿಎಂ ಅವರು ಪರಿಶಿಷ್ಟರ ಅಭಿವೃದ್ಧಿಗೆ ನಮ್ಮ ಆದ್ಯತೆ ಎನ್ನುತ್ತಾರೆ. ಈ ಮಾತು ನಿಜವಾಗಬೇಕಾದರೆ ಅನುದಾನ ಹೆಚ್ಚಿಸಿ ಪರಿಶಿಷ್ಟರ ಬಡಾವಣೆಗಳ ಅಭಿವೃದ್ಧಿಗೆ ಆದ್ಯತೆ ನೀಡಬೇಕು ಎಂದು ಕೋರಿದರು.

ಸದನದಲ್ಲಿ ಚರ್ಚೆಯ ಲಾಭವೇನು?: ಕಳೆದ ವರ್ಷದ ಚಳಿಗಾಲದ ಅಧಿವೇಶನದಲ್ಲಿ ಈ ಭಾಗದ ಜನರ, ರೈತರ ಹಿತದಿಂದ ಅನೇಕ ಜ್ವಲಂತ ವಿಷಯ ಪ್ರಸ್ತಾಪಿಸಿ ಸುದೀರ್ಘ ಚರ್ಚೆ ನಡೆಸಲಾಗಿದೆ. ಆದರೆ ವರ್ಷ ಕಳೆದರೂ ಬಹುತೇಕ ಸಮಸ್ಯೆಗಳಿಗೆ ಸ್ಪಂದನೆ ಸಿಕ್ಕಿಲ್ಲ. ಹಾಗಾದರೆ ಚರ್ಚೆ ಮಾಡಿ ಲಾಭವೇನು? ಈ ಭಾಗದ ಪ್ರಗತಿಗೆ ಪೂರಕವಾಗಲೆಂದೇ ನಡೆಸುತ್ತಿರುವ ಈ ಅಧಿವೇಶನದ ಮೂಲ ಆಶಯಕ್ಕೆ ಇದು ಕೊಡಲಿ ಪೆಟ್ಟು ಹಾಕಿದಂತಲ್ಲವೆ? ಚರ್ಚೆ ಎಂದು ಶಾಸಕ ಶೈಲೇಂದ್ರ ಬೆಲ್ದಾಳೆ ಪ್ರಶ್ನಿಸಿ ಸದನದ ಗಮನ ಸೆಳೆದರು.

ಖಾಲಿ ಹುದ್ದೆ ಭರ್ತಿ ಯಾವಾಗ?

ಕಕ ಭಾಗದಲ್ಲಿ 30 ಸಾವಿರಕ್ಕೂ ಹೆಚ್ಚು ಹುದ್ದೆ ಖಾಲಿಯಿದ್ದು, ಆಡಳಿತ ವ್ಯವಸ್ಥೆ ಸಂಪೂರ್ಣ ನಿಷ್ಕ್ರಿಯವಾಗಿದೆ. 5 ವರ್ಷದಲ್ಲಿ ಹಂತ-ಹಂತವಾಗಿ ಹುದ್ದೆ ಭರ್ತಿ ಮಾಡುತ್ತೇವೆ ಎಂಬ ಭರವಸೆ ಹುಸಿಯಾಗಿದೆ. ಹಿಂದಿನ ಎರಡೂವರೆ ವರ್ಷದಲ್ಲಿ 3 ಸಾವಿರ ಹುದ್ದೆ ಸಹ ತುಂಬಿಲ್ಲ. ಬೀದರ್ ಜಿಲ್ಲೆಯಲ್ಲಿ ಒಬ್ಬ ಅಧಿಕಾರಿಗೆ ಎರಡ್ಮೂರು ಪ್ರಭಾರ. ಹೀಗಾದರೆ ಅವರು ಕೆಲಸ ಹೇಗೆ ಮಾಡುತ್ತಾರೆ? ಜನರ ಸಮಸ್ಯೆಗೆ ಸ್ಪಂದನೆ ಹೇಗೆ? ಅಭಿವೃದ್ಧಿಗೆ ವೇಗ ಎಲ್ಲಿಂದ ಸಿಗುತ್ತದೆ ಎಂದು ಪ್ರಶ್ನಿಸಿದರು.

ಉದಯವಾಹಿನಿ ಚಿತ್ರ

ಕೈಗಾರಿಕೆಗೆ ಉತ್ತೇಜನ ನೀಡಿ

ಬೀದರ್ ಸೇರಿ ನಮ್ಮ ಭಾಗದಲ್ಲಿ ಕೈಗಾರಿಕೆಗಳಿಲ್ಲ. ಹೀಗಾಗಿ ದುಡಿಯುವ ಕೆಲಸಗಳಿಗೆ ಉದ್ಯೋಗವಿಲ್ಲ. ಇದು ನಮ್ಮ ಭಾಗದ ಅಭಿವೃದ್ಧಿ ಹಿನ್ನಡೆ ತರುತ್ತಿದೆ. ಕೈಗಾರಿಕೆ ಸ್ಥಾಪನೆಗೆ ಆದ್ಯತೆ ಕೊಡಬೇಕು. ಐಟಿ-ಬಿಟಿ ಮೀಟ್ ಬೆಂಗಳೂರು ಬದಲು ಹಿಂದುಳಿದ ನಮ್ಮ ಭಾಗದಲ್ಲಿ ನಡೆಸಬೇಕು. ಕಲಬುರಗಿಯವರಾದ ಐಟಿ,ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಇತ್ತ ಚಿತ್ತಹರಿಸಬೇಕು. ಸರ್ಕಾರ ಈ ಭಾಗದ ಎಲ್ಲಾ ಜಿಲ್ಲೆಗಳಲ್ಲಿ ದೊಡ್ಡ ಕಂಪನಿಗಳಿಂದ ಪ್ರತಿ ವರ್ಷ ಉದ್ಯೋಗ ಮೇಳ ಸಂಘಟಿಸಿ ನಿರುದ್ಯೋಗಿಗಳಿಗೆ ಕೆಲಸ ಕೊಡಿಸಬೇಕು ಎಂದು ಬೆಲ್ದಾಳೆ ಹೇಳಿದರು.

ಸರ್ಕಾರ ಏನು ಮಾಡುತ್ತಿದೆ

ಕೊರಗ ಅಭಿವೃದ್ಧಿ ನಿಗಮ ಸ್ಥಾಪನೆಗೆ ಬೇಡಿಕೆ

• ಉದಯವಾಹಿನಿ ಪುತ್ತೂರು

ಅತ್ಯಂತ ಸಂಕಷ್ಟದಲ್ಲಿರುವ ಕೊರಗ ಸಮುದಾಯದ ಅಭಿವೃದ್ಧಿಗಾಗಿ ಕೊರಗ ಅಭಿವೃದ್ಧಿ ನಿಗಮ ಸ್ಥಾಪನೆ ಮಾಡಬೇಕು. ಕೊರಗ ಕುಟುಂಬಕ್ಕೆ 2 ಎಕರೆ ಭೂಮಿ ನೀಡಬೇಕು ಹಾಗೂ ಪುನರ್ ವಸತಿ ಕಲ್ಪಿಸಬೇಕು. ಕೊರಗ ಸಮುದಾಯದ ಯುವಕರಿಗೆ ವಿಶೇಷ ನೇರನೇಮಕಾತಿಯಲ್ಲಿ ಉದ್ಯೋಗ ಕೊಡಿಸಬೇಕು.

ಇಲಾಖಾವಾರು ಸಮಿತಿಯಲ್ಲಿ ಪ್ರಾತನಿಧ್ಯ ಹಾಗೂ ಸ್ಥಳೀಯಾಡಳಿತದಲ್ಲಿ ವಿಶೇಷ ಮೀಸಲಾತಿ ಜತೆಗೆ ವಿಶೇಷ ಉದ್ಯೋಗ ಹಕ್ಕು ಕಾಯಿದೆ ರೂಪಿಸಬೇಕು ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರನ್ನು ದಕ ಜಿಲ್ಲಾ ಕೊರಗ ಹಾಗೀ ಜೇನುಕುರುಬರ ಸಂಘ ಆಗ್ರಹಿಸಿದೆ.

ಬೆಳಗಾವಿಯ ಸುವರ್ಣಸೌಧದಲ್ಲಿ ಪುತ್ತೂರು ಶಾಸಕ ಅಶೋಕ್ ರೈ ಅವರ ನೇತೃತ್ವದಲ್ಲಿ ಮುಖ್ಯಮಂತ್ರಿ ಅವರನ್ನು ಭೇಟಿ ಮಾಡಿದ ನಿಯೋಗ ಅತ್ಯಂತ ಹಿಂದುಳಿದ ಸ್ಥಿತಿಯಲ್ಲಿರುವ ಕೊರಗ ಸಮುದಾಯ ಶೈಕ್ಷಣಿಕ ಹಾಗೂ ಸಾಮಾಜಿಕವಾಗಿ ಸಮಾಜದ ಮುಖ್ಯವಾಹಿನಿಯಲ್ಲಿ ಸೇರಬೇಕಾದರೆ ಬೇಡಿಕೆಗಳ ಈಡೇರಿಕೆ ಅಗತ್ಯ ಎಂದು ಮುಖ್ಯಮಂತ್ರಿ ಅವರಿಗೆ ಮನವಿ ಮಾಡಿದರು. ಈ ಸಂದರ್ಭ ಶಾಸಕ ಅಶೋಕ್ ರೈ ಅವರು ಕೊರಗ ಕುಟುಂಬಗಳ ಬದುಕಿನ ಸಮಸ್ಯೆಗಳನ್ನು ಮುಖ್ಯಮಂತ್ರಿ ಅವರ ಗಮನಕ್ಕೆ ತಂದರು.

ಉದಯವಾಹಿನಿ ಚಿತ್ರ

ಅಗ್ನಿಶಾಮಕ ಇಲಾಖೆಯಿಂದ ಬೆಂಕಿಯಿಂದ ಆಗುವ ಅನಾಹುತಗಳ ಬಗ್ಗೆ ಸಾರ್ವಜನಿಕರಿಗೆ ಹಾಗೂ ಶಾಲಾ ಮಕ್ಕಳಿಗೆ ಜಾಗೃತಿ ಕಾರ್ಯಕ್ರಮ ಹಾಗೂ ಅಣುಕು ಪ್ರದರ್ಶನ

• ಉದಯವಾಹಿನಿ ಕಾರಟಗಿ

ಇಲ್ಲಿಯ ಅಗ್ನಿಶಾಮಕ ದಳದವರು ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಬೆಂಕಿ ಅವಘಡಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಿದ್ದು, ಶನಿವಾರ ಕಾರಟಗಿ ತಾಲ್ಲೂಕಿನ ಬೇವಿನಾಳ ಗ್ರಾಪಂ, ವ್ಯಾಪ್ತಿಯ ಬಸವಣ್ಣ ಕ್ಯಾಂಪ್ ನ ಉಣ್ಣಿ ಬಸವೇಶ್ವರ ಸರಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ಪ್ರಾತ್ಯಕ್ಷಿಕೆಗಳನ್ನು ನಡೆಸುವ ಮೂಲಕ ಅರಿವು ಮೂಡಿಸಿದರು.

ಬೆಂಕಿಯಿಂದ ಆಗುವ ಅವಘಡಗಳ ಜಾಗೃತಿ ಕಾರ್ಯಕ್ರಮದ ರೂವಾರಿಗಳಾದ ಅಗ್ನಿ ಶಾಮಕ ಸಿಬ್ಬಂದಿ ವಿಶೇಷ ಉಪನ್ಯಾಸಕರಾದ ಮಂಜುನಾಥ್ ರವರು ಅಗ್ನಿಯಿಂದ ಅನಾಹುತಗಳನ್ನು ನಿಯಂತ್ರಿಸಲು ನಮ್ಮ ಪಾತ್ರ ಅತಿ ಮುಖ್ಯವಾದದ್ದು, ಸಾರ್ವಜನಿಕರು ಬೆಂಕಿಯನ್ನು ಕಂಡ ಕೊಡಲೇ ಪಲಾಯನಗೈಬಾರದು, ಓಡಿ ಹೋಗದೇ , ಬೆಂಕಿಯ ಅನಾಹುತಗಳನ್ನು ಹೇಗೆ ತಡೆಯಬೇಕು ಎನ್ನುವ ಕುರಿತು ಪ್ರಾಯೋಗಿಕವಾಗಿ ಪ್ರದರ್ಶನ ಮಾಡಿ ವಿದ್ಯಾರ್ಥಿಗಳಿಗೆ ತೋರಿಸಿದರು,

ನಗರ ಪಟ್ಟಣ, ಗ್ರಾಮಾಂತರ ಭಾಗದಲ್ಲಿ ಭತ್ತದ ಹುಲ್ಲಿನ ಭಣವೇ, ಪೆಟ್ರೋಲ್. ಡೀಸೆಲ್‌ಗಳಿಂದ ಆಗುವ ಅನಾಹುತಗಳು, ನಿರಂತರವಾ ವಾಹನಗಳು ಚಲಾಯಿಸುವುದರಿಂದ ವಾಹನದ ಎಂಜಿನ್‌ನಲ್ಲಿ ಆಗುವ ಅವಘಡಗಳ ಬಗ್ಗೆ, ಗ್ಯಾಸ್ ಸಿಲೆಂಡರ್‌ನಿಂದ ಸೋರಿಕೆಯಾಗುವ ಅನಿಲದ ಬಗ್ಗೆ, ಕಾರ್ಖಾನೆಗಳಲ್ಲಿ ಆಗುವ ಅನಾಹುತಗಳನ್ನು ತಡೆಯುವ ಬಗ್ಗೆ ವಿದ್ಯಾರ್ಥಿಗಳು ಯಾವ ಕ್ರಮಗಳನ್ನು ಅನುಸರಿಸಬೇಕು ಎನ್ನುವ ಕುರಿತು ಪ್ರದರ್ಶನ ನೀಡಿದರು.

ಮನೆಗಳಲ್ಲಿ ತಗಲುವ ಬೆಂಕಿಯನ್ನು ತಡೆಯುವ ಬಗ್ಗೆ ಮಕ್ಕಳಿಗೆ ತೋರಿಸಲಾಯಿತು. ಬೆಂಕಿ ಅವಘಡ ಸಂಭವಿಸಲು ಮನುಷ್ಯ ಹಾಗೂ ಪ್ರಕೃತಿ ಕಾರಣವಾಗಿದೆ. ಆದರೆ ಅದನ್ನು ತಡೆಗಟ್ಟುವಲ್ಲಿ ಎಲ್ಲರೂ ಕೈಜೋಡಿಸುವುದು ಅತಿ ಮುಖ್ಯವಾಗಿದೆ ಎಂದು ಅಗ್ನಿಶಾಮಕ ದಳದ ಸಿಬ್ಬಂದಿ ತಿಳಿ ಹೇಳಿದರು. ಒಟ್ಟು 4 ವರ್ಗಗಳ ಬೆಂಕಿ ಅವಘಡಗಳ ಬಗ್ಗೆ ಮಕ್ಕಳಿಗೆ ತಿಳಿಸಲಾಯಿತು. ಈ ಕಾರ್ಯಕ್ರಮ ತಾಲ್ಲೂಕಿನ ಎಲ್ಲಾ ಶಾಲೆಗಳ ಮಕ್ಕಳಿಗೆ ಹಂತ-ಹಂತವಾಗಿ ಪ್ರಯೋಗಿಕ ಪ್ರದರ್ಶನ ನೀಡಲಾಗುತ್ತಿದೆ ಎಂದು ಸಿಬ್ಬಂದಿ ತಿಳಿಸಿದರು.

ಈ ವೇಳೆ ಠಾಣಾಧಿಕಾರಿ ಶ್ರೀ ಆರ್‌ಎಲ್ ಪೂಜಾರಿ , ಮಂಜುನಾಥ ಹೊಸಗೇರಪ್ಪ,ಮಲ್ಲಿಕಾರ್ಜುನ ಎಂಕಪ್ಪ, ಸಂಗಪ್ಪ ವಿಶೇಷ ಉಪನ್ಯಾಸಕರು ಶ್ರೀ ಮಂಜುನಾಥ್, ಸೇರಿದಂತೆ ಮುಖ್ಯೋಪಾಧ್ಯಾಯ ಅಗ್ನಿ ಶಾಮಕ ದಳದ ಸಿಬ್ಬಂದಿ ಶಾಲೆಯ ಮುಖ್ಯಪಾಧ್ಯಾಯರು, ಶಿಕ್ಷಕ, ಶಿಕ್ಷಕಿಯರು ನೂರಾರು ಶಾಲಾ ಮಕ್ಕಳು ಇದ್ದರು.

ಡಿ.30ರಂದು ಶಿಕ್ಷಕರ ಪತ್ತಿನ ಸಹಕಾರ ಸಂಘದ ಆಡಳಿತ ಮಂಡಳಿ ಚುನಾವಣೆಯ ಮತದಾನ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಾ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಮತ್ತು ಅನುದಾನಿತ ಶಾಲೆಗಳ ಅನುಮೋದಿತ ಶಿಕ್ಷಕರ ಪತ್ತಿನ ಸಹಕಾರ ಸಂಘದ ಆಡಳಿತ ಮಂಡಳಿ ಚುನಾವಣೆಯು ಡಿಸೆಂಬರ್ 30ರಂದು ತಾಲ್ಲೂಕಾ ಸಂಘದ ಕಛೇರಿಯಲ್ಲಿ ಮತದಾನ ನಡೆಯಲಿದೆ ಎಂದು ರಿಟರ್ನಿಂಗ್ ಅಧಿಕಾರಿ ದತ್ತಾತ್ರೇಯ ತಿಳಿಸಿದ್ದಾರೆ. ಪತ್ರಿಕಾ ಪ್ರಕಟಣೆ ಹೊರಡ

ರಷ್ಯಾದ 210 ಬಿಲಿಯನ್ ಯುರೊ ಆಸ್ತಿ ತಡೆಗೆ ಯುರೋಪ್ ನಿರ್ಧಾರ

ಕೈವ್: ಉಕ್ರೇನ್‌ನ ಮೇಲೆ ರಷ್ಯಾದ ಪೂರ್ಣ ಪ್ರಮಾಣದ ಆಕ್ರಮಣ ಪ್ರಾರಂಭವಾದಾಗಿನಿಂದ ಯುರೋಪಿಯನ್ ಒಕ್ಕೂಟದಲ್ಲಿ ಸ್ಥಗಿತಗೊಂಡಿರುವ 210 ಬಿಲಿಯನ್ ಯುರೋ ವರೆಗಿನ ರಷ್ಯಾದ ಆಸ್ತಿಗಳನ್ನು ಅನಿರ್ದಿಷ್ಟವಾಗಿ ತಡೆಡಿಯಲು ಯುರೋಪಿಯನ್ ಒಕ್ಕೂಟದ ಸರ್ಕಾರಗಳು ಒಪ್ಪಿಕೊಂಡಿವೆ.

ರಷ್ಯಾದ ಹೆಚ್ಚಿನ ಹಣ ಬೆಲ್ಜಿಯಂನ ಬ್ಯಾಂಕ್ ಯೂರೋಕ್ಲಿಯರ್ನಲ್ಲಿದೆ ಮುಂದಿನ ವಾರ ನಡೆಯಲಿರುವ ಯುರೋಪಿಯನ್ ಯೂನಿಯನ್ ಶೃಂಗಸಭೆಯಲ್ಲಿ ಯುರೋಪಿಯನ್ ನಾಯಕರು ಒಪ್ಪಂದ ಅಂತಿಮಗೊಳಿಸಲು ಮುಂದಾಗಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ. ಈ ನಡುವೆ ಉಕ್ರೇನ್ ತನ್ನ ಮಿಲಿಟರಿ ಮತ್ತು ಆರ್ಥಿಕತೆಗೆ ಹಣಕಾಸು ಒದಗಿಸಲು ಸಹಾಯ ಮಾಡಲು ಸಾಲಕ್ಕಾಗಿ ಹಣವನ್ನು ನೀಡುವಂತೆ ಯುರೋಪಿಯನ್ ಒಕ್ಕೂಟದ ನಾಯಕರಿಗರ ಮನವಿ ಮಾಡಿದ್ದಾರೆ. ರಷ್ಯಾದ ಪೂರ್ಣ ಪ್ರಮಾಣದ ಯುದ್ಧದ ಸುಮಾರು ನಾಲ್ಕು ವರ್ಷಗಳ ನಂತರ ಉಕ್ರೇನ್ ನಗದು ಕೊರತೆ ಎದುರಿಸುತ್ತಿದೆ ಮತ್ತು ಮುಂದಿನ ಎರಡು ವರ್ಷಗಳಲ್ಲಿ ಅಂದಾಜು 135.7 ಬಿಲಿಯನ್ ಪೌಂಡ್ ಅಗತ್ಯವಿದೆ ಎಂದು ಅಂದಾಜು ಮಾಡಲಾಗಿದೆ

ಯುರೋಪ್ ಅದರಲ್ಲಿ ಮೂರನೇ ಎರಡರಷ್ಟು ಒದಗಿಸುವ ಗುರಿಯನ್ನು ಹೊಂದಿದೆ, ಆದರೆ ರಷ್ಯಾದ ಅಧಿಕಾರಿಗಳು ಯುರೋಪಿಯನ್ ಒಕ್ಕೂಟ ಕಳ್ಳತನದ ಆರೋಪ ಮಾಡುತ್ತಾರೆ ಎಂದು ನೇರವಾಗಿ ಆರೋಪಿಸಿದ್ದಾರೆ. ಯುರೋಪಿಯನ್ ಒಕ್ಕೂಟದ ಸಾಲ ಯೋಜನೆಗೆ ಪ್ರತಿಕ್ರಿಯೆಯಾಗಿ, ರಷ್ಯಾದ ನ್ಯಾಯಾಲಯದಲ್ಲಿ ಬೆಲ್ಜಿಯಂ ಬ್ಯಾಂಕ್ ಯೂರೋಕ್ಲಿಯರ್ ರುದ್ಧ ಮೊಕದ್ದಮೆ ಹೂಡುವುದಾಗಿ ರಷ್ಯಾದ ಕೇಂದ್ರ ಬ್ಯಾಂಕ್ ತಿಳಿಸಿದೆ. ಫೆಬ್ರವರಿ 2022 ರಲ್ಲಿ ಉಕ್ರೇನ್ ಮೇಲೆ ಪೂರ್ಣ ಪ್ರಮಾಣದ ಆಕ್ರಮಣ ನಡೆದ ಕೆಲವೇ ದಿನಗಳಲ್ಲಿ ಯುರೋಪಿಯನ್ ಒಕ್ಕೂಟದ ರಷ್ಯಾದ ಆಸ್ತಿಗಳನ್ನು ಸ್ಥಗಿತಗೊಳಿಸಲಾತು ಮತ್ತು ಅದರಲ್ಲಿ 185 ಬಿಲಿಯನ್ ಪೌಂಡ್ ಮೊತ್ತ ಯುರೋಕ್ಲಿಯರ್ ಹೊಂದಿದೆ ಎಂದು ಸ್ಪಷ್ಟಪಡಿಸಲಾಗಿದೆ.

ಟ್ರಂಪ್ ವೀಸಾ ನೀತಿ ವಿರುದ್ಧ ಅಮೆರಿಕದಲ್ಲೇ ಭುಗಿಲೆದ್ದ ಆಕ್ರೋಶ

ಎಚ್-1ಬಿ ವೀಸಾ ಶುಲ್ಕ ಹೆಚ್ಚಳದಿಂದ ಅಮೆರಿಕನ್ನರಿಗೇ ನಷ್ಟ, 20 ರಾಜ್ಯಗಳಿಂದ ಲೀಗಲ್ ಫೈಟ್

ವಾಷಿಂಗ್ಟನ್: ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅನುಸರಿಸುತ್ತಿರುವ ವಲಸೆ ವಿರೋಧಿ ನೀತಿಗಳಿಂದಾಗಿ ಅಮೆರಿಕನ್ನರೇ ಬೇಸತ್ತಿದ್ದು, ಟ್ರಂಪ್ ಸರ್ಕಾರದ ಈ ನಿರ್ಣಯಗಳ ವಿರುದ್ಧ ಹೋರಾಟಕ್ಕಿಳಿದಿದ್ದಾರೆ. ಅದರಲ್ಲೂ ಪ್ರಮುಖವಾಗಿ ಎಚ್-1ಬಿ ವೀಸಾಗಳ ಮೇಲೆ ಟ್ರಂಪ್ ಹೆಚ್ಚಿಸಿರುವ 100,000 ಡಾಲರ್ ಶುಲ್ಕವನ್ನು ಪ್ರಶ್ನಿಸಿ ಕಾನೂನು ಸಮರ ಸಾರಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ರಾಜ್ಯಗಳು ಸೆಪ್ಟೆಂಬರ್‌ನಲ್ಲಿ ಟ್ರಂಪ್ ಆದೇಶದಿಂದಾಗಿ ಗೃಹ ಇಲಾಖೆ ಜಾರಿಗೆ ತಂದ ಈ ನೀತಿಯು, ಸೆ.21ರ ನಂತರ ಸಲ್ಲಿಸುವ ಎಲ್ಲಾ ಹೊಸ ಎಚ್-1ಬಿ ವೀಸಾ ಅರ್ಜಿಗಳಿಗೆ ಅನ್ವಯಿಸುತ್ತದೆ. ಈ ಮೊದಲು 1,000 ಡಾಲರ್‌ನಿಂದ 7,500 ಡಾಲರ್ ಇದ್ದ ಶುಲ್ಕವು ಈಗ 100,000 ಡಾಲರ್‌ಗೆ ಏರಿದೆ ಎಂದು ಹೇಳಿದ್ದಾರೆ.

ಕಾಂಗ್ರೇಸ್ ಅನುಮೋದನೆ ನೀಡಿದ್ದಕ್ಕಿಂತ ಹೆಚ್ಚಿನ ಮೊತ್ತವನ್ನು ವಿಧಿಸುವ ಮೂಲಕ ಟ್ರಂಪ್ ಆಡಳಿತವು ತನ್ನ ಅಧಿಕಾರವನ್ನು ಮೀರಿ ವರ್ತಿಸಿದೆ. ವೀಸಾ ಅರ್ಜಿಗಳ ಸಂಸ್ಕರಣಾ ವೆಚ್ಚಕ್ಕೆ ಸಂಬಂಧವಿಲ್ಲದ ಈ ಶುಲ್ಕವನ್ನು, ಕಡ್ಡಾಯ ಸೂಚನೆ ಮತ್ತು ಅಭಿಪ್ರಾಯ ಸಂಗ್ರಹಣೆಯ ನಿಯಮಗಳನ್ನು ಪಾಲಿಸದೆ ಜಾರಿಗೆ ತಂದಿರುವುದು ಆಡಳಿತಾತ್ಮಕ ಕಾರ್ಯವಿಧಾನ ಕಾಯ್ದೆಯನ್ನು ಉಲ್ಲಂಘಿಸುತ್ತದೆ ಎಂದು ಆರೋಪಿಸಿವೆ. ಎಚ್-1ಬಿ ವೀಸಾ ಶುಲ್ಕ ಹೆಚ್ಚಳದಿಂದಾಗಿ ಅಮೆರಿಕಾಗೆ ನಷ್ಟ ಈ ವೀಸಾ ನಿಯಮಗಳ ವಿರುದ್ಧ ಹೋರಾಟ ನಡೆಸುತ್ತಿರುವ ಕ್ಯಾಲಿಫೋರ್ನಿಯಾ ಅಟಾರ್ನಿ ಜನರಲ್ ರಾಬ್ ಬೋಂಟಾ ಟ್ರಂಪ್ ನ ಈ ಕ್ರಮವನ್ನು ಖಂಡಿಸಿದ್ದಾರೆ. ವಿಶ್ವದಾದ್ಯಂತ ನುರಿತ ಪ್ರತಿಭೆಗಳು ನಮ್ಮ ಉದ್ಯೋಗಿಗಳಿಗೆ ಸೇರುವುದರಿಂದ ನಮ್ಮ ರಾಜ್ಯವು ಮುಂದುವರಿಯುತ್ತದೆ ಎಂದು ಕ್ಯಾಲಿಫೋರ್ನಿಯಾಕ್ಕೆ ತಿಳಿದಿದೆ. ಆದರೆ, ಈ ಹೊಸ ಶುಲ್ಕವು ಸಾರ್ವಜನಿಕ ಉದ್ಯೋಗಿಗಳಿಗೆ ಅಕ್ರಮ ಹಣಕಾಸು ಹೊರೆಯನ್ನು ಉಂಟುಮಾಡುತ್ತದೆ ಮತ್ತು ಈಗಾಗಲೇ ಇರುವ ಕಾರ್ಮಿಕರ ಕೊರತೆಯನ್ನು ಇನ್ನಷ್ಟು ಹದಗೆಡಿಸುತ್ತದೆ ಎಂದು ಎಚ್ಚರಿಸಿದ್ದಾರೆ.

ಅಲ್ಲದೆ, ಟ್ರಂಪ್ ಸರ್ಕಾರದ ಈ ಕ್ರಮವು ಎಚ್-1ಬಿ ವೀಸಾ ಕಾರ್ಯಕ್ರಮದ ಮೂಲ ಉದ್ದೇಶದ ವಿರುದ್ಧವಾಗಿದೆ. ಎಚ್-1ಬಿ ವೀಸಾ ಕಾರ್ಯಕ್ರಮ ಅಮೆರಿಕಾದ ಉದ್ಯೋಗದಾತರಿಗೆ ಕನಿಷ್ಠ ಪದವಿ ಶಿಕ್ಷಣದ ಅಗತ್ಯವಿರುವ ವಿಶೇಷ ಉದ್ಯೋಗಗಳಲ್ಲಿ ಹೆಚ್ಚಿನ ಕೌಶಲ್ಯ ಹೊಂದಿರುವ ವಿದೇಶಿ ಕಾರ್ಮಿಕರನ್ನು ನೇಮಿಸಿಕೊಳ್ಳಲು ಅವಕಾಶ ನೀಡುತ್ತದೆ. ಇದರಲ್ಲಿ ಹೆಚ್ಚಿನವರು ವೈದ್ಯರು, ದಾದಿಯರು, ಸಂಶೋಧಕರು, ಶಿಕ್ಷಕರು ಮತ್ತು ಇಂಜಿನಿಯರ್‌ಗಳು ಸೇರಿದ್ದಾರೆ. ಆದರೆ ಈ ಕ್ರಮದಿಂದಾಗಿ ಅಮೆರಿಕನ್ನರಿಗೆ ನಷ್ಟ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕ್ಯಾಲಿಫೋರ್ನಿಯಾ ನೇತೃತ್ವದ ಈ ಹೋರಾಟದಲ್ಲಿ ನ್ಯೂಯಾರ್ಕ್, ಇಲಿನಾಯ್ಸ್, ವಾಷಿಂಗ್ಟನ್ ಮತ್ತು ಮ್ಯಾಸಚೂಸೆಟ್ಸ್‌ಗಳಂತಹ ಅಮೆರಿಕಾದ ಪ್ರಮುಖ ರಾಜ್ಯಗಳು ಸೇರಿವೆ. ಟ್ರಂಪ್ ಆಡಳಿತದ ಈ ನೀತಿಯು ಕಾನೂನು ಬಾಹಿರವೆಂದು ಘೋಷಿಸಿ, ಇದಕ್ಕೆ ತಡೆಹಿಡಿಯುವಂತೆ ಕೋರಿ ಕೋರ್ಟ್ ಮೆಟ್ಟಿಲೇರಿದ್ದಾರೆ.

ಇನ್ನು, ಅರ್ಜಿಯಲ್ಲಿ ಈ ವೀಸಾ ನಿಯಮಗಳಿಂದಾಗಿ ಅಮೆರಿಕಾದಲ್ಲಿ ಈಗಾಗಲೇ ಇರುವ ಕಾರ್ಮಿಕರ ಕೊರತೆಯನ್ನು ಹೆಚ್ಚಳ ಮಾಡುತ್ತಿದೆ. 2024-25ರ ಶೈಕ್ಷಣಿಕ ವರ್ಷದಲ್ಲಿ, ಸುಮಾರು ಶೇಕಡಾ 75ರಷ್ಟು ಅಮೆರಿಕನ್ ಶಾಲಾ ಜಿಲ್ಲೆಗಳು ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ತೊಂದರೆ ಎದುರಿಸಿವೆ. ವಿಶೇಷ ಶಿಕ್ಷಣ, ವಿಜ್ಞಾನ ಮತ್ತು ದ್ವಿಭಾಷಾ ಶಿಕ್ಷಣದಲ್ಲಿ ಈ ಸಮಸ್ಯೆ ಹೆಚ್ಚು ಕಂಡುಬಂದಿದೆ. ಶಿಕ್ಷಕರು ಎಚ್-1ಬಿ ವೀಸಾಗಳನ್ನು ಬಳಸುವ ಪ್ರಮುಖ ವೃತ್ತಿಪರರಲ್ಲಿ ಒಬ್ಬರಾಗಿದ್ದಾರೆ. ದೇಶಾದ್ಯಂತ ಲಕ್ಷಾಂತರ ಶಿಕ್ಷಕರು ಈ ವೀಸಾಗಳ ಮೂಲಕ ಕೆಲಸ ಮಾಡುತ್ತಿದ್ದಾರೆ ಎಂದು ತಿಳಿಸಿದ್ದಾರೆ.

- ಎಚ್-1ಬಿ ವೀಸಾ ಶುಲ್ಕದ ವಿರುದ್ಧ ಅಮೆರಿಕಾದ 20 ರಾಜ್ಯಗಳಲ್ಲಿ ಭುಗಿಲೆದ್ದ ಆಕ್ರೋಶ, ಟ್ರಂಪ್ ಆಡಳಿತದ ವಿರುದ್ಧ ಕಾನೂನು ಸಮರ
- ಎಚ್-1ಬಿ ವೀಸಾ ಶುಲ್ಕ ಹೆಚ್ಚಳ ಕಾನೂನುಬಾಹಿರವಾಗಿದ್ದು, ಇದರಿಂದ ಅಮೆರಿಕನ್ನರಿಗೆ ನಷ್ಟವಾಗುತ್ತಿದೆ ಎಂದು ಆರೋಪ
- ಹೋರಾಟಗಾರರ ಮಾತಿಗೆ ಬೆಲೆ ಇಲ್ಲ ಎಂಬಂತೆ ನಾವು ಮಾಡಿದ್ದೇ ಸರಿ ಎಂದು ಕ್ರಮವನ್ನು ಸಮರ್ಥಿಸಿಕೊಂಡ ಶ್ವೇತಭವನ

ಟ್ರಂಪ್ ವೀಸಾ ನಿಯಮ ಬಗ್ಗೆ ಅಮೆರಿಕರನ್ನರೇ ವಿರೋಧ

ಕ್ಯಾಲಿಫೋರ್ನಿಯಾ ನೇತೃತ್ವದಲ್ಲಿ ಯುಎಸ್ ನ 20 ರಾಜ್ಯಗಳು ಟ್ರಂಪ್ ವಲಸೆ ನೀತಿಯನ್ನು ವಿರೋಧಿಸಿ, ಟ್ರಂಪ್ ಆಡಳಿತವು ಎಚ್-1ಬಿ ವೀಸಾಗಳ ಮೇಲೆ ವಿಧಿಸಿರುವ 100,000 ಡಾಲರ್ ಶುಲ್ಕದ ವಿರುದ್ಧ ಕಾನೂನು ಮೊಕದ್ದಮೆ ಹೂಡಿವೆ. ಈ ಶುಲ್ಕ ಅಕ್ರಮವಾಗಿದ್ದು, ಆರೋಗ್ಯ ಮತ್ತು ಶಿಕ್ಷಣದಂತಹ ಅತ್ಯಗತ್ಯ ಸಾರ್ವಜನಿಕ ಸೇವೆಗಳಿಗೆ ಅಡ್ಡಿಯಾಗಲಿದೆ ಎಂದು ರಾಜ್ಯಗಳು ವಾದಿಸಿವೆ.

ನಾವೇ ಸರಿ ಎಂದು ಶ್ವೇತಭವನ ಮೊಂಡು ವಾದ

ಆದರೆ ಅಮೆರಿಕಾದಲ್ಲಿ ಕಾರ್ಮಿಕರ ಕೊರತೆ ಹೆಚ್ಚಳವಾಗುತ್ತಿದೆ ಎಂದು ಹೇಳುತ್ತಿದ್ದರೂ ಸಹ ಟ್ರಂಪ್ ಸರ್ಕಾರ ಮಾತ್ರ ಹೋರಾಟಗಾರರ ಮಾತಿಗೆ ಕಿಮ್ಮತ್ತಿಲ್ಲ ಎಂಬಂತೆ ಎಚ್-1ಬಿ ವೀಸಾ ಶುಲ್ಕ ಹೆಚ್ಚಳ ಕ್ರಮವನ್ನು ಸಮರ್ಥಿಸಿಕೊಂಡಿದ್ದಾರೆ. ಈ ಕ್ರಮವು ಕಾನೂನು ಬದ್ದವಾಗಿದ್ದು, ಅಮೆರಿಕಾದ ಕಾರ್ಮಿಕರಿಗೆ ಆದ್ಯತೆ ನೀಡಲು ಮತ್ತು ಎಚ್-1ಬಿವ್ಯವಸ್ಥೆಯನ್ನು ಸುಧಾರಿಸಲು ಇದು ಒಂದು ಪ್ರಯತ್ನವಾಗಿದ್ದು, ಈ ನೀತಿಯು ವೀಸಾ ಕಾರ್ಯಕ್ರಮದ ದುರುಪಯೋಗ ತಡೆಯುತ್ತದೆ ಮತ್ತು ದೇಶೀಯ ವೇತನಗಳನ್ನು ರಕ್ಷಿಸುತ್ತದೆ ಶ್ವೇತಭವನದ ವಕ್ತಾರರು ಹೇಳಿದ್ದಾರೆ.

ಮಿನಿ ನ್ಯೂಸ್

ಮೆಸ್ಸಿ ಕಾರ್ಯಕ್ರಮದಲ್ಲಿ ದಾಂಧಲೆ ಮಮತಾ ಬ್ಯಾನರ್ಜಿ ಕ್ಷಮೆಯಾಚನೆ

ಕೋಲ್ಕತ್ತಾ: ಇಲ್ಲಿನ ಸಾಲ್ಟ್ ಲೇಕ್ ಕ್ರೀಡಾಂಗಣದಲ್ಲಿ ನಡೆದ ಮೆಸ್ಸಿ ಕಾರ್ಯಕ್ರಮದಲ್ಲಿ ಉಂಟಾದ ಅವ್ಯವಸ್ಥೆಗೆ ಮಮತಾ ಬ್ಯಾನರ್ಜಿ ಸಾರ್ವಜನಿಕವಾಗಿ ಕ್ಷಮೆಯಾಚಿಸಿದ್ದಾರೆ. ಕಾರ್ಯಕ್ರಮದಲ್ಲಿನ ನಿರ್ವಹಣೆಯಲ್ಲಿನ ತೊಂದರೆಯಿಂದಾಗಿ ಆಘಾತಕ್ಕೊಳಗಾಗಿದ್ದೇನೆ. ಈ ದುರದೃಷ್ಟಕರ ಘಟನೆಗಾಗಿ ಲಿಯೋನೆಲ್ ಮೆಸ್ಸಿ ಮತ್ತು ಎಲ್ಲಾ ಕ್ರೀಡಾ ಪ್ರೇಮಿಗಳು, ಅವರ ಅಭಿಮಾನಿಗಳಿಗೆ ನಾನು ಕ್ಷಮೆಯಾಚಿಸುತ್ತೇನೆ. ಈ ಘಟನೆಗೆ ಕಾರಣದ ತನಿಖೆ ಮಾಡಲು ತನಿಖಾ ಸಮಿತಿ ರಚಿಸಲಾಗುವುದು. ಮಾಜಿ ನ್ಯಾಯಾಧೀಶರ ನೇತೃತ್ವದ ಮತ್ತು ಉನ್ನತ ಅಧಿಕಾರಿಗಳನ್ನು ಒಳಗೊಂಡ ಸಮಿತಿಯು ಈ ಘಟನೆಯ ಬಗ್ಗೆ ವಿವರವಾದ ತನಿಖೆ ನಡೆಸಲಿದೆ ಎಂದು ತಿಳಿಸಿದ್ದಾರೆ. ನಿವೃತ್ತ ನ್ಯಾಯಮೂರ್ತಿ ಆಶಿಮ್ ಕುಮಾರ್ ರೇ ಅವರ ನೇತೃತ್ವದಲ್ಲಿ ಸಮಿತಿ ರಚಿಸಲಾಗುತ್ತದೆ. ಭವಿಷ್ಯದಲ್ಲಿ ಇಂತಹ ಘಟನೆಗಳನ್ನು ತಡೆಗಟ್ಟಲು ಕ್ರಮಗಳನ್ನು ಶಿಫಾರಸುಗಳನ್ನು ಸಮಿತಿ ಸೂಚಿಸಲಿದೆ ಎಂದು ಅವರು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಸೆಕ್ಯೂರಿಟಿ ಗಾರ್ಡ್ ಮೇಲೆ ನಾಯಿ ದಾಳಿ

ಮುಂಬೈ: ಸೆಕ್ಯೂರಿಟಿ ಗಾರ್ಡ್ ಮೇಲೆ ನಾಯಿಯೊಂದು ಡೆಡ್ಲಿ ಅಟ್ಯಾಕ್ ಮಾಡಿರುವ ಘಟನೆ ಮುಂಬೈನಲ್ಲಿ ನಡೆದಿದೆ. ದಾಳಿಯ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಮುಂಬೈನ ಅಪಾರ್ಟ್ಮೆಂಟ್‌ವೊಂದರ ಬಳಿ ಈ ಘಟನೆ ನಡೆದಿದೆ. ದಾಳಿಗೊಳಗಾದ ಸೆಕ್ಯೂರಿಟಿ ಗಾರ್ಡ್ ಸದ್ಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಎರಡು ನಾಯಿಗಳು ಅಪಾರ್ಟ್ಮೆಂಟ್ ಮುಂದೆ ಓಡಾಡುತ್ತಿದ್ದವು. ಆರಂಭದಲ್ಲಿ ಸೆಕ್ಯೂರಿಟಿ ಗಾರ್ಡ್ ಅಕ್ಕಪಕ್ಕ ಓಡಾಡಿದಾಗಲೂ ನಾಯಿ ಸುಮ್ಮನಿತ್ತು. ಆದರೆ ಎರಡನೇ ಬಾರಿ ಸೆಕ್ಯೂರಿಟಿ ಗಾರ್ಡ್ ಪಕ್ಕದಲ್ಲಿ ಓಡಾಡುತ್ತಿರುವಾಗ ಏಕಾಏಕಿ ಎಗರಿ ದಾಳಿ ನಡೆಸಿದೆ. ತೋಳಿಗೆ ಕಚ್ಚಿದ್ದು, ಕೂಡಲೇ ಸೆಕ್ಯೂರಿಟಿ ಗಾರ್ಡ್ ಬಿಡಿಸಿಕೊಂಡಿದ್ದಾರೆ. ಪಕ್ಕದಲ್ಲಿದ್ದ ವ್ಯಕ್ತಿಯೊಬ್ಬ ನಾಯಿಯನ್ನು ಕಟ್ಟಿಗೆಯಿಂದ ಹೊಡೆದು ಓಡಿಸಿದ್ದಾರೆ. ಈ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಲ್ಯಾಂಡಿಗೆ ವೇಳೆ ಇಂಡಿಗೋ ವಿಮಾನದ ಬಾಲ ರನ್‌ವೇಗೆ ಡಿಕ್ಕಿ: ತಪ್ಪಿದ ದೊಡ್ಡ ಅನಾಹುತ

ರಾಂಚಿ: ರಾಂಚಿ ವಿಮಾನ ನಿಲ್ದಾಣದಲ್ಲಿ ಲ್ಯಾಂಡಿಗ್ ವೇಳೆ ಇಂಡಿಗೋ ವಿಮಾನದ ಬಾಲ ರನ್‌ವೇಗೆ ಡಿಕ್ಕಿ ಹೊಡೆದ ಘಟನೆ ನಡೆದಿದೆ ಎಂದು ಅಧಿಕಾರಿಗಳು ಶನಿವಾರ ತಿಳಿಸಿದ್ದಾರೆ. ರಾತ್ರಿ 7.30ರ ಸುಮಾರಿಗೆ ಸುಮಾರು 70 ಪ್ರಯಾಣಿಕರಿದ್ದ ಭುವನೇಶ್ವರ-ರಾಂಚಿ ಇಂಡಿಗೋ ವಿಮಾನ ಲ್ಯಾಂಡಿಗ್ ವೇಳೆ ಈ ಘಟನೆ ಸಂಭವಿಸಿದೆ ಎಂದು ಅವರು ಹೇಳಿದ್ದಾರೆ. ವಿಮಾನದ ಬಾಲವು ಲ್ಯಾಂಡಿಂಗ್ ಸಮಯದಲ್ಲಿ ರನ್‌ವೇಗೆ ಸ್ಪರ್ಶಿಸಿತು. ಪ್ರಯಾಣಿಕರು ಹಠಾತ್ ಕಂಪನ ಅನುಭವಿಸಿದರು. ಆದಾಗ್ಯೂ, ಅವರೆಲ್ಲರೂ ಸುರಕ್ಷಿತ ಮತ್ತು ಯಾವುದೇ ಹಾನಿಯಿಲ್ಲದೆ ಸುರಕ್ಷಿತವಾಗಿ ಇಳಿದಿದ್ದಾರೆ ಎಂದು ರಾಂಚಿ ವಿಮಾನ ನಿಲ್ದಾಣದ ನಿರ್ದೇಶಕ ವಿನೋದ್ ಕುಮಾರ್ ಅವರು ಪಿಟಿಐಗೆ ತಿಳಿಸಿದ್ದಾರೆ.

ಈ ಘಟನೆಯ ನಂತರ ವಿಮಾನವು ತಾಂತ್ರಿಕವಾಗಿ ಟೇಕ್‌ಆಫ್‌ಗೆ ಅನರ್ಹವಾಗಿದೆ ಎಂದು ಕಂಡುಬಂದ ನಂತರ ಅದನ್ನು ಸ್ಥಗಿತಗೊಳಿಸಲಾಯಿತು ಎಂದು ಅವರು ಹೇಳಿದ್ದಾರೆ. ರಾಂಚಿಯಿಂದ ಭುವನೇಶ್ವರಕ್ಕೆ ವಿಮಾನದ ಮುಂದಿನ ನಿರ್ಗಮನವನ್ನು ರದ್ದುಗೊಳಿಸಲಾಯಿತು. ಕೆಲವು ಪ್ರಯಾಣಿಕರು ತಮ್ಮ ಪ್ರಯಾಣವನ್ನು ರದ್ದುಗೊಳಿಸಿದರು. ಆದರೆ ಕೆಲವರು ತಮ್ಮ ಪ್ರಯಾಣವನ್ನು ಮರು ನಿಗದಿಪಡಿಸಿದರು. ಕೆಲವು ಪ್ರಯಾಣಿಕರನ್ನು ರಸ್ತೆ ಮೂಲಕ ಭುವನೇಶ್ವರಕ್ಕೆ ಕಳುಹಿಸಲಾಯಿತು ಎಂದು ಅವರು ತಿಳಿಸಿದ್ದಾರೆ.

ಮೇಕೆದಾಟು ಅಣೆಕಟ್ಟು ಯೋಜನೆ ಕರ್ನಾಟಕದ ಪ್ರಮುಖ ಗುರಿ: ಪಳನಿಸ್ವಾಮಿ

ಚೆನ್ನೈ: ಮೇಕೆದಾಟು ಅಣೆಕಟ್ಟು ಯೋಜನೆಯನ್ನು ಕಾರ್ಯಗತಗೊಳಿಸುವ ಮೂಲಕ ತಮಿಳುನಾಡನ್ನು ಮರುಭೂಮಿಯನ್ನಾಗಿ ಪರಿವರ್ತಿಸುವುದು ಕರ್ನಾಟಕದ ಕಾಂಗ್ರೇಸ್ ಸರ್ಕಾರದ ಏಕೈಕ ಗುರಿಯಾಗಿದೆ ಎಂದು ಎಐಎಡಿಎಂಕೆ ಪ್ರಧಾನ ಕಾರ್ಯದರ್ಶಿ ಎಡಪ್ಪಾಡಿ ಕೆ ಪಳನಿಸ್ವಾಮಿ ಹೇಳಿದ್ದಾರೆ. ಕರ್ನಾಟಕ ಸರ್ಕಾರವು ತಮಿಳುನಾಡಿಗೆ ವ್ಯತಿರಿಕ್ತ ಪರಿಣಾಮಗಳನ್ನು ಕಡೆಗಣಿಸಿ ಮೇಕೆದಾಟುನಲ್ಲಿ ಸಮತೋಲನ ಜಲಾಶಯವನ್ನು ನಿರ್ಮಿಸುವ ತನ್ನ ಯೋಜನೆಯೊಂದಿಗೆ ಮುಂದುವರಿಯುತ್ತಿದೆ. ಈ ದುರದೃಷ್ಟಕರ ಪರಿಸ್ಥಿತಿಗೆ ರಾಜ್ಯದಲ್ಲಿನ ಆಡಳಿತಾರೂಢ ಡಿಎಂಕೆ ಸರ್ಕಾರವೇ ಕಾರಣ ಎಂದು ದೂರಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಮುಖ್ಯಮಂತ್ರಿ ಎಂ ಕೆ ಸ್ಟಾಲಿನ್ ನೇತೃತ್ವದ ಡಿಎಂಕೆ ಸರ್ಕಾರ ತಮಿಳುನಾಡು ಜನರ ಜೀವನೋಪಾಯದ ವಿಷಯವಾಗಿ ಕಾವೇರಿ ನಿರ್ವಹಣಾ ಪ್ರಾಧಿಕಾರ ಮತ್ತು ಸುಪ್ರೀಂ ನಲ್ಲಿ ತಮಿಳುನಾಡಿನ ಪರವಾಗಿ ಬಲವಾದ ವಾದ ಮಂಡಿಸಲಿಲ್ಲ. ಅರೆಮನಸ್ಸಿನಿಂದ ನಡೆಸಿತು ಎಂದು ಆರೋಪಿಸಿದ್ದಾರೆ. ಸುಪ್ರೀಂ ಕೋರ್ಟ್ ಆದೇಶದ ನಂತರ ಕರ್ನಾಟಕ ಸರ್ಕಾರ ಮೇಕೆದಾಟು ಅಣೆಕಟ್ಟು ಯೋಜನೆ ಕಾಮಗಾರಿ ತ್ವರಿತಗೊಳಿಸಲು ತಜ್ಞರ ತಂಡವನ್ನು ರಚಿಸಿರುವ ಹಿನ್ನೆಲೆಯಲ್ಲಿ ಪಳನಿಸ್ವಾಮಿ ಈ ಹೇಳಿಕೆ ನೀಡಿದ್ದಾರೆ.

ಕೆನಡಾ ಟ್ರಕ್ ಡ್ರೈವರ್ ಗುಂಪು ಶೂಟೌಟ್ ಪ್ರಕರಣದಲ್ಲಿ 3 ಭಾರತೀಯ ಬಂಧನ

ಟೊರಾಂಟೊ: ಕೆನಡಾದಲ್ಲಿ ಅಕ್ಟೋಬರ್ ತಿಂಗಳಿನಲ್ಲಿ ಎರಡು ಗುಂಪುಗಳ ಮಧ್ಯೆ ನಡೆದ ಗುಂಡಿನ ಚಕಮಕಿಗೆ ಸಂಬಂಧಿಸಿದಂತೆ ಮೂವರು ಭಾರತೀಯ ಮೂಲದ ಟ್ರಕ್ ಚಾಲಕರನ್ನು ಪೊಲೀಸರು ಬಂಧಿಸಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಅಧಿಕಾರಿಗಳು ಅಕ್ಟೋಬರ್ 7 ರಂದು ರಾತ್ರಿ 10:45 ರ ಸುಮಾರಿಗೆ ಬ್ರಾಂಪ್ಟನ್‌ನ ಮ್ಯಾಕ್‌ವೀನ್ ಡ್ರೈವ್ ಮತ್ತು ಕ್ಯಾಸಲ್‌ಮೋರ್ ರೋಡ್ ಪ್ರದೇಶದ ಪಾರ್ಕಿಂಗ್ ಸ್ಥಳದಲ್ಲಿ ಎರಡು ಟವ್ -ಟ್ರಕ್ ಗುಂಪುಗಳ ನಡುವೆ ಗುಂಡಿನ ಚಕಮಕಿ ನಡೆದಿದ್ದು, ಇದರಲ್ಲಿ ಒಬ್ಬನಿಗೆ ಗಾಯವಾಗಿದೆ. ಪ್ರಕರಣಕ್ಕೆ ಸಂಬಂಧಿಸಿದ 3 ಶಂಕಿತರನ್ನು ಈಗಾಗಲೇ ಬಂಧಿಸಿದ್ದು, ನಾಲ್ಕನೇ ಶಂಕಿತನಿಗಾಗಿ ತನಿಖೆ ನಡೆಯುತ್ತಿದೆ ಎಂದು ತಿಳಿಸಿದ್ದಾರೆ.

ಘಟನೆಯ ವಿಡಿಯೋ ರಿಲೀಸ್ ಮಾಡಿದ ಪೊಲೀಸರು: ಈ ಘಟನೆ ದೃಶ್ಯಾವಳಿಗಳನ್ನು ಹಂಚಿಕೊಂಡಿರುವ ಪೀಲ್ ಪ್ರಾದೇಶಿಕ ಪೊಲೀಸರು ಹೇಳಿಕೆ ಬಿಡುಗಡೆ ಮಾಡಿದ್ದಾರೆ. ಇದರ ಪ್ರಕ

ಗಿಲ್ಲಿ ಜೊತೆ ಒಂದು ಸಿನಿಮಾ ಮಾಡ್ತೀನಿ

ಬಿಗ್ ಬಾಸ್ ಸ್ಪರ್ಧಿ ಗಿಲ್ಲಿ ನಟರ ಜನಪ್ರಿಯತೆ ಹೆಚ್ಚಿದೆ. ಶಿವಣ್ಣನ ಮೆಚ್ಚುಗೆ ಹಾಗೂ ಸಿನಿಮಾ ಆಫರ್ ಪಡೆದ ಗಿಲ್ಲಿ, 'ಡೆವಿಲ್' ಚಿತ್ರದಲ್ಲಿ ಗಮನ ಸೆಳೆದಿದ್ದಾರೆ. ರಿಯಾಲಿಟಿ ಶೋಗಳಿಂದ ಸ್ಯಾಂಡಲ್‌ವುಡ್‌ಗೆ ಕಾಲಿಟ್ಟ ಇವರಿಗೆ ಈಗ ಹೆಚ್ಚಿನ ಸಿನಿಮಾ ಆಫರ್‌ಗಳು ಬರುತ್ತಿವೆ. ಗಿಲ್ಲಿಯ ವಿಶಿಷ್ಟ ಕಾಮಿಡಿ ಟೈಮಿಂಗ್ ಜನರನ್ನು ಸೆಳೆದಿದೆ, ಅವರ ವೃತ್ತಿಜೀವನಕ್ಕೆ ಹೊಸ ತಿರುವು ನೀಡುತ್ತಿದೆ. ಬಿಗ್ ಬಾಸ್ ಮನೆಯಲ್ಲಿರುವ ಗಿಲ್ಲಿ ನಟ ಅವರ ಖ್ಯಾತಿ ಬಗ್ಗೆ ಹೊಸದಾಗಿ ಹೇಳಬೇಕಿಲ್ಲ, ಸಾಕಷ್ಟು ಜನಪ್ರಿಯತೆ ಪಡೆದಿದ್ದಾರೆ. 'ಡೆವಿಲ್' ಸಿನಿಮಾದಲ್ಲಿ ಅವರು ಪಾತ್ರ ಒಂದರಲ್ಲಿ ಕಾಣಿಸಿಕೊಂಡಿದ್ದರು. ಗಿಲ್ಲಿಗೆ ಶಿವರಾಜ್‌ಕುಮಾರ್ ಅವರನ್ನು ಕಂಡರೆ ತುಂಬಾನೇ ಅಭಿಮಾನ. ಗಿಲ್ಲಿ ಜೊತೆ ಸಿನಿಮಾ ಮಾಡೋದಾಗಿ ಶಿವರಾಜ್‌ಕುಮಾರ್ ಅವರು ಈ ಮೊದಲು ಹೇಳಿದ್ದರು. ಆ ಸಂದರ್ಭದ ವಿಡಿಯೋ ಈಗ ವೈರಲ್ ಮಾಡಲಾಗುತ್ತಿದೆ.

ಗಿಲ್ಲಿ ಅಭಿಮಾನಿಗಳು ಇದನ್ನು ವೈರಲ್ ಮಾಡಿದ್ದನ್ನು ಕಾಣಬಹುದು. ಗಿಲ್ಲಿ ನಟ ಅವರು ಹಲವು ರಿಯಾಲಿಟಿ ಶೋಗಳಲ್ಲಿ ಸ್ಪರ್ಧಿಸಿದವರು. ಅವರು ಈ ಮೊದಲು 'ಡ್ಯಾನ್ಸ್ ಕರ್ನಾಟಕ ಡ್ಯಾನ್ಸರ್'ನಲ್ಲಿ ನಾನ್ ಡ್ಯಾನ್ಸರ್ ಆಗಿ ಕಾಣಿಸಿಕೊಂಡಿದ್ದರು. ಈ ಶೋಗೆ ಶಿವರಾಜ್‌ಕುಮಾರ್ ಅವರು ಜಡ್ಜ್ ಸ್ಥಾನದಲ್ಲಿ ಇದ್ದರು. ಶಿವರಾಜ್‌ಕುಮಾರ್ ಅವರಿಗೆ ಗಿಲ್ಲಿಯ ಕಾಮಿಡಿ ಇಷ್ಟ ಆಗಿತ್ತು. ಈ ವೇಳೆ ಶಿವಣ್ಣ ಅವರು ಹೇಳಿದ ಒಂದು ಮಾತು ಗಮನ ಸೆಳೆದಿತ್ತು ಶಿವರಾಜ್‌ಕುಮಾರ್ ಅವರು ಗಿಲ್ಲಿಯನ್ನು ಬಹುವಾಗಿ ಮೆಚ್ಚಿಕೊಂಡಿದ್ದರು. ಇದಕ್ಕೆ ಕಾರಣ ಅವರ ನಡೆದುಕೊಳ್ಳುತ್ತಿದ್ದ ರೀತಿ. ಕಾಮಿಡಿ ಟೈಮಿಂಗ್ ನೋಡಿ ಶಿವಣ್ಣ ಕಂಗಾಲಾಗಿದ್ದರು. ಆಗ ಅವರು ಒಂದು ಮಾತನ್ನು ಹೇಳಿದ್ದರು. 'ನಿಜವಾಗಲೂ ಇವರನ್ನು ಹಾಕಿಕೊಂಡು ಸಿನಿಮಾ ಮಾಡಬೇಕು. ಗಿಲ್ಲಿ ನೋಡಿದಾಗಲೆಲ್ಲ ತಮಿಳಿನ ಹಾಸ್ಯ ನಟ ಚಂದ್ರಬಾಬುನ ನೆನಪಾಗುತ್ತಾರೆ. ಅವರು ಅದ್ಭುತ ಕಾಮಿಡಿಯನ್. ಇವರನ್ನು ಹಾಕಿಕೊಂಡು ಒಂದು ಸಿನಿಮಾ ಮಾಡುತ್ತೇನೆ' ಎಂದು ಶಿವಣ್ಣ ಹೇಳಿದ್ದರು. ಆ ಬಳಿಕ ಅಲ್ಲಿಗೆ ಆಗಮಿಸಿದ್ದ ದಿನಕರ್ ತುಗುದೀಪ್ ಕೂಡ ಗಿಲ್ಲಿಯನ್ನು ಕಂಡು ಇಷ್ಟಪಟ್ಟಿದ್ದರು. ಅವರ ಡ್ಯಾನ್ಸ್ ಅಲ್ಲ ಬದಲಿಗೆ, ಡ್ಯಾನ್ಸ್ ಬಳಿಕ ಅವರು ಮಾತನಾಡುತ್ತಾ ಇದ್ದ ರೀತಿಗೆ. ಗಿಲ್ಲಿ ನಟ ಅವರಿಗೆ ಈಗಾಗಲೇ ಸಾಕಷ್ಟು ಸಿನಿಮಾ ಆಫರ್‌ಗಳು ಬರುತ್ತಿವೆ. ಈಗ ಬಿಗ್ ಬಾಸ್ ಅಲ್ಲಿ ಅವರ ಟೈಮಿಂಗ್ ಡೈಲಾಗ್ ಡೆಲಿವರಿ ಎಲ್ಲವೂ ಇಷ್ಟ ಆಗಿದೆ. ಹೀಗಾಗಿ, ಅವರಿಗೆ ಬರೋ ಆಫರ್ ಮತ್ತಷ್ಟು ಹೆಚ್ಚಬಹುದು. ಎಲ್ಲಕ್ಕಿಂತ ಮುಖ್ಯವಾಗಿ, ಡೆವಿಲ್ ಸಿನಿಮಾದಲ್ಲಿ ಅವರು ನಟಿಸಿದ್ದು, ಕಾಮಿಡಿ ಮೂಲಕ ಗಮನ ಸೆಳೆದಿದ್ದಾರೆ. ಇದು ಕೂಡ ಅವರ ವೃತ್ತಿ ಜೀವನಕ್ಕೆ ಸಹಕಾರಿ ಆಗಬಹುದು. ಡೆವಿಲ್ ಸಿನಿಮಾ ಡಿಸೆಂಬರ್ 11ರಂದು ರಿಲೀಸ್ ಆಯಿತು. ಈ ಸಿನಿಮಾದಲ್ಲಿ ದರ್ಶನ್ ಹಾಗೂ ಗಿಲ್ಲಿ ಮಧ್ಯೆ ನೇರವಾಗಿ ಯಾವುದೇ ಕಾಂಬಿನೇಷನ್ ಇಲ್ಲವಂತೆ.



ನಿಮ್ರತ್ ಕೌರ್ ಜೊತೆಗಿನ ವಿವಾಹೇತರ ಸಂಬಂಧ

ನಟ ಅಭಿಷೇಕ್ ಬಚ್ಚನ್ ತಮ್ಮ ವೈಯಕ್ತಿಕ ಜೀವನದ ಕಾರಣದಿಂದಾಗಿ ಆಗಾಗ್ಗೆ ಸುದ್ದಿಯಲ್ಲಿರುತ್ತಾರೆ. ಪತ್ನಿ ಐಶ್ವರ್ಯಾ ರೈ ಅವರೊಂದಿಗೆ ಅವರು ವಿಚ್ಛೇದನ ಪಡೆಯುತ್ತಾರೆ ಎನ್ನಲಾಗಿತ್ತು. ಈ ವೇಳೆ ಅವರ ಹೆಸರು ನಟಿ ನಿಮ್ರತ್ ಕೌರ್ ಜೊತೆ ಸಂಬಂಧ ಹೊಂದಿತ್ತು. ಇಬ್ಬರೂ 'ದಾಸವಿ' ಚಿತ್ರದಲ್ಲಿ ಒಟ್ಟಿಗೆ ಕೆಲಸ ಮಾಡಿದ್ದರು. ಅಭಿಷೇಕ್ ನಿಮ್ರತ್ ಜೊತೆ ವಿವಾಹೇತರ ಸಂಬಂಧ ಹೊಂದಿದ್ದಾರೆ ಎಂಬ ಬಲವಾದ ವದಂತಿಗಳು ಹಬ್ಬಿದ್ದವು. ಅವರು ಅಂತಿಮವಾಗಿ ಈ ವದಂತಿಗಳ ಬಗ್ಗೆ ಮೌನ ಮುರಿದಿದ್ದಾರೆ. ಇತ್ತೀಚಿನ ಸಂದರ್ಶನ ವೊಂದರಲ್ಲಿ, ಅವರು ವದಂತಿಗಳ ಬಗ್ಗೆ ಮಾತನಾಡಿದರು. ಈ ಬಾರಿ, ಅವರು ನಿಮ್ರತ್ ಅವರನ್ನು ನೇರವಾಗಿ ಹೆಸರಿಸಲಿಲ್ಲ,

ಮೌನ ಮುರಿದ ಅಭಿಷೇಕ್ ಬಚ್ಚನ್

ಆದರೆ ಅಂತಹ ಎಲ್ಲಾ ವದಂತಿಗಳು ಸಾಕಷ್ಟು ಸಮಸ್ಯೆ ತಂದಿತು ಎಂದಿದ್ದಾರೆ. 'ತಪ್ಪು ಅಥವಾ ಸುಳ್ಳು ಮಾಹಿತಿಯನ್ನು ಹರಡುತ್ತಿರುವ ವ್ಯಕ್ತಿಗೆ ಅದನ್ನು ಸ್ಪಷ್ಟಪಡಿಸುವ ಅಥವಾ ಸರಿಪಡಿಸುವ ಆಸಕ್ತಿ ಇರುವುದಿಲ್ಲ. ಮೊದಲು, ನನ್ನ ಬಗ್ಗೆ ಹೇಳಲಾದ ವಿಷಯಗಳು ನನ್ನ ಮೇಲೆ ಪರಿಣಾಮ ಬೀರಲಿಲ್ಲ ಆದರೆ ಇಂದು ನನಗೆ ಒಂದು ಕುಟುಂಬವಿದೆ. ಹೀಗಾಗಿ ಈ ಸುದ್ದಿಗಳು ತುಂಬಾ ಅಸಮಾಧಾನ ಉಂಟುಮಾಡುತ್ತದೆ. ನಾನು ಕೆಲವು ಸ್ಪಷ್ಟೀಕರಣಗಳನ್ನು ನೀಡಿದ್ದರೂ, ಜನರು ಅದನ್ನು ವಿರುದ್ಧ ರೀತಿಯಲ್ಲಿ ಅರ್ಥೈಸುತ್ತಾರೆ. ಏಕೆಂದರೆ ನಕಾರಾತ್ಮಕ ಸುದ್ದಿಗಳು ಮಾರಾಟವಾಗುತ್ತವೆ. ನೀವು ನನ್ನ ಸ್ಥಾನದಲ್ಲಿಲ್ಲ, ನೀವು ನನ್ನ ಜೀವನವನ್ನು ನಡೆಸುತ್ತಿಲ್ಲ, ನಾನು ಯಾರಿಗೆ ಜವಾಬ್ದಾರನಾಗಿರುತ್ತೇನೆಯೋ ಅವರಿಗೆ ನೀವು ಜವಾಬ್ದಾರರಲ್ಲ, ''ಎಂದು ಅವರು ಹೇಳಿದರು.

'ಇಂತಹ ನಕಾರಾತ್ಮಕತೆಯನ್ನು ಹರಡುವ ಜನರು, ಅವರು ತಮ್ಮ ಆತ್ಮಸಾಕ್ಷಿಯೊಂದಿಗೆ ಬದುಕಬೇಕು. ಅವರು ತಮ್ಮ ಆತ್ಮಸಾಕ್ಷಿಯೊಂದಿಗೆ ವರ್ತಿಸಬೇಕು ಮತ್ತು ತಮ್ಮ ಸೃಷ್ಟಿಕರ್ತನಿಗೆ ಉತ್ತರಿಸಬೇಕು. ನೋಡಿ..

ಬೆಂಗ್ಳೂರು ಪೊಲೀಸರಿಗೆ ದೂರು

ರಿಕ್ಕಿ ಕೇಜ್ ಮನೆಯಲ್ಲಿ ಕಳ್ಳತನ

ಸಂಗೀತ ನಿರ್ದೇಶಕ ರಿಕ್ಕಿ ಕೇಜ್ ಅವರ ಮನೆಯಲ್ಲಿ ಕಳ್ಳತನವಾಗಿದೆ. ಮನೆಯ ಸಂಪ್‌ನ ಮುಚ್ಚಳ ಕದ್ದಿದ್ದು, ಈ ಕುರಿತು ರಿಕ್ಕಿ ಅವರು ಎಕ್ಸ್ ಖಾತೆಯಲ್ಲಿ ಬೆಂಗಳೂರಿಗೆ ಪೊಲೀಸರಿಗೆ ಟ್ಯಾಗ್ ಮಾಡಿ ದೂರು ನೀಡಿದ್ದಾರೆ. ಸಂಪ್‌ನ ಮುಚ್ಚಳ ಕದಿಯುತ್ತಿರುವ ಸಿಸಿಟಿವಿ ದೃಶ್ಯಗಳನ್ನು ರಿಕ್ಕಿ ಕೇಜ್ ಅವರು ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಝೊಮ್ಯಾಟೋ ಡೆಲಿವರಿ ಬಾಯ್ ಮನೆಯ ಒಳಗೆ ಬಂದು ಕಳ್ಳತನ ಮಾಡಿದ್ದಾರೆ ಎಂದು ಅನುಮಾನ ವ್ಯಕ್ತಪಡಿಸಿದ್ದಾರೆ. ಡಿ.11ರಂದು ಸಂಜೆ 6 ಗಂಟೆಗೆ ಇಬ್ಬರು ಯುವಕರು ಬೈಕ್‌ನಲ್ಲಿ ಬಂದಿದ್ದು, ಆ ಪೈಕಿ ಓರ್ವ ಮನೆಯ ಗೇಟ್ ಒಳಬಂದಿದ್ದಾನೆ. ಕೂಡಲೇ ಸಂಪ್‌ನ ಮೇಲಿರುವ ಕಬ್ಬಿಣದ ಮುಚ್ಚಳವನ್ನು ಎತ್ತಿಕೊಂಡು, ಗೇಟ್‌ನ ಹೊರಗೆ ಹೋಗಿ ಬೈಕ್‌ನಲ್ಲಿ ಇಟ್ಟುಕೊಂಡು ಎಸ್ಕೇಪ್ ಆಗಿದ್ದಾರೆ. ಈ ವೇಳೆ ಬೈಕ್ ಮೇಲಿಂದ ಬ್ಯಾಗ್‌ವೊಂದು ಬಿದ್ದಿದ್ದು, ಕೆಂಪು ಬಣ್ಣದ ಫುಡ್ ಡೆಲಿವರಿಗೆ ಬಳಸುವಂತಿದೆ. ಈ ಇಬ್ಬರು ಮೊದಲು ಮನೆಯ ಬಳಿ ಬಂದು ಪರಿಶೀಲನೆ ಮಾಡಿ, ಬಳಿಕ ಕಳ್ಳತನಕ್ಕಿಳಿದಿದ್ದಾರೆ. ಎಕ್ಸ್‌ನಲ್ಲಿ ಘಟನೆಯ ವಿವರ, ಬೈಕ್‌ನ ನಂಬರ್ ಪ್ಲೇಟ್ ಹಾಗೂ ಮನೆಯೊಳಗೆ ಬಂದ ಕಳ್ಳನ ಫೋಟೋದ ಸ್ಕ್ರೀನ್‌ಶಾಟ್ ಕೂಡ ಹಂಚಿಕೊಂಡಿದ್ದು, ಈ ಸಂಬಂಧ ಬೆಂಗಳೂರು ಪೊಲೀಸರಿಗೆ ಟ್ಯಾಗ್ ಮಾಡಿ, ದೂರು ದಾಖಲಿಸಿದ್ದಾರೆ.

ಧುರಂಧರ್ ಹಾಡಿ ಹೊಗಳಿದ ಅಲ್ಲು

ಅಲ್ಲು ಅರ್ಜುನ್ ಅವರು ಇತ್ತೀಚೆಗೆ 'ಧುರಂಧರ್' ಚಿತ್ರವನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಈ ಸಿನಿಮಾ ಡಿಸೆಂಬರ್ 5ರಂದು ತೆರೆಕಂಡು ದೇಶಾದ್ಯಂತ 239 ಕೋಟಿ ರೂಪಾಯಿ ಗಳಿಸಿದೆ. ಅಲ್ಲು ಅರ್ಜುನ್, ರಣವೀರ್ ಸಿಂಗ್, ಅಕ್ಷಯ್ ಖನ್ನಾ ಸೇರಿದಂತೆ ಇಡೀ ತಾರಾಗಣ ಹಾಗೂ ನಿರ್ದೇಶಕ ಆದಿತ್ಯ ಧರ್ ಅವರ ಅದ್ಭುತ ಕೆಲಸವನ್ನು ಶ್ಲಾಘಿಸಿದ್ದಾರೆ. ಅಲ್ಲು ಅರ್ಜುನ್ ಅವರು ಟಾಲಿವುಡ್‌ನ ಸ್ಟಾರ್ ಹೀರೋ. ಅವರು ತಮ್ಮ ಸಿನಿಮಾಗಳ ಜೊತೆಗೆ ಉತ್ತಮವಾಗಿರುವ ಇತರ ಸಿನಿಮಾಗಳನ್ನು ಹೊಗಳುವ ಕೆಲಸ ಮಾಡುತ್ತಾರೆ. ಈಗ ಅವರು ದೇಶಾದ್ಯಂತ ಜನಪ್ರಿಯತೆ ಪಡೆದ 'ಧುರಂಧರ್' ಚಿತ್ರವನ್ನು ವೀಕ್ಷಿಸಿದ್ದಾರೆ ಮತ್ತು ಸಿನಿಮಾ ಹೇಗಿದೆ ಎಂಬುದನ್ನು ಹೇಳಿದ್ದಾರೆ. ಅವರು ಇಡೀ ಸಿನಿಮಾ ಹಾಗೂ ತಂಡವನ್ನು ಹೊಗಳಿದ್ದಾರೆ.

'ಧುರಂಧರ್' ಸಿನಿಮಾ ಡಿಸೆಂಬರ್ 5ರಂದು ರಿಲೀಸ್ ಆಯಿತು. ಈ ಚಿತ್ರ ಸಾಕಷ್ಟು ಮೆಚ್ಚುಗೆ ಪಡೆದಿದೆ. ಬಾಲಿವುಡ್ ಮಂದಿ ಸಿನಿಮಾನ ನೋಡಿ ಮೆಚ್ಚಿಕೊಳ್ಳುತ್ತಿದ್ದಾರೆ. ಈ ಚಿತ್ರದ ಬಗ್ಗೆ ಅನೇಕ ಹೀರೋಗಳ ಮೆಚ್ಚುಗೆ ಪಡೆಯುತ್ತಿದೆ. ಇದಕ್ಕೆ ಅಲ್ಲು ಅರ್ಜುನ್ ಅವರು ಕೂಡ ಹೊರತಾಗಿಲ್ಲ. ಅವರು ಚಿತ್ರವನ್ನು ಮೆಚ್ಚಿಕೊಂಡಿದ್ದಾರೆ. ಈ ಸಿನಿಮಾ 8 ದಿನಕ್ಕೆ 239 ಕೋಟಿ ರೂಪಾಯಿ ಗಳಿಕೆ ಮಾಡಿದೆ. 'ಧುರಂಧರ್' ಚಿತ್ರವನ್ನು ನೋಡಿದೆ. ಉತ್ತಮ ಅಭಿನಯ, ಅತ್ಯುತ್ತಮ ತಾಂತ್ರಿಕತೆ. ಅದ್ಭುತ ಮ್ಯೂಸಿಕ್‌ನಿಂದ ಕೂಡಿದ ಅದ್ಭುತ ಚಿತ್ರ. ನನ್ನ ಸಹೋದರ ರಣವೀರ್ ಸಿಂಗ್ ಅದ್ಭುತವಾಗಿ ನಟಿಸಿದ್ದಾರೆ.

239 ಕೋಟಿ ರೂಪಾಯಿ ಗಳಿಸಿದ ಚಿತ್ರ



ಕೀರ್ತಿ ಇಟ್ಟ ಗುರಿಗೆ ಫೋಟೋಗ್ರಾಫರ್ ಕಣ್ಣೇ ಹೋಯ್ತು..!

ನಟಿ ಕೀರ್ತಿ ಸುರೇಶ್ ಒಂದು ತಮಾಷೆಯ ವಿಡಿಯೋವನ್ನ ಇನ್‌ಸ್ಟಾಗ್ರಾಮ್‌ನಲ್ಲಿ ಹಂಚಿಕೊಂಡಿದ್ದಾರೆ. ಪ್ಲ್ಯಾಸ್ಟಿಕ್ ರಿವಾಲ್ವರ್ ಹಿಡಿದು ರೀಲ್ಸ್ ಮಾಡಲು ಹೋಗಿ ಎಡವಟ್ಟು ಮಾಡಿಕೊಂಡಿದ್ದಾರೆ. ಅದೇ ವಿಡಿಯೋವನ್ನೇ ಇನ್‌ಸ್ಟಾದಲ್ಲಿ ಶೇರ್ ಮಾಡಿದ್ದಾರೆ. ಆಟಿಕೆ ಗನ್‌ನಲ್ಲಿ ಡಮ್ಮಿ ಬುಲೆಟ್ ಇಟ್ಟು ಗೋಡೆಗೆ ಗುರಿ ಇಟ್ಟಿದ್ದಾರೆ. ದುರಾದೃಷ್ಟವಶಾತ್ ಅದು ರೀಲ್ಸ್ ಮಾಡುತ್ತಿದ್ದ ವಿಡಿಯೋಗ್ರಾಫರ್ ಕಣ್ಣಿಗೆ ತಲುಗಿದೆ. ಈ ವಿಚಾರವನ್ನ ಕೀರ್ತಿ ತಮಾಷೆಯಿಂದ ಬರೆದುಕೊಂಡಿದ್ದಾರೆ.

ರಿವಾಲ್ವರ್ ರೀಟಾ ಚಿತ್ರದ ಮೂಲಕ ಸೌಂಡ್ ಮಾಡ್ತಿರುವ ಕೀರ್ತಿ. ಸಿನಿಮಾಕ್ಕೆ ಸಂಬಂಧಪಟ್ಟ ರೀಲ್ಸ್ ಮಾಡಲು ಹೋಗಿ ಈ ಅವಾಂತರ ಮಾಡಿಕೊಂಡಿದ್ದಾರೆ. ನೋಡಲು ಫನ್ನಿಯಾಗಿದೆ. ಈ ವಿಡಿಯೋಗೆ ಕೀರ್ತಿ ''ನನ್ನ ಗೂಳಿ ಕಣ್‌ಗಳಿಂದ ಇಟ್ಟ ಗುರಿ ವಿಡಿಯೋಗ್ರಾಫರ್ ಕಣ್ಣನ್ನೇ ಹಿಟ್ ಮಾಡಿದೆ ಅಂತ ಬರೆದುಕೊಂಡಿದ್ದಾರೆ. ಇದು ಕೀರ್ತಿಗೆ ತಮಾಷೆಯಾದ್ರೆ ವಿಡಿಯೋಗ್ರಾಫರ್‌ಗೆ ಫಜೀತಿ ತಂದಿದೆ.

ಆಟಿಕೆ ಗನ್‌ನಲ್ಲಿ ಡಮ್ಮಿ ಬುಲೆಟ್

ಇಂಡಿಯನ್ಸ್: ಗ್ರೀನ್ 21 ಕೋಟಿ

ಇಂಡಿಯನ್ ಪ್ರೀಮಿಯರ್ ಲೀಗ್ 2026ರ (ಐಪಿಎಲ್ 2026) ಮಿನಿ ಹರಾಜಿನಲ್ಲಿ ಒಟ್ಟು 359 ಆಟಗಾರರ ಹೆಸರು ಕಾಣಿಸಿಕೊಳ್ಳಲಿದೆ. ಈ ಆಟಗಾರರಿಂದ ಪ್ರಮುಖರನ್ನು ಟಾಪ್-5 ಸೆಟ್‌ಗಳಲ್ಲಿ ವಿಂಗಡಿಸಲಾಗಿದೆ. ಪ್ರಮುಖ ಆಟಗಾರರ ಹರಾಜು ಪ್ರಕ್ರಿಯೆ ಮುಗಿದ ಬಳಿಕ ಅನ್‌ಕ್ಯಾಪ್ಡ್ ಪ್ಲೇಯರ್ಸ್‌ಗಳ ಹರಾಜು ನಡೆಯಲಿದೆ. ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-19ರ ಮಿನಿ ಹರಾಜು ಪ್ರಕ್ರಿಯೆ ಡಿಸೆಂಬರ್ 16 ರಂದು ನಡೆಯಲಿದೆ. ಅಬುಧಾಬಿಯಲ್ಲಿ ಇತಿಹಾದ್ ಅರೇನಾದಲ್ಲಿ ನಡೆಯಲಿರುವ ಈ ಹರಾಜಿಗೂ ಮುನ್ನ ಟೀಮ್ ಇಂಡಿಯಾದ ಮಾಜಿ ಆಟಗಾರ ರವಿಚಂದ್ರನ್ ಅಶ್ವಿನ್ ತಮ್ಮ ಯುಟ್ಯೂಬ್ ಚಾನೆಲ್‌ನಲ್ಲಿ ಮೋಕ್ ಆಕ್ಷನ್ ಆಯೋಜಿಸಿದ್ದಾರೆ. ಈ ಅಣುಕು ಹರಾಜಿನಲ್ಲಿ ಮೂವರು ಆಟಗಾರರು 15 ಕೋಟಿ ರೂ. ಗಿಂತ ದೊಡ್ಡ ಮೊತ್ತಕ್ಕೆ ಬಿಡ್ ಆಗಿರುವುದು ವಿಶೇಷ. ಮೂವರ ಮೇಲೆ ಕೋಟಿ ಸುರಿಮಳೆ: ಅಣುಕ್ಕ ಹರಾಜಿನಲ್ಲಿ ಆಸ್ಟ್ರೇಲಿಯಾದ ಆಲ್‌ರೌಂಡರ್ ಕ್ಯಾಮರೋನ್ ಗ್ರೀನ್ ಖರೀದಿಗೆ ಭರ್ಜರಿ ಪೈಪೋಟಿ ಕಂಡು ಬಂದಿದೆ. ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ಕೊಲ್ಕತ್ತಾ ನೈಟ್ ರೈಡರ್ಸ್ ಅಣುಕು ಪ್ರತಿನಿಧಿಗಳ ನಡುವೆ ನಡೆದ ಈ ಪೈಪೋಟಿಯಲ್ಲಿ ಅಂತಿಮವಾಗಿ ಗೆದ್ದಿದ್ದು ಸಿಎಸ್‌ಕೆ. ಚೆನ್ನೈ ಸೂಪರ್ ಕಿಂಗ್ಸ್ ಬರೋಬ್ಬರಿ 21 ಕೋಟಿ ರೂ. ವ್ಯಯಿಸುವ ಮೂಲಕ ಕ್ಯಾಮರೋನ್ ಗ್ರೀನ್ ಅವರನ್ನು ತಮ್ಮದಾಗಿಸಿಕೊಂಡಿದ್ದಾರೆ. ಇನ್ನು ಇಂಗ್ಲೆಂಡ್ ಆಲ್‌ರೌಂಡರ್ ಲಿಯಾಮ್ ಲಿವಿಂಗ್‌ಸ್ಟೋನ್ ಖರೀದಿಗೂ ಪ್ರಮುಖ ಫ್ರಾಂಚೈಸಿಗಳ ನಡುವೆ ಪೈಪಟಿ ಕಂಡು ಬಂದಿದೆ. ಅಂತಿಮವಾಗಿ ಕೊಲ್ಕತ್ತಾ ನೈಟ್ ರೈಡರ್ಸ್ 18.5 ಕೋಟಿ ರೂ.ಗೆ ಲಿವಿಂಗ್‌ಸ್ಟೋನ್‌ನನ್ನು ಖರೀದಿಸಿದೆ. ಹಾಗೆಯೇ ಭಾರತದ ಆಲ್‌ರೌಂಡರ್ ವೆಂಕಟೇಶ್ ಅಯ್ಯರ್ ಅವರ ಮೇಲೂ ಬಿಡ್ಡಿಂಗ್ ಸುರಿಮಳೆಯಾಗಿದೆ. ಇದಾಗ್ಯೂ 17.5 ಕೋಟಿ ರೂ.ಗೆ ವೆಂಕಿಯನ್ನು ಮರಳಿ ಪಡೆಯುವಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ಯಶಸ್ವಿಯಾಗಿದೆ. ಈ ಅಣುಕು ಪ್ರದರ್ಶನದ ಆಧಾರದ ಮೇಲೆ ನೋಡಿದರೆ ಈ ಬಾರಿಯ ಹರಾಜಿನಲ್ಲಿ ಈ ಮೂವರಿಗಾಗಿ ಭರ್ಜರಿ ಪೈಪೋಟಿ ಕಂಡು ಬರಲಿದೆ. ಐಪಿಎಲ್ 2025ರ ಮೆಗಾ ಹರಾಜಿನಲ್ಲಿ ಅನ್‌ಸೋಲ್ಡ್ ಆಗಿದ್ದ ಪೃಥ್ವಿ ಶಾ ಅವರ ಖರೀದಿಗೆ ಈ ಬಾರಿ ಫ್ರಾಂಚೈಸಿಗಳು ಆಸಕ್ತಿ ತೋರುವ ಸಾಧ್ಯತೆಯಿದೆ. ಏಕೆಂದರೆ ಅಣುಕು ಹರಾಜಿನಲ್ಲೇ ಪೃಥ್ವಿ ಅವರ ಖರೀದಿಗೆ ಕೆಲ ಫ್ರಾಂಚೈಸಿಗಳು ಮುಂದಾಗಿದೆ.

ಸೈಯದ್ ಮುಷ್ತಾಕ್ ಅಲಿ ಟ್ರೋಫಿಯಲ್ಲಿ ಫಿಕ್ಸಿಂಗ್

ಭ್ರಷ್ಟಾಚಾರ ಆರೋಪದ ಮೇಲೆ ಅಸ್ಸಾಂ ಕ್ರಿಕೆಟ್ ಅಸೋಸಿಯೇಷನ್ ನಾಲ್ವರು ಆಟಗಾರರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತುಗೊಳಿಸಿದೆ. ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿಯ (ಬಿಸಿಸಿಐ) ಭ್ರಷ್ಟಾಚಾರ ನಿಗ್ರಹ ಮತ್ತು ಭದ್ರತಾ ಘಟಕ (ಎಸಿಎಸ್‌ಯು) ಈ ಬಗ್ಗೆ ತನಿಖೆ ಆರಂಭಿಸಿದೆ. ಈ ಘಟನೆ ಡಿಸೆಂಬರ್ 12, 2025 ರಂದು ಅಸ್ಸಾಂ ಕ್ರಿಕೆಟ್ ಅಸೋಸಿಯೇಷನ್ ಈ ಕಠಿಣ ಕ್ರಮ ಕೈಗೊಂಡಾಗ ಬೆಳಕಿಗೆ ಬಂದಿತು. ಅಸ್ಸಾಂ ಕ್ರಿಕೆಟ್ ಅಸೋಸಿಯೇಷನ್, ಅಮಿತ್ ಸಿನ್ಹಾ, ಇಶಾನ್ ಅಹ್ಮದ್, ಅಮನ್ ತ್ರಿಪಾಠಿ ಮತ್ತು ಅಭಿಷೇಕ್ ಠಾಕೂರ್ ಎಂಬ ನಾಲ್ವರು ಆಟಗಾರರನ್ನು ಭ್ರಷ್ಟಾಚಾರದ ಆರೋಪದ ಮೇಲೆ ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತುಗೊಳಿಸಿದೆ. 2025 ರ ಸೈಯದ್ ಮುಷ್ತಾಕ್ ಅಲಿ ಟ್ರೋಫಿಯಲ್ಲಿ ಅಸ್ಸಾಂ ತಂಡದ ಕೆಲವು ಆಟಗಾರರ ಮೇಲೆ ಪ್ರಭಾವ ಬೀರಿದ ಮತ್ತು ಪ್ರಚೋದಿಸಿದ ಆರೋಪ ಅವರ ಮೇಲಿದೆ. ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿಯ (ಬಿಸಿಸಿಐ) ಭ್ರಷ್ಟಾಚಾರ ವಿರೋಧಿ ಮತ್ತು ಭದ್ರತಾ ಘಟಕ (ಎಸಿಎಸ್‌ಯು) ಈ ವಿಷಯದ ಬಗ್ಗೆ ತನಿಖೆಯನ್ನು ಪ್ರಾರಂಭಿಸಿದೆ ಮತ್ತು ಗುವಾಹಟಿ ಅಪರಾಧ ಶಾಖೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. ಸಂಘವು ಆಟಗಾರರ ವಿರುದ್ಧ ಕ್ರಿಮಿನಲ್ ಮೊಕದ್ದಮೆಗಳನ್ನು ಸಹ ಪ್ರಾರಂಭಿಸಿದೆ. ಅಮಾನತುಗೊಂಡಿರುವ ನಾಲ್ವರು ಆಟಗಾರರು ವಿವಿಧ ಹಂತಗಳಲ್ಲಿ ಅಸ್ಸಾಂ ಅನ್ನು ಪ್ರತಿನಿಧಿಸಿದ್ದಾರೆ. ಲಕ್ನೋದಲ್ಲಿ ನಡೆದ 2025 ರ ಸೈಯದ್ ಮುಷ್ತಾಕ್ ಅಲಿ ಟ್ರೋಫಿಯ ಸಂದರ್ಭದಲ್ಲಿ ಪ್ರಸ್ತುತ ಅಸ್ಸಾಂ ತಂಡದ ಆಟಗಾರರನ್ನು ಮ್ಯಾಚ್ ಫಿಕ್ಸಿಂಗ್ ಅಥವಾ ಇತರ ಭ್ರಷ್ಟ ಅಭ್